ಸಂಪುಟ: 14 Volume ಸಂಚಿಕೆ: 68 Issue ಪುಟಗಳು 08 Pages ಬುಧವಾರ 17 ಜೂನ್ 2026 ₹4 PRGINO.120927 (RNINO:KARKAN/2011/48371) BDR/054/2026-2027 www.mallammanudi.in mallammanudi@gmail.com 9448604450, 9845028349

ಬೀದರ | ಕಲ್ಬುರ್ಗಿ | ಯಾದಗಿರಿ | ರಾಯಚೂರು | ಕೊಪ್ಪಳ | ಬಳ್ಳಾರಿ | ಬಾಗಲಕೋಟೆ | ವಿಜಯನಗರ & ವಿಜಯಪುರ ಜಿಲ್ಲೆಗಳಲ್ಲಿ ಏಕಕಾಲಕ್ಕೆ ಪ್ರಕಟ

# ಮಲ್ಲಮ್ಮ ನುಡಿ

ಕನ್ನಡ ಕಿರಣ

Mallammanudi Regional News Paper

ಪ್ರಾದೇಶಿಕ ಕನ್ನಡ ದೈನಿಕ

ಸಂಪಾದಕರು: ರಮೇಶ ರೆಡ್ಡಿ

**ಬೆಳಗು**

ಮೌನ ಅನಂತದಷ್ಟು ಆಳವಾದದ್ದು.ಮಾತು ಕಾಲದಷ್ಟು ಕ್ಷಣಿಕ.

–ಥಾಮಸ್ ಕಾರ್ಲೈಲ್



ಸಿಎಂ ಡಿ ಕೆ ಶಿವಕುಮಾರ್ ಅವರು ನಿಕಟಪೂರ್ವ ಸಿಎಂ ಸಿದ್ದರಾಮಯ್ಯ ಅವರನ್ನು ಕಾವೇರಿ ನಿವಾಸದಲ್ಲಿ ಮಂಗಳವಾರ ಭೇಟಿ ಮಾಡಿ, ಸಮಾಲೋಚನೆ ನಡೆಸಿದರು. ಇದೊಂದು ಸೌಜನ್ಯದ ಭೇಟಿಯಾಗಿತ್ತು.



ಸಿಎಂ ಡಿ ಕೆ ಶಿವಕುಮಾರ್ ಅವರು ಘಟಿಕೋತ್ಸವದಲ್ಲಿ ವಿದ್ಯಾರ್ಥಿಗಳಿಗೆ ಪದವಿ ಪ್ರದಾನ ಮಾಡಿದರು.



ವೀರಶೈವ ಲಿಂಗಾಯತ ಮಹಾಸಭಾದ ನಿಕಟ ಪೂರ್ವ ಅಧ್ಯಕ್ಷರಾಗಿದ್ದ ಮಾಜಿ ಸಚಿವ ದಿವಂಗತ ಶಾಮನೂರು ಶಿವಶಂಕರಪ್ಪ ಅವರ ಜನ್ಮ ಜಯಂತಿಯಂದು ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವ ಈಶ್ವರ ಬಿ ಖಂಡ್ರೆ ಹಾಗೂ ಇತರರು ಮಹಾಸಭಾ ಕಚೇರಿಯಲ್ಲಿ ಗೌರವ ನಮನ ಸಲ್ಲಿಸಿದರು



ಹುಮನಾಬಾದ್: ಮಾಜಿ ಶಾಸಕ ಸುಭಾಷ ಕಲ್ಲೂರ ರವರ ಸುಪುತ್ರ ನಾಗೇಶ ಕಲ್ಲೂರ ರವರು ಇತ್ತೀಚೆಗೆ ನಿಧನಹೊಂದಿರುವುದರಿಂದ ಮಂಗಳವಾರ ಮಾಜಿ ಸಚಿವ ರಾಜಶೇಖರ ಪಾಟೀಲ ರವರು ಅವರ ಮನೆಗೆ ಭೇಟಿ ನೀಡಿ ಸ್ವಾಂತನ ಹೆಳಿದರು. ಈ ಸಂದರ್ಭದಲ್ಲಿ ಇತರರಿದ್ದರು.

## ಅರಣ್ಯ ಇಲಾಖೆಯ ಧೋರಣೆ ಖಂಡಿಸಿ ಧರಣಿ

• ಮಲ್ಲಮ್ಮ ನುಡಿ ವಾರ್ತೆ ಚಿಕ್ಕಬಳ್ಳಾಪುರ

ತಾಲೂಕಿನ ಸಿಂಗಾಟ ಕದಿರೇನಹಳ್ಳಿಯಲ್ಲಿ ಹಲವು ದಶಕಗಳಿಂದ ಉಳುಮೆ ಮಾಡಿಕೊಂಡು ಬರುತ್ತಿರುವ ದಲಿತರನ್ನು ಜಮೀನುಗಳಿಂದ ಒಕ್ಕಲೆಬ್ಬಿಸಲು ಅರಣ್ಯ ಇಲಾಖೆ ಪ್ರಯತ್ನಿಸಿದ್ದು ಇದಕ್ಕೆ ದಲಿತ ಸಂಘರ್ಷ ಸಮಿತಿ ತೀವ್ರ ಆಕ್ರೋಶ ವ್ಯಕ್ತಪಡಿಸಿದೆ. ದಸಂಸ ನೇತೃತ್ವದಲ್ಲಿ ನಮ್ಮ ಭೂಮಿ ನಮ್ಮ ಹಕ್ಕು ಘೋಷಣೆಯೊಂದಿಗೆ ಸಿಂಗಾಟ ಕದಿರೇನಹಳ್ಳಿಯಿಂದ ನಗರ ಹೊರವಲಯದ ಸೂಲಾಲಪ್ಪನದಿನ್ನೆಯ ಜಿಲ್ಲಾ ಅರಣ್ಯ ಉಪಸಂರಕ್ಷಣಾಧಿಕಾರಿ ಕಚೇರಿಯವರೆಗೆ ದಲಿತ ಸಮುದಾಯದವರು ಕಾಲ್ನಡಿಗೆ ಜಾಥಾ ನಡೆಸಿದರು.

ಜಿಲ್ಲೆಯ ಅರಣ್ಯ ಇಲಾಖೆ ಅಧಿಕಾರಿಗಳ ವಿರುದ್ಧ ಘೋಷಣೆಗಳನ್ನು ಕೂಗಿದರು.ನ್ಯಾಯ ದೊರಕಿಸಿಕೊಡುವಂತೆ ಆಗ್ರಹಿಸಿದರು. ಡಿಎಫ್‌ಒ ಕಚೇರಿ ಆವರಣದಲ್ಲಿ ದಲಿತ ಸಂಘಟನೆಗಳ ಮುಖಂಡರು ಅನಿರ್ದಿಷ್ಟಾವಧಿ ಧರಣಿ ನಡೆಸಲು ಮುಂದಾಗಿದ್ದು



ಅಲ್ಲಿ ಪೆಂಡಾಲ್ ಹಾಕಿದ್ದರು.ಆದರೆ ಅಧಿಕಾರಿಗಳು ಏಕಾಏಕಿ ಪೆಂಡಾಲ್ ತೆರವುಗೊಳಿಸಿದ್ದು ಡಿಎಸ್‌ಎಸ್ ಮುಖಂಡರನ್ನು ಕೆರಳಿಸಿತು. ಪ್ರತಿಭಟನಾಕಾರರು ಮತ್ತು ಅಧಿಕಾರಿಗಳ ನಡುವೆ ಮಾತಿನ ಚಕಮಕಿ ನಡೆಯಿತು.

ವಿಷಯ ತಿಳಿದು ಸ್ಥಳಕ್ಕೆ ಬಂದ ಎಸ್‌ಪಿ ಕುಶಲ್ ಚೌಕ್ಸೆ ಹಾಗೂ ಹಿರಿಯ ಅಧಿಕಾರಿಗಳು ದಲಿತ ಮುಖಂಡರ ಜೊತೆ ಮಾತುಕತೆ ನಡೆಸಿದರು. ಮಂಗಳವಾರ ಜೂ.16 ಮಧ್ಯಾಹ್ನ ಡಿಎಫ್‌ಒ ಕಚೇರಿಯಲ್ಲಿ ಅಧಿಕಾರಿಗಳು ಮತ್ತು ದಲಿತ ಮುಖಂಡರ ಸಭೆ ನಡೆಸಲಾಗುವುದು ಎಂದು ಭರವಸೆ ನೀಡಿದರು.

## ಕಲಾವಿದ ಸಿದ್ಧಾರ್ಥ ಅನುಮಾನಾಸ್ಪದ ಸಾವು

• ಮಲ್ಲಮ್ಮ ನುಡಿ ವಾರ್ತೆ ಹುಮನಾಬಾದ

ಜನಪ್ರಿಯ ಟಿವಿ ಕಾರ್ಯಕ್ರಮಗಳಾದ 'ಕಾಮಿಡಿ ಕಿಲಾಡಿಗಳು' ಮತ್ತು 'ಮಜಾ ಭಾರತ' ಖ್ಯಾತಿಯ ನಟ ಸಿದ್ಧಾರ್ಥ ಪರಸನೂರು ಅನುಮಾನಾಸ್ಪದವಾಗಿ ಸಾವನ್ನಪ್ಪಿದ್ದಾರೆ ಎಂದು ಪೊಲೀಸ್ ಮೂಲಗಳಿಂದ ತಿಳಿದುಬಂದಿದೆ.

ಹುಮ್ನಾಬಾದ್ ಪಟ್ಟಣದ ಟೀಚರ್ ಕಾಲೋನಿಯಲ್ಲಿ ವಾಸಿಸುತ್ತಿದ್ದ ಸಿದ್ಧಾರ್ಥ ಪರಸನೂರು ಅವರ ಶವ ಹುಮ್ನಾಬಾದ್ ಪಟ್ಟಣದ ಹೊರವಲಯದಲ್ಲಿನ ಖುಲ್ಲಾ ಜಾಗದಲ್ಲಿ ಪತ್ತೆಯಾಗಿದ್ದು, ಇದು ಹಲವು ಅನುಮಾನಗಳಿಗೆ ಕಾರಣವಾಗಿದೆ ಎಂದು ಮಾಧ್ಯಮಗಳು ವರದಿ ಮಾಡಿವೆ.

ಸಿದ್ಧಾರ್ಥ ಪರಸನೂರು ಅವರ ಮೃತ ದೇಹವನ್ನು ಗಮನಿಸಿದರೆ ಇದು ಸಹಜ ಸಾವಲ್ಲ ಎಂಬ ಅಭಿಪ್ರಾಯವನ್ನು ಸ್ಥಳೀಯರು ವ್ಯಕ್ತಪಡಿಸಿದ್ದಾರೆ.



ವಿದ್ಯುತ್ ಶಾಕ್ ತಗುಲಿ ಸಾವನ್ನಪ್ಪಿರಬಹುದು ಎಂದು ಮತ್ತೆ ಕೆಲವರು ಶಂಕಿಸಿದ್ದಾರೆ.

# ಕೈ ಮೂಲ ಖುಷಿ ವಲಸೆ ಬಿಸಿ

## ಮಾಜಿ ಸಿಎಂ ಸಿದ್ದರಾಮಯ್ಯ ಜೊತೆಗೆ ಗುರುತಿಸಿಕೊಂಡಿದ್ದ ಅಹಿಂದ ನಾಯಕರ ಹತಾಶೆ ಚರ್ಚೆಗೆ ಗ್ರಾಸ

• ಮಲ್ಲಮ್ಮ ನುಡಿ ವಾರ್ತೆ ಬೆಂಗಳೂರು

ರಾಜ್ಯಕಾಂಗ್ರೆಸ್‌ನಲ್ಲಿಇದೀಗ ಮೂಲ ಹಾಗೂವಲಸೆ ಕಾಂಗ್ರೆಸಿಗರ ಬಣ ಗೋಚರಿಸುತ್ತಿರುವುದು ಚರ್ಚೆಗೆ ಗ್ರಾಸವಾಗಿದೆ.

ಮಾಜಿ ಸಿಎಂ ಸಿದ್ದರಾಮಯ್ಯ ಜೊತೆಗೆ ಗುರುತಿಸಿಕೊಂಡಿದ್ದ ಅಹಿಂದ ನಾಯಕರು ಈಗ ಹತಾಶರಾಗಿರುವಂತೆ ಕಾಣುತ್ತಿದೆ. ಇದರಿಂದ, ಮೂಲ ಕಾಂಗ್ರೆಸ್ ನಾಯಕರು ತಮ್ಮ ಒಗ್ಗಟ್ಟು ತೋರುತ್ತಿದ್ದದ್ದಾರೆ. ಮಾತ್ರವಲ್ಲ, ಪಕ್ಷ ಮತ್ತು ಸರ್ಕಾರದ ಮೇಲೆ ಹಿಡಿತ ಸಾಧಿಸುತ್ತಿದ್ದಾರೆ.

**ಉಪಮುಖ್ಯಮಂತ್ರಿಸುಳಿವು:** ಸಿಎಂಡಿಕೆಶಿವಕುಮಾರ್ ಹಾಗೂ ಕೆಪಿಸಿಸಿ ಅಧ್ಯಕ್ಷ ಬಿಕೆ ಹರಿಪ್ರಸಾದ್ ಸೇರಿದಂತೆ ಮೂಲ ಕಾಂಗ್ರೆಸ್ ನಾಯಕರು ಆಡಳಿತ ನಡೆಸುತ್ತಿದ್ದಾರೆ ಎಂದು ಡಿಸಿಎಂ ಪರಮೇಶ್ವರ್‌ಹೇಳಿದ್ದರು. ಅಂದರೆ ಅವರು ಸಿಎಂಗೆ ಸಂಪೂರ್ಣ ಬೆಂಬಲ ನೀಡಿದ್ದ ಒಟ್ಟಾಗಿ ಕೆಲಸ ಮಾಡುವುದು ಮತ್ತು ಪಕ್ಷವನ್ನು ಬಲಪಡಿಸಿ 2028 ರಲ್ಲಿ ಮತ್ತೆ ಅಧಿಕಾರಕ್ಕೆ ತರುವುದು ಎಂದಿದ್ದಾರೆ.

**ಹರಿಪ್ರಸಾದ್ ಅಪ್ಪಟ ಕಾಂಗ್ರೆಸಿಗ:** ಸಿಎಂ ಮತ್ತುನಾನು ಮೂಲ ಕಾಂಗ್ರೆಸ್ ಕಾರ್ಯಕರ್ತರು ಎಂದು ಕೊರಟಗೆರೆಯ ನಡೆದ ಯಾಲಿಯಲ್ಲಿ ಹೇಳಿದ್ದರು. ಕೆಪಿಸಿಸಿ ಅಧ್ಯಕ್ಷರಾಗಿ ಅಧಿಕಾರ ವಹಿಸಿಕೊಂಡಿರುವ ಬಿಕೆ ಹರಿಪ್ರಸಾದ್ ಕೂಡ ಅಪ್ಪಟ ಕಾಂಗ್ರೆಸ್ಸಿಗ. ಜನಪರ ಆಡಳಿತ ನೀಡುವ ಮೂಲಕ ಪಕ್ಷವನ್ನು ಮತ್ತೆ ಅಧಿಕಾರಕ್ಕೆ ತರಲು ನಾವು ಬದ್ಧ ಎಂದಿದ್ದರು.

### ಬಯಸಿದ್ದು ಸಿಗಲಿಲ್ಲ..!

ಸಿದ್ದರಾಮಯ್ಯ ಪಾಳಯದಿಂದ ಸಂಭಾವ್ಯ ಸಿಎಂ ಎಂದು ಬಿಂಬಿಸಲ್ಪಟ್ಟಿದ್ದ ಪರಮೇಶ್ವರ್, ಡಿಸಿಎಂ ಹುದ್ದೆಯನ್ನು ಪಡೆಯುವಲ್ಲಿ ಯಶಸ್ವಿಯಾದರು. ಆದರೆ ಸಿದ್ದರಾಮಯ್ಯ ಆಪ್ತಸತೀಶ್ ಜಾರಕಿಹೊಳಿ, ಡಾ.ಎಚ್.ಸಿ. ಮಹದೇವಪ್ಪ ಮತ್ತು ಜಮೀರ್ ಅಹ್ಮದ್‌ಖಾನ್ ಅವರಿಗೆ ಅವರು ಬಯಸಿದ್ದನ್ನು ಪಡೆಯಲು ಸಾಧ್ಯವಾಗಲಿಲ್ಲ ಎಂದು ವ್ಯಾಖ್ಯಾನಿಸಲಾಗುತ್ತಿದೆ.

### ಸಚಿವ ಸ್ಥಾನಕ್ಕಾಗಿ ರ್ಯಾಲಿ

ಸತೀಶ್ ಕೆಪಿಸಿಸಿ ಅಧ್ಯಕ್ಷರಾಗುವ ವಿಶ್ವಾಸ ಹೊಂದಿದ್ದರು ಆದರೆ ತಮ್ಮ ಮೂಲ ಲೋಕೋಪಯೋಗಿ ಇಲಾಖೆಯ ಖಾತೆಗೆ ತೃಪ್ತಿಪಟ್ಟರು. ಮಹಾದೇವಪ್ಪ ಮತ್ತು ಜಮೀರ್ ಅವರಿಗೆ ಸ್ಥಾನ ಸಿಗಲಿಲ್ಲ, ಈಗ ಸಚಿವ ಸ್ಥಾನಕ್ಕಾಗಿ ಒತ್ತಾಯಿಸಿ ರ್ಯಾಲಿಗಳನ್ನು ಪ್ರಾಯೋಜಿಸುತ್ತಿದ್ದಾರೆ.ಆದರೆ ಸಂತೋಷ್‌ಲಾಡ್ ಶಿವಕುಮಾರ್ ಅವರೊಂದಿಗೆ ಹೊಂದಾಣಿಕೆ ಮಾಡಿಕೊಂಡಿದ್ದಾರೆ ಎನ್ನುತ್ತಿದೆ ಮೂಲ.



### ಬದಲಾದ ಮೂಲ ನಿಷ್ಠೆ

ಸತೀಶ್ ಜಾರಕಿಹೊಳಿ ಅಹಿಂದ ಪಡೆಯನ್ನು ಪುನರುಜ್ಜೀವನಗೊಳಿಸುವ ಭರವಸೆ ಹೊಂದಿದ್ದಾರೆ. ಸಿದ್ದರಾಮಯ್ಯ ಪಾಳಯದ ಹೆಚ್ಚಿನ ನಾಯಕರು ಅಸಮಾ ಧಾನಗೊಂಡು ತಮ್ಮ ನಿಷ್ಠೆ ಬದಲಾಯಿಸಿದ್ದಾರೆ. ಇದರಿಂದ ಯಾವುದೇ ಭಿನ್ನಾಭಿಪ್ರಾಯಗಳಿಲ್ಲದೆ ಶಿವಕುಮಾರ್ ಆಡಳಿತದ ಮೇಲೆ ಗಮನಹರಿಸಲು ಸಾಕಷ್ಟು ದಾರಿ ಮಾಡಿಕೊಟ್ಟಿದೆ.

### ಮತ್ತೆ ರೆಸಾರ್ಟ್ ರಾಜ್ಕೀಯ

ರಾಜ್ಯದಲ್ಲಿ ಮತ್ತೆ ರೆಸಾರ್ಟ್ ರಾಜ–ಕಾರಣ ಶುರುವಾಗಿದೆ. ವಿಧಾನ ಪರಿಷತ್ ಚುನಾವಣೆಯಲ್ಲಿ ಕ್ರಾಸ್‌ವೋಟಿಂಗ್ ಆತಂಕ ಎದುರಿಸುತ್ತಿರುವ ಕಾಂಗ್ರೆಸ್ ತನ್ನ ಮತಗಳ ರಕ್ಷಣೆಗಾಗಿ ರೆಸಾರ್ಟ್ ಮೊರೆಹೋಗಿದೆ. ಕಾಂಗ್ರೆಸ್ ತನ್ನ ಎಲ್ಲಾ ಶಾಸಕರನ್ನು ಮಂಗಳವಾರ ಬಿಡದಿಯ ವಂಡರ್ ಲಾ ರೆಸಾರ್ಟ್ ಗೆ ಶಿಫ್ಟ್ ಮಾಡಿದೆ. ಅಲ್ಲೇಢ ಕಾಂಗ್ರೆಸ್ ಶಾಸಕಾಂಗ ಪಕ್ಷದ ಸಭೆ ನಡೆಸಲು ನಿರ್ಧರಿಸಿದೆ.

## ದುರಹಂಕಾರ ಬಿಡಿ, ಲೆಕ್ಕ ಕೊಡಿ: ಗೃಹ ಸಚಿವ

• ಮಲ್ಲಮ್ಮ ನುಡಿ ವಾರ್ತೆ ನವದೆಹಲಿ

ರಾಷ್ಟ್ರೀಯ ಸ್ವಯಂಸೇವಕ ಸಂಘ ನೋಂದಣಿ ಮಾಡಿಸಬೇಕು ಮತ್ತು ಪಾರದರ್ಶಕವಾಗಿ ಲೆಕ್ಕ ಕೊಡಬೇಕು ಎಂದು ಮತ್ತೆ ಆಗ್ರಹಿಸಿರುವ ಗೃಹ ಸಚಿವ ಪ್ರಿಯಾಂಕ್ ಖರ್ಗೆ ಅವರು, ನಮ್ಮ ದೇಶದಲ್ಲಿ ಶ್ರೀರಾಮನೇ ಲೆಕ್ಕ ಕೊಡಬೇಕು. ಇನ್ನು ಶ್ರೀರಾಮನ ಹೆಸರಿನಲ್ಲಿ ರಾಜಕೀಯ ಮಾಡಿದವರು ಲೆಕ್ಕ ಕೊಡಬಾರದಾ? ಎಂದು ಮಂಗಳವಾರ ಪ್ರಶ್ನಿಸಿದ್ದಾರೆ.

ನಿನ್ನೆ ಆರ್‌ಎಸ್‌ಎಸ್ ನೋಂದಣಿ ಮತ್ತು ಹಣಕಾಸು ವಹಿವಾಟುಗಳ ಮಾಹಿತಿ ಕೋರಿ ಸಂಘದ ಮುಖ್ಯಸ್ಥ ಮೋಹನ್ ಭಾಗವತ್ ಅವರಿಗೆ ಪತ್ರ ಬರೆದ ಪ್ರಿಯಾಂಕ್ ಖರ್ಗೆ ವಿರುದ್ಧ ಪ್ರತಿಪಕ್ಷ ಬಿಜೆಪಿ ತೀವ್ರ ವಾಗ್ದಾಳಿ ನಡೆಸುತ್ತಿದೆ.

ಈ ಹಿನ್ನೆಲೆಯಲ್ಲಿ ಇಂದು ದೆಹಲಿಯಲ್ಲಿ ಸುದ್ದಿಗೋಷ್ಠಿ ಉದ್ದೇಶಿಸಿ ಮಾತನಾಡಿದ ಪ್ರಿಯಾಂಕ್ ಖರ್ಗೆ, ಆರ್‌ಎಸ್‌ಎಸ್ ನವರು 'ದುರಹಂಕಾರ ಬಿಟ್ಟು ಕಾನೂನು' ಪಾಲಿಸಬೇಕು ಎಂದು ಹೇಳಿದ್ದಾರೆ.



ಅಯೋಧ್ಯೆಯಲ್ಲಿ ರಾಮ ಮಂದಿರದ ದೇಣಿಗೆ ವಿಚಾರದಲ್ಲಿ ಹಗರಣ ನಡೆದಿದೆ. ನಮ್ಮ ದೇಶದಲ್ಲಿ ಶ್ರೀರಾಮನೇ ಲೆಕ್ಕ ಕೊಡುವ ಪರಿಸ್ಥಿತಿ ಇದೆ. ಇನ್ನೂ ಶ್ರೀರಾಮನ ಹೆಸರಿನಲ್ಲಿ ರಾಜಕೀಯ ಮಾಡಿದವರು ಯಾಕೆ ಲೆಕ್ಕ ಕೊಡಬಾರದು? ಎಂದು ಪ್ರಶ್ನಿಸಿದರು. ಬಿಜೆಪಿಯವರು ಆರ್‌ಎಸ್‌ಎಸ್‌ನ ಆಳು ಮಕ್ಕಳು, ಅವರು ವಿರೋಧ ಮಾಡೇ ಮಾಡ್ತಾರೆ. ಪಾರದರ್ಶಕತೆ ಕೇಳುವುದು ತಪ್ಪಾ? ಪತ್ರದಲ್ಲಿ ತಪ್ಪೇನಿದೆ ಹೇಳಿ? ನಿತ್ಯ ಸಾವಿರಾರು ಶಾಖಾ ಸಭೆಗಳನ್ನ ನಡೆಸಲಾಗುತ್ತಿದೆ. ಆರ್‌ಎಸ್‌ಎಸ್ ಮಾಹಿತಿ ನೀಡದಂತೆ ಲಕ್ಷಾಂತರ ಜನರನ್ನು ಸೇರಿಸಿ ಪಥಸಂಚಲನ ಮಾಡುತ್ತಿದ್ದಾರೆ. ಅಖಿಲ ಭಾರತ ಪ್ರತಿನಿಧಿ ಸಭಾ ಈ ಮಾಹಿತಿ ನೀಡಿದೆ. ಹೈಕೋರ್ಟ್ ಆದೇಶ ಉಲ್ಲಂಘಿಸಿ ಪಥಸಂಚಲನ ಮಾಡಿದರೆ ಪ್ರಶ್ನೆ ಮಾಡಬಾರದಾ? ಎಂದು ಕೇಳಿದರು.

# ಕಿಂಚಿತ್ತೂ ಕಾಳಜಿ ಇಲ್ಲದ ಚಿಂತಾಕಿ ಪಂಚಾಯತ್..!

• ಸತೀಶ್‌ಕುಮಾರ್‌ತುಪ್ಪದ, ಜಿಲ್ಲಾ ವರದಿಗಾರ ಬೀದರ್

ಔರಾದ್‌ತಾಲೂಕಿನ ಚಿಂತಾಕಿ ಗ್ರಾಮ ವಾರ್ಡ್ ನಂ. 1ರ ಬಡಾವಣೆಯ ಪರಿಸ್ಥಿತಿ ಆ ದೇವರಿಗೇ ಪ್ರೀತಿ ಎನ್ನುವಂತಾಗಿದೆ. ಇಲ್ಲಿ ಅಭಿವೃದ್ಧಿ ಅನ್ನೋ ಪದವೇ ನಾಚಿಕೆ ಪಡೋ ಸ್ಥಿತಿಯಲ್ಲಿದೆ. ಕಂಬಾರ ಪಾಂಡು ಅವರ ಮನೆಯಿಂದ ಹನುಮಾನ್ ಮಂದಿರದವರೆಗೆ ನಾಲೆಯ ನೀರು ರಸ್ತೆ ಮೇಲೇ ಹರಿದು, ಓಣಿಯೆಲ್ಲಾ ಕೇಸರು ಗದ್ದೆಯಾಗಿದೆ. ಜನರು ದಿನವೂ ಕಾಲಿಟ್ಟರೆ ಜಾರೋ ಭಯ, ಹೊರಬಂದ್ರೆ ದುರ್ವಾಸನೆ ಸಹಿಸಲಾಗದ ಸ್ಥಿತಿಯಲ್ಲಿ ಬದುಕು ಸಾಗಿಸುತ್ತಿದ್ದಾರೆ.

**ಮಕ್ಕಳು ಶಾಲೆಗೆ ಹೋಗೋದು ಕಷ್ಟ:** ಮಳೆಗಾಲ ಇನ್ನೂ ಸರಿಯಾಗಿ ಶುರುವಾಗಿಲ್ಲ, ಈಗಲೇ ಓಣಿಯ ಗತಿ ಹೀಗಿದ್ದರೆ ಮಳೆ ಬಂದ್ರೆ ಪರಿಸ್ಥಿತಿ ಹೇಗಾಗ್ಬೋದು ಅಂತ ಜನರಲ್ಲಿ ಭಯ ಮನೆ ಮಾಡಿದೆ. ಮಳೆ ಜೋರಾಗಿ ಬಂದ್ರೆ ಮನೆ ಬಾಗಿಲೇ ದಾಟೋಕಾಗಲ್ಲ. ಮಕ್ಕಳನ್ನ ಶಾಲೆಗೆ ಕಳಿಸೋದು ಕೂಡ ಕಷ್ಟ ಆಗ್ತದೆ ಅಂತ ಅಲವತ್ತುಕೊಳ್ಳುತ್ತಾರೆ ಓಣಿಯ ಮಹಿಳೆಯರು.

**ಸಂಜೆ ಆದ್ಮೇಲೆ ಸೊಳ್ಳೆ ಕಾಟ:** ಈ ರಸ್ತೆಯಲ್ಲೇ ಶಾಲಾ ಮಕ್ಕಳು ಪ್ರತಿದಿನ ಓಡಾಡ್ತಾರೆ. ವೃದ್ಧರು ಕೈಯಲ್ಲಿ ಕಟ್ಟಿ ಹಿಡ್ಕೊಂಡು ಹೆಜ್ಜೆ ಇಡ್ತಿದ್ದಾರೆ. ಗರ್ಭಿಣಿಯರು, ಮಹಿಳೆಯರು ಜೀವ ಭಯದಲ್ಲೇ ಸಂಚಾರ ಮಾಡ್ತಿದ್ದಾರೆ. ರಸ್ತೆ ಪೂರ್ತಿ ಹರಡಿರುವ ಕೊಳಚೆ ನೀರಿನಿಂದ ದುರ್ವಾಸನೆ ಮೂಗಿಗೆ ಬಡಿದರೆ ತಲೆ ಸುತ್ತೋ ಪರಿಸ್ಥಿತಿ ಇದೆ. ಸಂಜೆ ಆದ್ಮೇಲೆ ಸೊಳ್ಳೆಗಳ ಕಾಟ ಹೇಳತೀರದಾಗಿದೆ ಎಂದು ಗ್ರಾಮಸ್ಥರು ಅಳಲು ತೋಡಿಕೊಂಡಿದ್ದಾರೆ.




### ಅಧಿಕಾರಿಗಳು ಡೋಂಟ್ ಕೇರ್: ಗ್ರಾಮಸ್ಥರು

ಗ್ರಾಮ ಪಂಚಾಯತಿಗೆ ಎಷ್ಟೋ ಸಲ ಹೇಳಿದ್ವಿ. ಅಧಿಕಾರಿಗಳನ್ನ ಕರೆದ್ವಿ. ಆದ್ರೆ ಯಾರೂ ಬರಲ್ಲ, ಬಂದು ಕಣ್ಣಾರೆ ನೋಡೋದಿಲ್ಲ. ಕಾಗದದಲ್ಲಿ ಮಾತ್ರ ಅಭಿವೃದ್ಧಿ ಕೆಲಸ ನಡೆಯುತ್ತೆ, ನಮ್ಮ ಓಣಿಗೆ ಮಾತ್ರ ಯಾರಿಗೂ ಕಾಳಜಿ ಇಲ್ಲ. ಚುನಾವಣೆ ಬಂದಾಗ ಮಾತ್ರ ಮತ ಕೇಳೋಕೆ ಬರುತ್ತಾರೆ ಎಂದು ಗ್ರಾಮದ ಯುವಕರು ತೀವ್ರ ಆಕ್ರೋಶ ವ್ಯಕ್ತಪಡಿಸಿದ್ದಾರೆ.

ಚಿಂತಾಕಿ ಗ್ರಾ.ಪಂ. ವ್ಯಾಪ್ತಿಯ ಒಂದು ಬಡಾವಣೆಯಲ್ಲಿ ರಸ್ತೆ ಹಾಳಾಗಿ, ನಾಲೆಯ ನೀರು ರಸ್ತೆ ಮೇಲೆ ಹರಿಯುತ್ತಿರುವ ಸಮಸ್ಯೆ ಈಗಾಗಲೇ ನನ್ನ ಗಮನಕ್ಕೆ ಬಂದಿದೆ. ಈ ಕುರಿತು ಅಭಿವೃದ್ಧಿ ಅಧಿಕಾರಿಗಳೊಂದಿಗೆ ಮಾತನಾಡಿ, ಶೀಘ್ರದಲ್ಲೇ ಸಮಸ್ಯೆ ಬಗೆಹರಿಸಲು ಅಗತ್ಯ ಕ್ರಮ ಕೈಗೊಳ್ಳುವಂತೆ ಸೂಚಿಸುತ್ತೇನೆ ಎಂದು ತಿಳಿಸಿದ್ದಾರೆ.

–ಕಿರಣ ಪಾಟೀಲ್, ಇಒ, ತಾಲೂಕ ಪಂಚಾಯತ್ ಔರಾದ್

ಚಿಂತಾಕಿ ಗ್ರಾ.ಪಂ. ವ್ಯಾಪ್ತಿಯ ಒಂದು ಬಡಾವಣೆಯಲ್ಲಿ ಮನೆ ಕಟ್ಟಡ ಕಾಮಗಾರಿ ನಡೆಯುತ್ತಿರುವ ಹಿನ್ನೆಲೆಯಲ್ಲಿ ನಾಲೆಯ ನೀರು ರಸ್ತೆ ಮೇಲೆ ಹರಿಯುತ್ತಿರುವ ಸಮಸ್ಯೆ ಉಂಟಾಗಿದೆ. ಸದ್ಯಕ್ಕೆ ಅನುದಾನದ ಕೊರತೆ ಇದ್ದರೂ, ಆದಷ್ಟು ಬೇಗ ಸಮಸ್ಯೆ ಬಗೆಹರಿಸಲು ಕ್ರಮ ಕೈಗೊಳ್ಳಲಾಗುವುದು ಎಂದು ತಿಳಿಸಿದ್ದಾರೆ.

–ನಿರ್ಮಲಾ, ಅಭಿವೃದ್ಧಿ ಅಧಿಕಾರಿ, ಚಿಂತಾಕಿ ಗ್ರಾ.ಪಂ.

### ಇದು ರಸ್ತೆನಾ..ನಾಲೆಯೊ..?

ಒಮ್ಮೆ ಈ ರಸ್ತೆಗೆ ಕಾಲಿಟ್ಟರೆ ಸಾಕು, ಚಪ್ಪಲಿ ಕೇಸರಿನಲ್ಲಿ ಸಿಲುಕೋದು ಖಚಿತ. ಬೈಕ್ ಓಡಿಸೋದು ದೂರದ ಮಾತು, ನಡೆದುಕೊಂಡು ಹೋಗೋದೇ ಸಾಹಸ. ಸ್ವಲ್ಪ ಜಾರಿದ್ರೇ ಸಾಕು, ಮಣ್ಣಿನೊಳಗೆ ಬಿದ್ದು ಗಾಯವಾಗೋ ಪರಿಸ್ಥಿತಿ..! ಇದು ರಸ್ತೆನಾ ಸಾರ್? ಇಲ್ಲ ನಾಲೆನಾ?? ನಮಗೇ ಗೊತ್ತಾಗ್ತಿಲ್ಲ! ಅಂತ ಸ್ಥಳೀಯರು ಬೇಸರ ಹೊರಹಾಕ್ತಿದ್ದಾರೆ.

ರಸ್ತೆ ಮೇಲೆ ನಿಂತಿರುವ ಈ ಕಲುಷಿತ ನೀರಿನಿಂದ ಡೆಂಗ್ಯೂ, ಮಲೇರಿಯಾ ಸೇರಿದಂತೆ ಸಾಂಕ್ರಾಮಿಕ ರೋಗಗಳು ಹರಡುವ ಭೀತಿ ದಿನೇದಿನೇ ಹೆಚ್ಚಾಗುತ್ತಿದೆ. ಚಿಕ್ಕ ಮಕ್ಕಳು ಇದೇ ರಸ್ತೆ ಮೂಲಕ ಶಾಲೆಗೆ ಹೋಗ್ತಾರೆ. ಯಾರಿಗಾದರೂ ಅನಾರೋಗ್ಯ ಬಂದ್ಮೇಲೆ ಅಧಿಕಾರಿಗಳು ಎಚ್ಚೆತ್ತು–ಕೊಂಡ್ರೆ ಏನು ಪ್ರಯೋಜನ?

–ಕಿರಣ ಯುವ ಮುಖಂಡ, ಚಿಂತಾಕಿ ಗ್ರಾಮ

## ಸೈಲೆಂಟ್ ಮೋಡ್‌ನಿಂದ ಯಾವಾಗ ಹೊರಬರುತ್ತೀರಿ? ಯಾಕೀ ದಿವ್ಯ ಮೌನ?: ಸಿಎಂ ವಿಜಯ್‌ಗೆ ಸ್ಟಾಲಿನ್ ಪ್ರಶ್ನೆ

# ಜಿಲ್ಲೆಯಲ್ಲಿ ಬರಗಾಲದ ಛಾಯೆ: ಆತಂಕದಲ್ಲಿ ರೈತರು

ಬೀದರ್ ಜಿಲ್ಲೆಯ ಕೃಷಿ ಪ್ರಧಾನ ಪ್ರದೇಶಗಳಲ್ಲಿ ಈ ಬಾರಿ ಸಮರ್ಪಕ ಮಳೆಯ ಕೊರತೆಯಿಂದ ಬರಗಾಲದ ಛಾಯೆ ಆವರಿಸಿದ್ದು, ರೈತರು ಆತಂಕಕ್ಕೆ ಒಳಗಾಗಿದ್ದಾರೆ. ಮುಂಗಾರು ಮಳೆ ತಡವಾಗುವುದು ಹಾಗೂ ಮಳೆಯ ಪ್ರಮಾಣ ಕಡಿಮೆಯಾಗುತ್ತಿರುವುದು ಕೃಷಿ ಚಟುವಟಿಕೆಗಳ ಮೇಲೆ ಪ್ರತಿಕೂಲ ಪರಿಣಾಮ ಬೀರುತ್ತಿದೆ.

## ಸಂಪಾದಕೀಯ



**ಮಾಣಿಕರೆಡ್ಡಿ ಕೌಡಾಳೆ**
**ಪ್ರಧಾನ ಸಂಪಾದಕರು**
**ಮೊ: 9845028349**

ಈ ಜಿಲ್ಲೆಯ ಬಹುತೇಕ ರೈತರು ಮಳೆ ಆಧಾರಿತ ಕೃಷಿಯನ್ನೇ ನಂಬಿಕೊಂಡಿದ್ದು, ಬೀಜ ಬಿತ್ತನೆ ಮಾಡಿದ ಬೆಳೆಗಳು ನೀರಿನ ಕೊರತೆಯಿಂದ ಒಣಗುವ ಪರಿಸ್ಥಿತಿ ಎದುರಿಸುತ್ತಿವೆ. ಈಗಾಗಲೇ ಆರ್ಥಿಕ ಸಂಕಷ್ಟದಲ್ಲಿರುವ ರೈತರಿಗೆ ಈ ಬರದ ಭೀತಿ ಮತ್ತಷ್ಟು ನೋವನ್ನುಂಟು ಮಾಡುತ್ತಿದೆ.

ರಾಜ್ಯ ಸರ್ಕಾರ ಮತ್ತು ಸಂಬಂಧಪಟ್ಟ ಅಧಿಕಾರಿಗಳು ತಕ್ಷಣ ರೈತರ ಪರಿಸ್ಥಿತಿಯನ್ನು ಅಧ್ಯಯನ ಮಾಡಿ ಅಗತ್ಯ ಕ್ರಮಗಳನ್ನು ಕೈಗೊಳ್ಳಬೇಕು. ಬೆಳೆ ಹಾನಿಯಾದ ಪ್ರದೇಶಗಳ ಸಮೀಕ್ಷೆ ನಡೆಸಿ ಪರಿಹಾರ ನೀಡುವ ಜೊತೆಗೆ, ರೈತರಿಗೆ ಬೀಜ, ಗೊಬ್ಬರ ಮತ್ತು ಇತರೆ ಕೃಷಿ ನೆರವು ಒದಗಿಸಬೇಕು. ಜಲಾಶಯಗಳ ಸಮರ್ಪಕ ನಿರ್ವಹಣೆ ಹಾಗೂ ಕುಡಿಯುವ ನೀರಿನ ಸಮಸ್ಯೆ ಉಂಟಾಗದಂತೆ ಮುಂಜಾಗ್ರತಾ ಕ್ರಮಗಳನ್ನು ಕೈಗೊಳ್ಳುವುದು ಅಗತ್ಯವಾಗಿದೆ.

ರೈತ ದೇಶದ ಬೆನ್ನೆಲುಬು ಎಂಬ ಮಾತು ಕೇವಲ ಘೋಷಣೆಯಾಗದೆ, ಸಂಕಷ್ಟದ ಸಮಯದಲ್ಲಿ ಅವರಿಗೆ ನೆರವಾಗುವ ಮೂಲಕ ಸಾರ್ಥಕವಾಗಬೇಕು. ಬೀದರ್ ಜಿಲ್ಲೆಯ ರೈತರ ಕಷ್ಟಕ್ಕೆ ಸರ್ಕಾರ ಸ್ಪಂದಿಸಿ, ತಕ್ಷಣ ಪರಿಹಾರ ಕ್ರಮಗಳನ್ನು ಜಾರಿಗೊಳಿಸಬೇಕು. ಆಗ ಮಾತ್ರ ರೈತರಲ್ಲಿ ವಿಶ್ವಾಸ ಮೂಡಿಸಿ ಕೃಷಿ ಕ್ಷೇತ್ರವನ್ನು ಉಳಿಸಲು ಸಾಧ್ಯವಾಗುತ್ತದೆ.



# ಕಾನೂನಿನ ಮೊರೆ ಯಾಕೆ ಹೋಗಿಲ್ಲ: ಛಲವಾದಿ ಪ್ರಶ್ನೆ



**ಬೆಂಗಳೂರು:** 1948ರಲ್ಲಿ ಮಹಾತ್ಮ ಗಾಂಧಿಯವರು ಕಾಂಗ್ರೆಸ್ ಪಕ್ಷದ ವಿಸರ್ಜನೆ ಮಾಡಲು ಹೇಳಿದ್ದರು. ಕಾಂಗ್ರೆಸ್ ಹೆಸರು ಬದಲಿಸಿ ಲೋಕ ಸೇವಕ ಸಂಘ ಎಂಬ ಹೆಸರು ಇಡಲು, ಮಹಿಳೆಯರು, ಹರಿಜನರು, ಗೋವುಗಳ ರಕ್ಷಣೆಗೆ ನಿಲ್ಲಲು ಹೇಳಿದ್ದರಲ್ಲವೇ? ಈಗ ನಿಮ್ಮ ತಂದೆಯವರೇ ಎಐಸಿಸಿ ಅಧ್ಯಕ್ಷರಿದ್ದಾರೆ. ಮಹಾತ್ಮ ಗಾಂಧಿಯವರ ಆಶಯಕ್ಕೆ ಅನುಗುಣವಾಗಿ ಕಾಂಗ್ರೆಸ್ಸನ್ನು ವಿಸರ್ಜಿಸುವುದು ಯಾವಾಗ ಎಂದು ಯಾಕೆ ಇನ್ನೂ ನೀವು ಪತ್ರ ಬರೆದಿಲ್ಲ ಎಂದು ವಿಧಾನ ಪರಿಷತ್ತಿನ ವಿರೋಧಪಕ್ಷದ ನಾಯಕ ಛಲವಾದಿ ನಾರಾಯಣಸ್ವಾಮಿ ಅವರು ಪ್ರಿಯಾಂಕ್ ಖರ್ಗೆಯವರನ್ನು ಪ್ರಶ್ನಿಸಿದ್ದಾರೆ.

ಇಲ್ಲಿ ಇಂದು ಮಾಧ್ಯಮಗಳೊಂದಿಗೆ ಮಾತನಾಡಿದ ಅವರು, ಪ್ರಶ್ನೆಗೆ ಉತ್ತರ ನೀಡಿದರು. ಪ್ರಿಯಾಂಕ್ ಖರ್ಗೆಯವರ ಪ್ರಶ್ನೆಗೆ ಮೋಹನ್ ಭಾಗವತ್ ಅವರು ಈಗಾಗಲೇ ಉತ್ತರ ಕೊಟ್ಟಿದ್ದಾರೆ. ಅವರಿಗೆ ಉತ್ತರ ಸಿಕ್ಕಿದೆ ಎಂದುಕೊಳ್ಳುವೆ. ಪ್ರಶ್ನೆ ಕೇಳಿದ ಕಾಂಗ್ರೆಸ್ಸಿನವರು ಗಾಂಪರ ದೊರೆಗಳಾಗಿದ್ದರು ಎಂದು ನುಡಿದರು. ಮೋಹನ್ ಭಾಗವತ್ ಅವರು ಈಗಾಗಲೇ ಉತ್ತರ ಕೊಟ್ಟಿದ್ದಾರೆ. ದೇಶದ ಕಾನೂನು ಒಂದೇ ಎನ್ನುವಿರಲ್ಲವೇ? ಹಾಗಿದ್ದರೆ ನೀವು ಕಾನೂನಿನ ಮೊರೆ ಯಾಕೆ ಹೋಗಿಲ್ಲ ಎಂದು ಕೇಳಿದರು. ಆರೆಸ್ಸೆಸ್ ಕುರಿತು ಪ್ರಶ್ನಿಸಿದ ಗಾಂಪರ ದೊರೆಗಳ ಪಟ್ಟಿಗೆ ಪ್ರಿಯಾಂಕ್ ಖರ್ಗೆಯವರೂ ಸೇರಿ-ಕೊಂಡಿದ್ದಾರೆ ಎಂದು ತಿಳಿಸಿದರು.

ಮೀಡಿಯ- ಪತ್ರಿಕೆಗಳಲ್ಲಿ ಪ್ರಮುಖವಾಗಿ ಪ್ರಕಟಗೊಂಡು ನನ್ನನ್ನು ಮೇಧಾವಿ ಎಂದು ಜನರು ಅಂದುಕೊಳ್ಳಬೇಕು. ಇಷ್ಟೇನಾ ನಿಮ್ಮದು ಎಂದು ಪ್ರಶ್ನಿಸಿದರು. ಎಲ್ಲಕ್ಕಿಂತ ಮಿಗಿಲಾಗಿ ನೀವು ಪರಿಶಿಷ್ಟ ಜಾತಿ, ವರ್ಗದಿಂದ ಬಂದ ವ್ಯಕ್ತಿ. ತಳ ಸಮುದಾಯಗಳಿಗೆ ನ್ಯಾಯ ಕೊಟ್ಟು, ಅನ್ಯಾಯ ಸರಿಪಡಿಸಬೇಕೆಂದು ಬಾಬಾಸಾಹೇಬ ಅಂಬೇಡ್ಕರರು ದೊಡ್ಡ ಹೋರಾಟ ಮಾಡಿದ್ದರು. ಅಲ್ಲದೇ ಆ ಜನರ ಸಮಸ್ಯೆಗೆ ಪರಿಹಾರ ಕೊಡಲಿ ಎಂದು ಮೀಸಲಾತಿಯನ್ನು ಕೊಡಿಸಿದರು. ಈಗ ಆರೆಸ್ಸೆಸ್ಸಿನಿಂದ ಯಾವ ದಲಿತರಿಗೆ ಅನ್ಯಾಯವಾಗಿದೆ ಎಂದು ಪ್ರಶ್ನೆ ಮಾಡಿದರು. ಆರೆಸ್ಸೆಸ್ ಅನ್ನು ಇದೆಲ್ಲ ಕೇಳುವಾಗ ದಲಿತರಿಗೆ ಆಗುವ ಒಳಿತೇನು ಎಂದು ಕೇಳಿದರು.

**ಮೀಸಲಾತಿ ಗೊಂದಲದಿಂದ ಜನರಿಗೆ ಅನ್ಯಾಯ..**

ಮೀಸಲಾತಿ ಗೊಂದಲದಿಂದ ಜನರಿಗೆ ಅನ್ಯಾಯ ಆಗುತ್ತಿದೆ. ಎಲ್ಲೆಡೆ ಕೊಲೆ, ಸುಲಿಗೆ ಆಗುತ್ತಿದೆ. ದಲಿತರ ಮೇಲೆ ಅತ್ಯಾಚಾರಗಳಾಗುತ್ತಿದೆ. ನೀವು ಸಚಿವರಾದ ಬಳಿಕ ಹುಬ್ಬಳ್ಳಿ- ಧಾರವಾಡದಲ್ಲಿ ಅತ್ಯಾಚಾರ-ಕ್ಕೆ ಒಳಗಾಗಿ ಒಬ್ಬ ಹೆಣ್ಮಗಳು ತೀರಿಕೊಂಡಿದ್ದಾರೆ. ಕಾನೂನು-ಸುವ್ಯವಸ್ಥೆ ಸಂಪೂರ್ಣ ಕೆಟ್ಟಿದೆ. ಇದರ ಬಗ್ಗೆ ನಿಮ್ಮ ಉತ್ತರ ಏನು ಎಂದು ಕೇಳಿದರು. ನೀವು ಪರಿಶಿಷ್ಟ ಜಾತಿ, ವರ್ಗಗಳ ಕೋಟಾದಡಿ ಸಚಿವರಾದುದು ದಲಿತರ ಸಮಸ್ಯೆ ಪರಿಹಾರಕ್ಕೆ ಅಲ್ಲವೇ ಎಂದು ಪ್ರಶ್ನೆ ಮಾಡಿದರು.

# ನಿಯಮ ಉಲ್ಲಂಘಿಸುವವರ ಪರವಾನಗಿ ರದ್ದು: ಸೂಚನೆ

• **ಮಲ್ಲಮ್ಮ ನುಡಿ ವಾರ್ತೆ ಬೀದರ್**

"ಮುಂಗಾರು ಪ್ರಾರಂಭವಾಗಿದ್ದರೂ ಜಿಲ್ಲೆಯಲ್ಲಿ ಇನ್ನೂ ಸಮರ್ಪಕ ಮಳೆಯಾಗಿಲ್ಲ. ಇದುವರೆಗೆ ಅತಿ ಕಡಿಮೆ ಪ್ರಮಾಣದಲ್ಲಿ ಮಾತ್ರ ಬಿತ್ತಣಿಕೆ ನಡೆದಿದ್ದು, ರೈತರು ಮಳೆಯ ನಿರೀಕ್ಷೆಯಲ್ಲಿದ್ದಾರೆ. ಉತ್ತಮ ಮಳೆಯಾಗಲೆಂದು ನಾವೂ ಸಹ ಪ್ರಾರ್ಥಿಸುತ್ತಿದ್ದೇವೆ" ಎಂದು ಗ್ರಾಮೀಣಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರಾದ ಶ್ರೀ ಈಶ್ವರ ಬಿ.ಖಂಡ್ರೆ ಅವರು ಹೇಳಿದರು.



ಬೀದರ್ ನಗರದ ಜಿಲ್ಲಾ ಪಂಚಾಯತ್ ಸಭಾಂಗಣದಲ್ಲಿ ಜೂ.15ರ ಸೋಮವಾರ ರಂದು ಮುಂಗಾರು ಬಿತ್ತನೆ ಬೀಜ ಮತ್ತು ರಸಗೊಬ್ಬರ ವಿತರಣೆ, ಪ್ರಸ್ತುತ ಜಿಲ್ಲೆಯಲ್ಲಿ ಜನ ಜಾನುವಾರು ಕುಡಿಯುವ ನೀರಿನ ವ್ಯವಸ್ಥೆ, ಜಿಲ್ಲೆಯ ಇತರೆ ಪ್ರಮುಖ ವಿಷಯಗಳ ಕುರಿತು ವಿವಿಧ ಇಲಾಖೆಗಳ ಅಧಿಕಾರಿಗಳೊಂದಿಗೆ ತುರ್ತು ಪ್ರಗತಿ ಪರಿಶೀಲನಾ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಮುಂಗಾರು ಪರಿಸ್ಥಿತಿ, ಕೃಷಿ ಚಟುವಟಿಕೆಗಳು, ರಸಗೊಬ್ಬರ ಮತ್ತು ಬಿತ್ತನೆ ಬೀಜ ಲಭ್ಯತೆ, ಜಲ ಜೀವನ್ ಮಿಷನ್ ಕಾಮಗಾರಿಗಳು ಹಾಗೂ ರಸ್ತೆ ಅಭಿವೃದ್ಧಿ ಯೋಜನೆಗಳ ಕುರಿತು ಸಚಿವರು ಸವಿಸ್ತಾರವಾಗಿ ಪರಿಶೀಲನೆ ನಡೆಸಿದರು.

ಈ ವೇಳೆ ಮಾತನಾಡಿದ ಸಚಿವರು, ಜಿಲ್ಲೆಯಲ್ಲಿ ಬಿತ್ತನೆ ಬೀಜಗಳ ಕೊರತೆ ಇಲ್ಲದೆ ಈಗಾಗಲೇ ಬಹುತೇಕ ರೈತರಿಗೆ ವಿತರಣೆ ಮಾಡಲಾಗಿದೆ. ಆದರೆ ರಸಗೊಬ್ಬರ ಕೊರತೆ ಉಂಟಾಗಿರುವುದರ ಬಗ್ಗೆ ಸಚಿವರು ತೀವ್ರ ಅಸಮಾಧಾನ ವ್ಯಕ್ತಪಡಿಸಿದರು.

ಕಾಳಸಂತೆಯಲ್ಲಿ ರಸಗೊಬ್ಬರ ಮಾರಾಟ ಹಾಗೂ ಖಾಸಗಿ ಮಾರಾಟಗಾರರು ಪ್ರತಿದಿನದ ಮಾರಾಟದ ಮಾಹಿತಿಯನ್ನು ಆನ್‌ಲೈನ್‌ನಲ್ಲಿ ನವೀಕರಿಸದಿರುವುದರಿಂದ ಜಿಲ್ಲೆಗೆ ಸಮರ್ಪಕ ಪೂರೈಕೆ ಆಗುತ್ತಿಲ್ಲ ಎಂದು ಸಚಿವರು ತಿಳಿಸಿದರು. ತಕ್ಷಣದಿಂದಲೇ ಎಲ್ಲಾ ಖಾಸಗಿ ಮಾರಾಟಗಾರರು ದಿನನಿತ್ಯದ ಮಾರಾಟ ಮಾಹಿತಿಯನ್ನು ಕಡ್ಡಾಯವಾಗಿ ನವೀಕರಿಸಬೇಕು. ನಿಯಮ ಉಲ್ಲಂಘಿಸುವ ಮಾರಾಟಗಾರರ ಪರವಾನಗಿ ರದ್ದುಪಡಿಸುವಂತೆ ಅಧಿಕಾರಿಗಳಿಗೆ ಕಟ್ಟುನಿಟ್ಟಿನ ಸೂಚನೆ ನೀಡಿದರು.

ಜಲ ಜೀವನ್ ಮಿಷನ್ ಕಾಮಗಾರಿಗಳ ಪ್ರಗತಿ ತೃಪ್ತಿಕರವಾಗಿಲ್ಲ ಎಂದು ಅಸಮಾಧಾನ ವ್ಯಕ್ತಪಡಿಸಿದ ಸಚಿವರು, ಇನ್ನೂ ಅನೇಕ ಗ್ರಾಮಗಳಿಗೆ ಶುದ್ಧ ಕುಡಿಯುವ ನೀರು ತಲುಪಿಲ್ಲ ಎಂದು ಅಧಿಕಾರಿಗಳನ್ನು ತರಾಟೆಗೆ ತೆಗೆದುಕೊಂಡರು. ಬಾಕಿ ಇರುವ ಎಲ್ಲಾ ಕಾಮಗಾರಿಗಳನ್ನು ಅತ್ಯಂತ ಆದ್ಯತೆಯ ಮೇರೆಗೆ ಮುಂದಿನ ಎರಡು ತಿಂಗಳೊಳಗೆ ಪೂರ್ಣಗೊಳಿಸಬೇಕು. ಜಿಲ್ಲೆಯ ಪ್ರತಿಯೊಂದು ಗ್ರಾಮಕ್ಕೂ ಶುದ್ಧ ಕುಡಿಯುವ ನೀರು ತಲುಪುವಂತೆ ಖಚಿತಪಡಿಸಬೇಕು ಎಂದು ಸೂಚಿಸಿದರು.

"ಯಾವುದೇ ಕಾರಣಕ್ಕೂ ಯಾವುದೇ ಹಳ್ಳಿಗಳಿಗೆ ಕಲುಷಿತ ನೀರು ಪೂರೈಕೆಯಾಗಬಾರದು. ಈ ಕುರಿತು ಅಧಿಕಾರಿಗಳು ವಿಶೇಷ ನಿಗಾ ವಹಿಸಬೇಕು. ಶುದ್ಧ ಕುಡಿಯುವ ನೀರು ಪೂರೈಕೆಯಲ್ಲಿ ನಿರ್ಲಕ್ಷ್ಯ ಕಂಡುಬಂದಲ್ಲಿ ಸಂಬಂಧಪಟ್ಟ ಅಧಿಕಾರಿಗಳನ್ನೇ ನೇರ ಹೊಣೆಗಾರರನ್ನಾಗಿ ಪರಿಗಣಿಸಲಾಗುವುದು" ಎಂದು ಸಚಿವರು ಕಟ್ಟುನಿಟ್ಟಿನ ಎಚ್ಚರಿಕೆ ನೀಡಿದರು.

ಪ್ರಧಾನಮಂತ್ರಿ ಗ್ರಾಮ ಸಡಕ್ ಯೋಜನೆ ಕಲ್ಯಾಣ ಪಥ ಹಾಗೂ ಪ್ರಗತಿ ಪಥ ರಸ್ತೆ ಕಾಮಗಾರಿಗಳನ್ನು ಶೀಘ್ರ ಪೂರ್ಣಗೊಳಿಸುವಂತೆ ಸಂಬಂಧಿಸಿದ ಅಧಿಕಾರಿಗಳಿಗೆ ಸಚಿವರು ನಿರ್ದೇಶನ ನೀಡಿದರು.

"ನಮ್ಮ ಹೊಲ ನಮ್ಮ ದಾರಿ" ಯೋಜನೆಯಡಿ ಜಿಲ್ಲೆಯ ಎಲ್ಲಾ ತಾಲೂಕಿನ ಕೃಷಿ ಜಮೀನುಗಳಿಗೆ ಸಂಪರ್ಕ ಕಲ್ಪಿಸುವ ರಸ್ತೆಗಳಿಗೆ ಸಂಬಂಧಿಸಿದ ಪ್ರಸ್ತಾವನೆಗಳನ್ನು ಒಂದು ವಾರದೊಳಗೆ ಸಲ್ಲಿಸುವಂತೆ ಅಧಿಕಾರಿಗಳಿಗೆ ಸೂಚನೆ ನೀಡಿದರು. ಜಿಲ್ಲೆಯ ಕೊನೆಯ ಹಳ್ಳಿವರೆಗೂ ಗುಣಮಟ್ಟದ ರಸ್ತೆ ನಿರ್ಮಾಣ ಮಾಡಿ ರೈತರ ಕೃಷಿ ಚಟುವಟಿಕೆಗಳಿಗೆ ಅನುಕೂಲ ಕಲ್ಪಿಸಲಾಗುವುದು ಎಂದು ಸಚಿವರು ತಿಳಿಸಿದರು.

ಈ ಸಂದರ್ಭದಲ್ಲಿ ಬೀದರ ಜಿಲ್ಲಾಧಿಕಾರಿ ಶಿಲ್ಪಾ ಶರ್ಮಾ, ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಗೀರಿಶ್ ದಿಲೀಪ್ ಬದೋಲೆ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಪ್ರದೀಪ ಗುಂಟಿ, ಬೀದರ ಅಪರ ಜಿಲ್ಲಾಧಿಕಾರಿ ಶಿವಾನಂದ ಬಿ.ಕರಾಳೆ, ಕೃಷಿ ಇಲಾಖೆ ಜಂಟಿ ಕೃಷಿ ನಿರ್ದೇಶಕಿ ದೇವಿಕಾ.ಆರ್, ಸಭೆಯಲ್ಲಿ ಜಿಲ್ಲಾ ಮಟ್ಟದ ವಿವಿಧ ಇಲಾಖೆಗಳ ಹಿರಿಯ ಅಧಿಕಾರಿಗಳು ಉಪಸ್ಥಿತರಿದ್ದರು.

# ಒಂದು ಪುಸ್ತಕ ಇಡೀ ಜಗತ್ತನ್ನೇ ಬದಲಾಯಿಸಬಲ್ಲದು

• **ಮಲ್ಲಮ್ಮ ನುಡಿ ವಾರ್ತೆ ಕೆಂಭಾವಿ**

ಒಂದು ಮಗು, ಒಬ್ಬ ಶಿಕ್ಷಕ, ಒಂದು ಪೆನ್ನು ಮತ್ತು ಒಂದು ಪುಸ್ತಕ ಇಡೀ ಜಗತ್ತನ್ನೇ ಬದಲಾಯಿಸಬಲ್ಲದು. ಸರ್ಕಾರಿ ಶಾಲೆಯ ಮಕ್ಕಳ ಕನಸುಗಳಿಗೆ ರೆಕ್ಕೆ ನೀಡುವ ಅಳಿಲು ಸೇವೆ ನಮ್ಮದಾಗಿದೆ ಎಂದು ಸಂವರ್ಧನ ಗ್ರಾಮೀಣಾಭಿವೃದ್ಧಿ ಸೇವಾ ಸಂಸ್ಥೆಯ ಅಧ್ಯಕ್ಷ ವೀರಣ್ಣ ಕಲಕೇರಿ ಹೇಳಿದರು.



ಪಟ್ಟಣದ ಸಂಜೀವನಗರ ಬಡಾವಣೆಯ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯ ಮಕ್ಕಳಿಗೆ ಸಂವರ್ಧನ ಸಂಸ್ಥೆಯ ವತಿಯಿಂದ ಮಂಗಳವಾರ ನೋಟ್‌ಬುಕ್ ವಿತರಣೆ ಮಾಡಲಾಯಿತು. ಈ ಸಂದರ್ಭದಲ್ಲಿ ಮಾತನಾಡಿದ ಅವರು, ನಮ್ಮ ದೇಶದ ಎಷ್ಟೋ ಮಹಾನ್ ಸಾಧಕರು, ವಿಜ್ಞಾನಿಗಳು ಹಾಗೂ ರಾಷ್ಟ್ರಪತಿಗಳು ಓದಿದ್ದು ಸರ್ಕಾರಿ ಶಾಲೆಗಳಲ್ಲಿಯೇ. ಕಠಿಣ ಪರಿಶ್ರಮ ಮತ್ತು ಸಾಧನೆಯ ಛಲದಿಂದ ವಿದ್ಯಾರ್ಥಿಗಳು ತಮ್ಮ ಸುಂದರ ಭವಿಷ್ಯವನ್ನು ತಾವೇ ರೂಪಿಸಿಕೊಳ್ಳಬೇಕು. ಪುಸ್ತಕಗಳನ್ನು ಪ್ರೀತಿಸಿ, ಜ್ಞಾನವನ್ನು ಗೌರವಿಸುವ ಮೂಲಕ ನಾಳೆ ನೀವು ನೂರಾರು ಜನರಿಗೆ ಆಸರೆಯಾಗುವಂತೆ ಬೆಳೆಯಬೇಕು ಎಂದು ಮಕ್ಕಳಿಗೆ ಕರೆ ನೀಡಿದರು.

ಕಾರ್ಯಕ್ರಮದಲ್ಲಿ ಮುಖ್ಯ ಅತಿಥಿಗಳಾಗಿ ಭಾಗವಹಿಸಿದ್ದ ಡಾ. ಯಂಕನಗೌಡ ಪಾಟೀಲ್ ಮಾತನಾಡಿ, ವಿದ್ಯಾರ್ಥಿ ದೆಸೆಯಲ್ಲಿಯೇ ಮಕ್ಕಳಿಗೆ ಇಂತಹ ಪ್ರೋತ್ಸಾಹ ನೀಡುವುದು ಶ್ಲಾಘನೀಯ. ಇಂತಹ ಸಮಾಜಮುಖಿ ಕಾರ್ಯಗಳು ಮಕ್ಕಳಲ್ಲಿ ಹೊಸ ಉತ್ಸಾಹ ತುಂಬುತ್ತವೆ ಎಂದ ಅವರು ಕನಿಷ್ಠ ಸೌಲಭ್ಯಗಳ ನಡುವೆಯೂ ಮಕ್ಕಳನ್ನು ದೇಶದ ಉತ್ತಮ ಪ್ರಜೆಗಳನ್ನಾಗಿ ರೂಪಿಸುತ್ತಿರುವ ಶಿಕ್ಷಕರ ಸೇವೆಯನ್ನು ಅವರು ಸ್ಮರಿಸಿದರು.

ಶಾಲೆಯ ಹಿರಿಯ ಶಿಕ್ಷಕಿ ಜಯಶ್ರೀ ಹಿರೇಮಠ ಮಾತನಾಡಿ, ಶಾಲಾ ಮಕ್ಕಳ ಶೈಕ್ಷಣಿಕ ಪ್ರಗತಿಗೆ ಕೈಜೋಡಿಸಿದ ಸಂಸ್ಥೆಯ ಕಾರ್ಯವನ್ನು ಶ್ಲಾಘಿಸಿ, ಶಾಲಾ ಮಂಡಳಿಯ ಪರವಾಗಿ ಧನ್ಯವಾದ ಸಮರ್ಪಿಸಿದರು. ಕಾರ್ಯಕ್ರಮದಲ್ಲಿ ಯುವ ಮುಖಂಡ ಭೀಮು ಮಲ್ಕಾಪುರ, ಎಸ್‌ಡಿಎಂಸಿ ಉಪಾಧ್ಯಕ್ಷ ರುದ್ರಗೌಡ ಕಾಚಾಪುರ, ಪ್ರಧಾನ ಗುರುಗಳಾದ ದೇವಕಿ ಬಿ. ತುಂಬಗಿ, ಶಿಕ್ಷಕ ಸಿಬ್ಬಂದಿಯಾದ ಜಯಶ್ರೀ ಹಿರೇಮಠ, ಜಯಂತಿ ಎಚ್. ಎಸ್, ದೀಪಾ ಚಿಕ್ಕಮಠ, ಜೀನತ್ ಮುಲ್ಲಾ, ಲಕ್ಷ್ಮಿ ಪೂಜಾರ್ ಸೇರಿದಂತೆ ಇತರರು ಉಪಸ್ಥಿತರಿದ್ದರು.

# ಗುಲ್ಬರ್ಗಾ ಮಿಸ್ಟಿಕ್ಸ್ ತಂಡ, ಕೆಎಸ್‌ಸಿಎ ಅಧಿಕಾರಿಗಳ ಪತ್ರಿಕಾಗೋಷ್ಠಿ

• **ಮಲ್ಲಮ್ಮ ನುಡಿ ವಾರ್ತೆ ಕಲಬುರಗಿ**

ಕಲಬುರಗಿಯ ಕೆಬಿಎನ್ ಆಸ್ಪತ್ರೆ ಎದುರಿನ ಗೋಲ್ಡ್ ಹಬ್ ಮಾಲ್, 3ನೇ ಮಹಡಿಯಲ್ಲಿ ಇರುವ ಕ್ಯಾ-ರಿಯಾಡ್ ಹೋಟೆಲ್‌ನಲ್ಲಿ (OTHPL ವತಿಯಿಂದ) ಗುಲ್ಬರ್ಗಾ ಮಿಸ್ಟಿಕ್ಸ್ ತಂಡ ಹಾಗೂ ಕರ್ನಾಟಕ ರಾಜ್ಯ ಕ್ರಿಕೆಟ್ ಸಂಸ್ಥೆ (KSCA) ಅಧಿಕಾರಿಗಳ ವತಿಯಿಂದ ಪತ್ರಿಕಾಗೋಷ್ಠಿ ನಡೆಸಲಾಯಿತು.



ಕರ್ನಾಟಕ ರಾಜ್ಯ ಕ್ರಿಕೆಟ್ ಸಂಸ್ಥೆ (KSCA) ಆಯೋಜಿಸುವ ಪ್ರತಿಷ್ಠಿತ ಟಿ-20 ಕ್ರಿಕೆಟ್ ಟೂರ್ನಮೆಂಟ್ 'ಮಹಾರಾಜ ಟ್ರೋಫಿ' ಯ ಐದನೇ ಆವೃತ್ತಿಯು 2026ರ ಜೂನ್ 20ರಿಂದ ಜುಲೈ 12ರವರೆಗೆ ಮೈಸೂರು, ಹುಬ್ಬಳ್ಳಿ ಹಾಗೂ ಬೆಂಗಳೂರು ನಗರಗಳಲ್ಲಿ ನಡೆಯಲಿದೆ.

2022ರಲ್ಲಿ ನಡೆದ ಮೊದಲ ಆವೃತ್ತಿಯ ಚಾಂಪಿಯನ್ ಆಗಿದ್ದ ಗುಲ್ಬರ್ಗಾ ಮಿಸ್ಟಿಕ್ಸ್ ತಂಡವು ರಾಯಚೂರು ವಲಯವನ್ನು ಒಳಗೊಂಡಂತೆ ಕಲಬುರಗಿ ಹಾಗೂ ಉತ್ತರ ಕರ್ನಾಟಕದ ವಿಶಾಲ ಭಾಗವನ್ನು ಪ್ರತಿನಿಧಿಸುತ್ತಿದ್ದು, ಈವರೆಗೆ ನಡೆದ ಪ್ರತಿಯೊಂದು ಆವೃತ್ತಿಯಲ್ಲೂ ನಾಕೌಟ್ ಹಂತ ತಲುಪುವ ಮೂಲಕ ತನ್ನ ಸ್ಥಿರ ಸಾಧನೆಯನ್ನು ಮುಂದುವರಿಸಿಕೊಂಡಿದೆ.

**5ನೇ ಆವೃತ್ತಿಗೆ ಬಲಿಷ್ಠ ತಂಡ**

ಈ ಬಾರಿಯ ಮಹಾರಾಜ ಟ್ರೋಫಿಗಾಗಿ ಗುಲ್ಬರ್ಗಾ ಮಿಸ್ಟಿಕ್ಸ್ 20 ಆಟಗಾರರ ಬಲಿಷ್ಠ ತಂಡವನ್ನು ಕಟ್ಟಿಕೊಂಡಿದೆ. ಇದರಲ್ಲಿ ಹರಾಜಿನ ಮೂಲಕ ಆಯ್ಕೆಯಾದ 18 ಆಟಗಾರರು ಹಾಗೂ ಕ್ಯಾಚ್‌ಮೆಂಟ್ ಪ್ರದೇಶದಿಂದ ಆಯ್ಕೆಯಾದ ಇಬ್ಬರು ಆಟಗಾರರು ಸೇರಿದ್ದಾರೆ.

ಭಾರತದ ಏಕದಿನ ತಂಡದ ಆಟಗಾರ ಹಾಗೂ ಎರಡು ಬಾರಿ ಐಪಿಎಲ್ ಚಾಂಪಿಯನ್ ಆಗಿರುವ ಮನೀಷ್ ಪಾಂಡೆ ಅವರನ್ನು ₹12.75 ಲಕ್ಷ ಮೊತ್ತಕ್ಕೆ ತಂಡದ ಪ್ರಮುಖ ಆಟಗಾರರಾಗಿ ಮರು ಸೇರ್ಪಡೆಗೊಳಿಸಲಾಗಿದೆ.

ಅವರೊಂದಿಗೆ ಕರ್ನಾಟಕದ ಆಲ್‌ರೌಂಡರ್ ಮ್ಯಾಕ್‌ನೀಲ್ ನೊರೊನ್ಹಾ, ಇತ್ತೀಚೆಗೆ ಐಪಿಎಲ್ 2026ರಲ್ಲಿ ಚೆನ್ನೈ ಸೂಪರ್ ಕಿಂಗ್ಸ್ ತಂಡದ ಒಪ್ಪಂದ ಪಡೆದಿರುವ ಆಟಗಾರ, ಹಾಗೂ ಅನುಭವಿ ಐಪಿಎಲ್ ವಿಕೆಟ್ ಕೀಪರ್-ಬ್ಯಾಟರ್ ಬಿ.ಆರ್. ಶರತ್ ತಂಡದಲ್ಲಿ ಸ್ಥಾನ ಪಡೆದಿದ್ದಾರೆ.

ಇದಲ್ಲದೆ, ಪ್ರಥಮ ದರ್ಜೆ ಕ್ರಿಕೆಟಿಗರಾದ ರೋನಿತ್ ಗಜಾನನ್ ಮೋರೆ ಮತ್ತು ಮೇಲು ಕ್ರಾಂತಿ ಕುಮಾರ್ ಅವರಂತಹ ಅನುಭವಿ ಆಟಗಾರರು ತಂಡದಲ್ಲಿದ್ದು, ಅನುಭವ, ನಾಯಕತ್ವ ಮತ್ತು ಉದಯೋನ್ಮುಖ ಪ್ರತಿಭೆಗಳ ಸಮತೋಲನ ಹೊಂದಿರುವ ಬಲಿಷ್ಠ ತಂಡವಾಗಿ ಗುಲ್ಬರ್ಗಾ ಮಿಸ್ಟಿಕ್ಸ್ ಹೊಸ ಋತುವಿಗೆ ಸಜ್ಜಾಗಿದೆ.

**ತರಬೇತಿ ಹಾಗೂ ಸಹಾಯಕ ಸಿಬ್ಬಂದಿ**

ಗುಲ್ಬರ್ಗಾ ಮಿಸ್ಟಿಕ್ಸ್ ತಂಡದ ಮಾರ್ಗದರ್ಶಕರಾಗಿ ಕರ್ನಾಟಕದ ಮಾಜಿ ಆಲ್‌ರೌಂಡರ್ ಹಾಗೂ ಐಪಿಎಲ್ ಅನುಭವಿ ಬಾಲಚಂದ್ರ ಅಖಿಲ್ ಕಾರ್ಯನಿರ್ವಹಿಸುತ್ತಿದ್ದಾರೆ. ದೇಶೀಯ ಕ್ರಿಕೆಟ್‌ನ ಉನ್ನತ ಮಟ್ಟದಲ್ಲಿ ಪಡೆದಿರುವ ಅವರ ಅಪಾರ ಅನುಭವವು ತಂಡದ ಕ್ರಿಕೆಟ್ ತತ್ವಶಾಸ್ತ್ರವನ್ನು ರೂಪಿಸುವಲ್ಲಿ ಪ್ರಮುಖ ಪಾತ್ರ ವಹಿಸುತ್ತಿದೆ.

ತಂಡದ ಮುಖ್ಯ ಕೋಚ್ ಆಗಿ ಕರ್ನಾಟಕದ ಮಾಜಿ ಕ್ರಿಕೆಟಿಗ ಕುನಾಲ್ ಕಪೂರ್ ಕಾರ್ಯನಿರ್ವಹಿಸುತ್ತಿದ್ದು, ಅವರು ಕೆಎಸ್‌ಸಿಎ ವ್ಯವಸ್ಥೆಯೊಳಗೆ ಆಟಗಾರರ ಅಭಿವೃದ್ಧಿಯಲ್ಲಿ ಅಪಾರ ಅನುಭವ ಹೊಂದಿರುವ ಗೌರವಾನ್ವಿತ ಹೈ-ಪರ್ಫಾರ್ಮೆನ್ಸ್ ಕೋಚ್ ಆಗಿದ್ದಾರೆ.

ಇದೇ ವೇಳೆ ಕರ್ನಾಟಕದ ಮಾಜಿ ಕ್ರಿಕೆಟಿಗ ಕೆ.ವಿ. ಸಿದ್ಧಾರ್ಥ್ ಫೀಲ್ಡಿಂಗ್ ಕೋಚ್ ಆಗಿ ಸೇವೆ ಸಲ್ಲಿಸುತ್ತಿದ್ದು, ತಮ್ಮ ಆಟದ ಅನುಭವ ಹಾಗೂ ನವೀನ ತರಬೇತಿ ದೃಷ್ಟಿಕೋನದ ಮೂಲಕ ತಂಡಕ್ಕೆ ಮೌಲ್ಯಯುತ ಕೊಡುಗೆ ನೀಡುತ್ತಿದ್ದಾರೆ.

# ಆರೋಗ್ಯಕರ ಸಮಾಜ ನಿರ್ಮಾಣಕ್ಕೆ ಜಾಗೃತಿ ಅಗತ್ಯ

• **ಮಲ್ಲಮ್ಮ ನುಡಿ ವಾರ್ತೆ ಕಲಬುರಗಿ**

ಯುವ ಸಮುದಾಯ ತಂಬಾಕು ಉತ್ಪನ್ನಗಳಿಂದ ದೂರವಿರುವುದು ಮಾತ್ರವಲ್ಲ, ತಂಬಾಕು ದುಷ್ಪರಿಣಾಮದ ಬಗ್ಗೆ ಸಮಾಜದಲ್ಲಿ ಜಾಗೃತಿ ಮೂಡಿಸಬೇಕು. ಎಂದು ಹಿರಿಯ ಸಿವಿಲ್ ನ್ಯಾಯಧೀಶರು ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿಗಳಾದ ಶ್ರೀನಿವಾಸ ನವಲೆ. ಹೇಳಿದರು.




ಮಂಗಳವಾರ ನಗರದ ಎಸ್.ಎಸ್.ತೆಗ್ನೂರು ಪಿ.ಯು ಮತ್ತು ಪದವಿ ಮಹಾವಿದ್ಯಾಲಯ ಆವರಣದಲ್ಲಿ ಆಯೋಜಿಸಿದ್ದ ಕಲಬುರಗಿ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಜಿಲ್ಲಾ ತಂಬಾಕು ನಿಯಂತ್ರಣ ಕೋಶ, ರಾಷ್ಟ್ರೀಯ ಬಾಯಿ ಆರೋಗ್ಯ ಕಾರ್ಯಕ್ರಮ ಹಾಗೂ ಇವರುಗಳ ಸಂಯುಕ್ತಾಶ್ರಯದಲ್ಲಿ 'ವಿಶ್ವ ತಂಬಾಕು ರಹಿತ ದಿನಾಚರಣೆ' ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದರು.

ತಂಬಾಕು ಮತ್ತು ನಿಕೋಟಿನ್ ಬಳಕೆಯಿಂದ ಉಂಟಾಗುವ ಆರೋಗ್ಯ ಸಮಸ್ಯೆಗಳ ತಡೆ, ಜಾಗೃತಿ ಹಾಗೂ ಚಿಕಿತ್ಸೆಗೆ ಸರ್ಕಾರವು ವಾರ್ಷಿಕವಾಗಿ ಸುಮಾರು ₹1,700 ಕೋಟಿ ರೂ.ಗಳಿಗಿಂತಲೂ ಅಧಿಕ ಹಣ ವೆಚ್ಚ ಮಾಡುತ್ತಿದೆ ಎಂದರು.

ಕರೋನಾ ಸಾಂಕ್ರಾಮಿಕಕ್ಕಿಂತಲೂ ಹೆಚ್ಚು ಸಾವುಗಳು ತಂಬಾಕು ಬಳಕೆಯಿಂದಾಗುತ್ತಿವೆ. ದೇಶದಲ್ಲಿ ಕೋಟ್ಯಂತರ ಜನರು ತಮ್ಮ ಪ್ರಾಣ ಕಳೆದುಕೊಳ್ಳುತ್ತಿದ್ದಾರೆ. ಇತ್ತೀಚೆಗೆ 13-14 ವರ್ಷದ ಮಕ್ಕಳು, ವಿದ್ಯಾರ್ಥಿನಿಯರು ಹಾಗೂ ಮಹಿಳೆಯರು ಸಿಗರೇಟ್ ಮತ್ತು ತಂಬಾಕು ಬಳಕೆಗೆ ಒಳಗಾಗುತ್ತಿರುವುದು ಆತಂಕಕಾರಿ ಬೆಳವಣಿಗೆಯಾಗಿದೆ. ಪ್ಯಾಕೆಟ್ಗಳ ಮೇಲೆ ಎಚ್ಚರಿಕೆ ಚಿತ್ರಗಳಿದ್ದರೂ ಜನರು ಅದನ್ನು ನಿರ್ಲಕ್ಷ್ಯ ಮಾಡುತ್ತಿದ್ದಾರೆ ಎಂದು ವಿಷಾದಿಸಿದರು.

ಜಿಲ್ಲಾ ತಂಬಾಕು ನಿಯಂತ್ರಣ ಕೋಶ ಕಾರ್ಯಕ್ರಮದ ಸಲಹೆಗಾರರು ಶ್ರೀಮತಿ ಸುಜಾತಾ ಪಾಟೀಲ ಅವರು ಪ್ರಸ್ತಾವಿಕವಾಗಿ ಮಾತನಾಡಿದರು. ಜಿಲ್ಲಾ ಕಾರ್ಯಕ್ರಮಧಿಕಾರಿಗಳು ಎನ್ ಓ ಎಚ್ ಪಿ. ಡಾ. ರಾಜು ರಾಂಪುರೆ ಮಾತನಾಡಿ ವಿದ್ಯಾರ್ಥಿಗಳು ತಂಬಾಕು ಸೇವನೆ ಧೂಮಪಾನದಂತಹ ದುಶ್ಚಟಗಳಿಂದ ದೂರವಿರಲು ದೃಢ ನಿರ್ಧಾರ ಕೈಗೊಂಡರೆ ಅವರ ಭವಿಷ್ಯ ಉಜ್ವಲವಾಗಲು ಸಾಧ್ಯ ಎಂದರು.

ಎಸ್ ಎಸ್ ತೆಗನೂರ್ ಪಿ ಯು ಮತ್ತು ಪದವಿ ಮಹಾವಿದ್ಯಾಲಯದ ಪ್ರಿನ್ಸಿಪಾಲರು ಶ್ರೀಮತಿ ಜ್ಯೋತಿ ತೆಗನೂರ್ ಅಧ್ಯಕ್ಷತೆ ವಹಿಸಿದ್ದರು. ವಿಶೇಷವಾಗಿ ತಂಬಾಕು ರಹಿತ ಕೋಶದ ಪೋಸ್ಟರ್‌ಗಳು ಬಿಡುಗಡೆ ಗೊಳಿಸಲಾಯಿತು.

ಉಪನ್ಯಾಸಕರಾದ ಶ್ರೀಮತಿ ರೇಣುಕಾ ಹಿರೇಮಠ್ ಸ್ವಾಗತಿಸಿದರು. ಪ್ರಮುಖರಾದ ಸೋಶಿಯಲ್ ವರ್ಕರ್ ಕು.ಆರತಿ ಧನಶ್ರೀ. ಜಿಲ್ಲಾ ಆಸ್ಪತ್ರೆಯ ತಂಬಾಕು ನಿಯಂತ್ರಣ ಕೇಂದ್ರದ ಸೈಕ್ಯಾಟ್ರಿಕ್ ಕೌನ್ಸಿಲರ್ ಮಂಜುನಾಥ ಕಂಬಾಳಿಮಠ. ಡಿಇಓ. ರವಿ ಪೂಜಾರಿ. ಉಪನ್ಯಾಸಕಿ ಅನುರಾಧ ಎಸ್. ಸಂಪನ್ಮೂಲ ವ್ಯಕ್ತಿಗಳಾಗಿ ಭಾಗವಹಿಸಿದ್ದರು.

ಉಪನ್ಯಾಸಕರಾದ ರಮೇಶ್ ಬಡಿಗೇರ ಕಾರ್ಯಕ್ರಮ ನಿರೂಪಿಸಿ ವಂದಿಸಿದರು. ಈ ಕಾರ್ಯಕ್ರಮದಲ್ಲಿ ಕಾಲೇಜಿನ ವಿದ್ಯಾರ್ಥಿ/ವಿದ್ಯಾರ್ಥಿನಿಯರು ಕಾರ್ಯಕ್ರಮದಲ್ಲಿ ಭಾಗವಹಿಸಿ ಯಶಸ್ವಿಗೊಳಿಸಿದರು.

# ಸೈದಾಪುರದಲ್ಲಿ ದಲಿತ ಸಂಘರ್ಷ ಸಮಿತಿ ಭೀಮಮಾರ್ಗ ನೂತನ ಪದಾಧಿಕಾರಿಗಳ ನೇಮಕ

• ಮಲ್ಲಮ್ಮ ನುಡಿ ವಾರ್ತೆ ಯಾದಗಿರಿ

ಜೂ 16: ದಲಿತರು, ಶೋಷಿತರು ಮತ್ತು ಹಿಂದುಳಿದ ವರ್ಗಗಳ ಹಕ್ಕುಗಳ ರಕ್ಷಣೆಗೆ ನಿರಂತರ ಹೋರಾಟ ನಡೆಸುತ್ತಿರುವ ದಲಿತ ಸಂಘರ್ಷ ಸಮಿತಿ ಭೀಮಮಾರ್ಗ (ರಿ) ವತಿಯಿಂದ ಸೈದಾಪುರ ವಲಯದ ನೂತನ ಪದಾಧಿಕಾರಿಗಳ ನೇಮಕಾತಿ ಕಾರ್ಯಕ್ರಮ ಇಂದು ಸೈದಾಪುರದಲ್ಲಿ ಉತ್ಸಾಹಭರಿತವಾಗಿ ನಡೆಯಿತು. ನೂತನ ತಂಡಕ್ಕೆ ಜವಾಬ್ದಾರಿಗಳನ್ನು ಹಸ್ತಾಂತರಿಸುವ ಮೂಲಕ ಸಂಘಟನೆಯ ಸಾಮಾಜಿಕ ಬದ್ಧತೆ ಮತ್ತು ಹೋರಾಟದ ಸಂಕಲ್ಪ ಮತ್ತೊಮ್ಮೆ ಪ್ರತಿಧ್ವನಿಸಿತು. ಕಾರ್ಯಕ್ರಮದಲ್ಲಿ ನೂತನವಾಗಿ ಆಯ್ಕೆಯಾದ ಪದಾಧಿಕಾರಿಗಳಿಗೆ ಸನ್ಮಾನಿಸಿ ಅಭಿನಂದಿಸಲಾಯಿತು. ಮುಖ್ಯ ಅತಿಥಿಗಳು ಹಾಗೂ ಸಾಮಾಜಿಕ ಕಾರ್ಯಕರ್ತರು, ಸಮಾಜದಲ್ಲಿ ಇನ್ನೂ ಬೇರುಬಿಟ್ಟಿರುವ ಅಸಮಾನತೆ, ಅಸ್ಪೃಶ್ಯತೆ ಹಾಗೂ ಶೋಷಣೆಯ ವಿರುದ್ಧ ಸಂಘಟಿತ ಹೋರಾಟ ನಡೆಸುವ ಅಗತ್ಯವನ್ನು ಒತ್ತಿ ಹೇಳಿದರು.

ಈ ಸಂದರ್ಭದಲ್ಲಿ ಮಾತನಾಡಿದ ದಲಿತ ಸಂಘರ್ಷ ಸಮಿತಿ ಭೀಮಮಾರ್ಗದ ಗುರುಮಿಠಕಲ್ ತಾಲ್ಲೂಕು ಅಧ್ಯಕ್ಷ ಭೀಮಯ್ಯ ದಾಸರ ವಂಕಸಂಬ್ರ, "ಸಂವಿಧಾನ ಶಿಲ್ಪಿ ಡಾ. ಬಿ.ಆರ್. ಅಂಬೇಡ್ಕರ್ ಅವರು ಪ್ರತಿಪಾದಿಸಿದ ಸಮಾನತೆ, ಸಾಮಾಜಿಕ ನ್ಯಾಯ ಮತ್ತು ಮಾನವೀಯ ಮೌಲ್ಯಗಳನ್ನು ಪ್ರತಿಯೊಬ್ಬರೂ ಜೀವನದಲ್ಲಿ ಅಳವಡಿಸಿಕೊಳ್ಳಬೇಕು. ಹಕ್ಕುಗಳಿಂದ ವಂಚಿತರಾಗಿರುವವರ ಧ್ವನಿಯಾಗಿ ನಿಂತು, ಅವರಿಗೆ ನ್ಯಾಯ ದೊರಕಿಸುವ ಕೆಲಸ ಸಂಘಟನೆಯ



ಪ್ರಮುಖ ಗುರಿಯಾಗಬೇಕು" ಎಂದು ಹೇಳಿದರು.

ಅಸ್ಪೃಶ್ಯತೆ, ಶೋಷಣೆ ಮತ್ತು ಅನ್ಯಾಯದಂತಹ ಸಾಮಾಜಿಕ ಪಿಡುಗುಗಳನ್ನು ನಿರ್ಮೂಲನೆ ಮಾಡಲು ಸಂಘಟಿತ ಶಕ್ತಿ ಅಗತ್ಯವಾಗಿದೆ ಎಂದು ಅವರು ಅಭಿಪ್ರಾಯಪಟ್ಟರು. ನೂತನ ಪದಾಧಿಕಾರಿಗಳು ಜನಸಾಮಾನ್ಯರ ಸಮಸ್ಯೆಗಳಿಗೆ ಸ್ಪಂದಿಸುವ ಮೂಲಕ ಸಂಘಟನೆಯನ್ನು ಗ್ರಾಮಮಟ್ಟದಲ್ಲಿ ಮತ್ತಷ್ಟು ಬಲಪಡಿಸಬೇಕು ಎಂದು ಕರೆ ನೀಡಿದರು.

ಕಾರ್ಯಕ್ರಮದಲ್ಲಿ ಭಾಗವಹಿಸಿದ್ದ ಮುಖಂಡರು, ಸಮಾಜಮುಖಿ ಚಟುವಟಿಕೆಗಳ ಮೂಲಕ ಜನರ ವಿಶ್ವಾಸ ಗಳಿಸಿ, ಶೋಷಿತ ಸಮುದಾಯಗಳ ಆಶೋತ್ತರಗಳಿಗೆ ಸ್ಪಂದಿಸುವ ಜವಾಬ್ದಾರಿ ನೂತನ ತಂಡದ ಮೇಲಿದೆ ಎಂದು ಅಭಿಪ್ರಾಯಪಟ್ಟರು.

ಈ ಕಾರ್ಯಕ್ರಮವು ಕೇವಲ ಪದಾಧಿಕಾರಿಗಳ ನೇಮಕಾತಿಗೆ ಸೀಮಿತವಾಗದೇ, ಡಾ. ಅಂಬೇಡ್ಕರ್ ಅವರ ಸಮಾನತೆಯ ಕನಸನ್ನು ನನಸಾಗಿಸಲು ಸಮಾಜದ ಕಟ್ಟಕಡೆಯ ವ್ಯಕ್ತಿಗೂ ನ್ಯಾಯ ದೊರಕಿಸುವ ಸಂಕಲ್ಪದ ಘೋಷಣೆಯಾಗಿ ರೂಪುಗೊಂಡಿತು. ನೂತನ ತಂಡವು ಹೋರಾಟದ ಹಾದಿಯಲ್ಲಿ ಜನರ ವಿಶ್ವಾಸ ಉಳಿಸಿಕೊಂಡು, ಸಾಮಾಜಿಕ ಪರಿವರ್ತನೆಯ ಮುಂಚೂಣಿ ಶಕ್ತಿಯಾಗಿ ಹೊರಹೊಮ್ಮಲಿ ಎಂಬ ಆಶಯ ವ್ಯಕ್ತವಾಯಿತು.

ಈ ಸಂದರ್ಭದಲ್ಲಿ ಶ್ರೀಮತಿ ಮೀನಾಕ್ಷಮ್ಮ, ವಿರೇಶ ಸಜ್ಜನ್ ಕಡೆಚೂರ, ಶ್ರೀ ಆಂಜನೇಯ ಕಟ್ಟಿಮನಿ, ಶ್ರೀ ಸಿದ್ದು ಪೂಜಾರಿ, ಭಾಸ್ಕರ್ ಸಂಬ್ರ ಹಾಗೂ ಗುರುಮಿಠಕಲ್ ತಾಲೂಕು ಪ್ರಧಾನ ಕಾರ್ಯದರ್ಶಿ ಶ್ರೀನಿವಾಸ ಎಂ.ಎಸ್. ಮುಖ್ಯ ಅತಿಥಿಗಳಾಗಿ ಉಪಸ್ಥಿತರಿದ್ದು, ನೂತನ ಪದಾಧಿಕಾರಿಗಳಿಗೆ ಶುಭ ಹಾರೈಸಿದರು.

ಅಧ್ಯಕ್ಷರಾಗಿ ಮಾರಪ್ಪ ಎಡವಲಿ, ಗೌರವಾಧ್ಯಕ್ಷರಾಗಿ ಲಿಂಗಪ್ಪ, ಗೌರವ ಸಲಹೆಗಾರರಾಗಿ ಮಹೇಶ್, ಪ್ರಧಾನ ಕಾರ್ಯದರ್ಶಿಯಾಗಿ ಶ್ರೀನಿವಾಸ ಎಂ.ಎಸ್, ಉಪಾಧ್ಯಕ್ಷರಾಗಿ ಸಿ.ಆರ್. ಜಂಬಣ್ಣ, ಕಾರ್ಯದರ್ಶಿ ಆರ್. ಜಮ್ಮಣ್ಣ, ಜಂಟಿ ಕಾರ್ಯದರ್ಶಿ ಮೋತಿ ಮಾದೇವ, ಸಂಘಟನಾ ಕಾರ್ಯದರ್ಶಿ ದೇಶವಂತ, ಸಂಚಾಲಕ ರಾಮುಲು, ಖಜಾಂಚಿಗಳಾಗಿ ಸಿ.ಆರ್. ಗಂಗಪ್ಪ ಹಾಗೂ ಮಾದೇವ ಎಡವಲಿ, ಸದಸ್ಯರಾಗಿ ಮಾರಪ್ಪ ಎಡವಲಿ, ಬನ್ನಪ್ಪ ಎಡವಲಿ, ಸಿ.ಆರ್. ನಾಗಪ್ಪ ಹಾಗೂ ಸಿ.ಆರ್. ಜಂಬಣ್ಣ ನೇಮಕಗೊಂಡರು.

# ಬಾಲಕಾರ್ಮಿಕ ಪದ್ಧತಿ ತಡೆಗಟ್ಟುವುದು ಸಮಾಜದ ಪ್ರತಿಯೊಬ್ಬರ ಕರ್ತವ್ಯ



• ಮಲ್ಲಮ್ಮ ನುಡಿ ವಾರ್ತೆ ಯಾದಗಿರಿ

ಜೂ. 16 : ಸಮಾಜದಲ್ಲಿ ಬಾಲಕಾರ್ಮಿಕ ಎಂಬ ಅನಿಷ್ಟ ಪದ್ಧತಿಯನ್ನು ತಡೆಯುವುದು ಸಮಾಜದ ಪ್ರತಿಯೊಬ್ಬರ ಕರ್ತವ್ಯವಾಗಿದೆ ಎಂದು ಶಹಾಪೂರ ತಹಶೀಲ್ದಾರ್ ಸಿದ್ಧಾರೂಢ ಬನ್ನಿಕೊಪ್ಪ ಹೇಳಿದರು.

ಅವರು ಮಂಗಳವಾರ ನಗರದ ಪಿ.ಎಂ ಶ್ರೀ ಆದರ್ಶ ವಿದ್ಯಾಲಯದಲ್ಲಿ ತಾಲ್ಲೂಕು ಕಾನೂನು ಸೇವೆಗಳ ಸಮಿತಿ ಶಹಾಪುರ, ತಾಲ್ಲೂಕಾ ವಕೀಲರ ಸಂಘ, ತಾಲ್ಲೂಕ ಆಡಳಿತ, ತಾಲ್ಲೂಕ ಪಂಚಾಯತ್, ಕಾರ್ಮಿಕ ಇಲಾಖೆ, ಜಿಲ್ಲಾ ಬಾಲಕಾರ್ಮಿಕ ಯೋಜನಾ ಸೊಸೈಟಿ ಯಾದಗಿರಿ, ವರ್ಲ್ಡ್ ವಿಷನ್ ಸಂಸ್ಥೆ ಹಾಗೂ ಪಿ.ಎಂ ಶ್ರೀ ಆದರ್ಶ ವಿದ್ಯಾಲಯ ಇವರುಗಳ ಸಂಯುಕ್ತಾಶ್ರಯದಲ್ಲಿ ಹಮ್ಮಿಕೊಂಡಿದ್ದ ವಿಶ್ವ ಬಾಲಕಾರ್ಮಿಕ ಪದ್ಧತಿ ವಿರೋಧಿ ದಿನ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದರು.

ತಾಲ್ಲೂಕಿನಾದ್ಯಂತ ಯಾವುದೇ ಬಾಲಕಾರ್ಮಿಕ ಮಕ್ಕಳು ಕೆಲಸ ಮಾಡುತ್ತಿರುವುದು ಕಂಡುಬಂದರೆ ವಿಳಂಬ ಮಾಡದೆ ಮಕ್ಕಳನ್ನು ಕೆಲಸಕ್ಕೆ ನೇಮಿಸಿಕೊಂಡವರ ವಿರುದ್ಧ ಕಾನೂನು ರೀತಿ ಕ್ರಮ ಕೈಗೊಂಡು, ಮಕ್ಕಳ ಸುಂದರ ಭವಿಷ್ಯ ರೂಪಿಸಲು ಅಧಿಕಾರಿಗಳು ಪ್ರಾಮಾಣಿಕ ಪ್ರಯತ್ನ ಮಾಡಬೇಕು. ಇಂದಿನ ಮಕ್ಕಳೇ ಮುಂದಿನ ಬಲಿಷ್ಠ ಭಾರತದ ರೂವಾರಿಗಳು ಎಂದು ಹೇಳಿದರು.

ಜಿಲ್ಲಾ ಬಾಲಕಾರ್ಮಿಕ ಯೋಜನಾ ನಿರ್ದೇಶಕ ರಿಯಾಜ್ ಪಟೇಲ್ ವರ್ಕನಳ್ಳಿ ಮಾತನಾಡಿ, ಜಿಲ್ಲೆಯಾದ್ಯಂತ ನಿರಂತರವಾಗಿ ಜಾಗೃತಿ ಕಾರ್ಯಕ್ರಮಗಳ ಮೂಲಕ ಅರಿವು ಮೂಡಿಸಲಾಗುತ್ತಿದೆ. ಇದನ್ನು ಮೀರಿಯೂ ಸಹ ಬಾಲಕಾರ್ಮಿಕ ಮತ್ತು ಕಿಶೋರ ಕಾರ್ಮಿಕ ಮಕ್ಕಳನ್ನು ಕೆಲಸಕ್ಕೆ ಇಟ್ಟುಕೊಂಡಲ್ಲಿ, ಅಂತಹ ಅಂಗಡಿ ಮಾಲೀಕರ ವಿರುದ್ಧ ರೂ. 20,000 ದಿಂದ 50,000 ಗಳವರೆಗೆ ದಂಡ ಮತ್ತು 6 ತಿಂಗಳಿಂದ 2 ವರ್ಷದವರೆಗೆ ಜೈಲು ಶಿಕ್ಷೆ ಅಥವಾ ಎರಡನ್ನೂ ಸಹ ವಿಧಿಸಲಾಗುವುದು ಎಂದು ಎಚ್ಚರಿಸಿದರು. ಮಧ್ಯಸ್ಥಿಕೆ ವಕೀಲರಾದ ಜಯಲಕ್ಷ್ಮಿ ಅವರು ಬಾಲಕಾರ್ಮಿಕ ಪದ್ಧತಿ ನಿರ್ಮೂಲನೆಯ ಕುರಿತು ಉಪನ್ಯಾಸ ನೀಡಿದರು. ಬಾಲಕಾರ್ಮಿಕ ಪದ್ಧತಿ ವಿರೋಧಿ ಪ್ರಮಾಣ ವಚನವನ್ನು ವರ್ಲ್ಡ್ ವಿಷನ್ ಸಂಸ್ಥೆಯ ನಿರ್ದೇಶಕ ಅನಿಲ್ ತೇಜಪ್ಪ ಅವರು ಬೋಧಿಸಿದರು.

ಈ ಸಂದರ್ಭದಲ್ಲಿ ಕಾರ್ಮಿಕ ನಿರೀಕ್ಷಕರಾದ ಸಾಬೇರಾ ಬೇಗಂ, ಆರಕ್ಷಕ ನಿರೀಕ್ಷಕ ಎಸ್.ಎಂ ಪಾಟೀಲ್, ಪ್ಯಾನಲ್ ವಕೀಲ ಪರ್ವೀನ್ ಜಮಖಂಡಿ, ಶಾಲೆಯ ಮುಖ್ಯ ಗುರುಗಳಾದ ಹೆಚ್.ಎಸ್. ಸೋಮಪುರ, ಕಾರ್ಮಿಕ ಇಲಾಖೆಯ ಸಿಬ್ಬಂದಿಗಳಾದ ಮಹ್ಮದ್ ಪರ್ವೆಶ್ಯಾಮ್, ಜಾವೀದ್ ಪಾಷಾ ಸೇರಿದಂತೆ ಪ್ರಮುಖರು ಉಪಸ್ಥಿತರಿದ್ದರು.

# ನ್ಯಾಯಬೆಲೆ ಅಂಗಡಿಗಳಲ್ಲಿ ಜಾತಿ ಪ್ರಮಾಣ ಪತ್ರದ ಇ-ಕೆವೈಸಿ ಕಡ್ಡಾಯ

• ಮಲ್ಲಮ್ಮ ನುಡಿ ವಾರ್ತೆ ಯಾದಗಿರಿ

ಜೂ. 16 : ಜಿಲ್ಲೆಯ ಎಲ್ಲಾ ಪಡಿತರ ಚೀಟಿ (ರೇಷನ್ ಕಾರ್ಡ್) ಹೊಂದಿರುವ ಕುಟುಂಬದ ಸದಸ್ಯರು ತಮ್ಮ ಜಾತಿ ಪ್ರಮಾಣ ಪತ್ರವನ್ನು ನೀಡಿ ನ್ಯಾಯಬೆಲೆ ಅಂಗಡಿಗಳಲ್ಲಿ ಇ-ಕೆವೈಸಿ ಮಾಡಿಸಿಕೊಳ್ಳುವುದನ್ನು ಕಡ್ಡಾಯಗೊಳಿಸಲಾಗಿದೆ ಎಂದು ಯಾದಗಿರಿ ಜಿಲ್ಲೆಯ ಆಹಾರ ನಾಗರಿಕ ಸರಬರಾಜು ಮತ್ತು ಗ್ರಾಹಕರ ವ್ಯವಹಾರಗಳ ಇಲಾಖೆಯ ಉಪ ನಿರ್ದೇಶಕರು ತಿಳಿಸಿದ್ದಾರೆ. ಪಡಿತರ ಚೀಟಿಯಲ್ಲಿ ಹೆಸರಿರುವ ಎಲ್ಲಾ ಕುಟುಂಬ ಸದಸ್ಯರು ಕಡ್ಡಾಯವಾಗಿ ನ್ಯಾಯಬೆಲೆ ಅಂಗಡಿಗೆ ಭೇಟಿ ನೀಡಿ ಆರ್.ಡಿ. ಸಂಖ್ಯೆ ಇರುವ ಜಾತಿ ಪ್ರಮಾಣ ಪತ್ರವನ್ನು ಸಲ್ಲಿಸಿ ಇ-ಕೆವೈಸಿ ಮಾಡಿಸಬೇಕಾಗಿದೆ. ಈ ಇ-ಕೆವೈಸಿ ಸಂಗ್ರಹಣೆಯ ಕಾರ್ಯವು ಪ್ರತಿದಿನ ಬೆಳಗ್ಗೆ 6 ರಿಂದ ರಾತ್ರಿ 10 ಗಂಟೆಯವರೆಗೆ ಲಭ್ಯವಿರುತ್ತದೆ. ಇ-ಕೆವೈಸಿ ಪ್ರಕ್ರಿಯೆಯು ಸಾರ್ವಜನಿಕರಿಗೆ ಸಂಪೂರ್ಣ ಉಚಿತವಾಗಿರುತ್ತದೆ. ಕಾರಣ ಪಡಿತರ ಚೀಟಿಯ ಎಲ್ಲಾ ಸದಸ್ಯರು ಯಾವುದೇ ವಿಳಂಭವಿಲ್ಲದೆ ಈ ಪ್ರಕ್ರಿಯೆಯನ್ನು ಪೂರ್ಣಗೊಳಿಸಬೇಕಾಗಿ ಅವರು ತಿಳಿಸಿದ್ದಾರೆ.

# ನರೇಗಾ ಕೂಲಿಕಾರರಿಗೆ ಉಚಿತ ಆರೋಗ್ಯ ತಪಾಸಣಾ ಶಿಬಿರ



• ಮಲ್ಲಮ್ಮ ನುಡಿ ವಾರ್ತೆ ಯಾದಗಿರಿ

ಪ್ರತಿಯೊಬ್ಬರೂ ಕಡ್ಡಾಯವಾಗಿ ಆರೋಗ್ಯ ತಪಾಸಣೆ ಮಾಡಿಸಿಕೊಳ್ಳಬೇಕು ಎಂದು ಯಲ್ಹೇರಿ ಪ್ರಾಥಮಿಕ ಆರೋಗ್ಯ ಕೇಂದ್ರ ವೈದ್ಯಾಧಿಕಾರಿ ಜ್ಞಾನೇಶ್ವರ್ ಹೇಳಿದರು. ಜಿಲ್ಲಾ ಪಂಚಾಯಿತಿ ಯಾದಗಿರಿ, ತಾಲೂಕು ಪಂಚಾಯಿತಿ ಗುರುಮಠಕಲ್, ಹಾಗೂ ಪಸಪೂಲ ಗ್ರಾಮ ಪಂಚಾಯಿತಿ ಇವರ ಸಹಯೋಗದೊಂದಿಗೆ ಐಇಸಿ ಚಟುವಟಿಕೆಯಡಿ ಪಸಪೂಲ ಗ್ರಾಮ ಪಂಚಾಯತಿ ವ್ಯಾಪ್ತಿಯಲ್ಲಿರುವ ಗೋಪಾಲಪುರ ಗ್ರಾಮದಲ್ಲಿ ಮಂಗಳವಾರ

ಹಳ್ಳ ಹೂಳೆತ್ತುವ ಕಾಮಗಾರಿ ಸ್ಥಳದಲ್ಲಿ ನರೇಗಾ ಕೂಲಿಕಾರರಿಗೆ ಉಚಿತ ಆರೋಗ್ಯ ತಪಾಸಣಾ ಶಿಬಿರದಲ್ಲಿ ಭಾಗವಹಿಸಿ ಅವರು ಮಾತನಾಡಿದರು. ಪ್ರತಿಯೊಬ್ಬರು ಕಡ್ಡಾಯವಾಗಿ ಮೂರು ತಿಂಗಳಿಗೊಮ್ಮೆ, ಆರು ತಿಂಗಳಿಗೊಮ್ಮೆ, ಆರೋಗ್ಯ ತಪಾಸಣೆ ಮಾಡಿಸಿಕೊಳ್ಳಬೇಕು. ಹೀಗೆ ಮಾಡುವುದರಿಂದ ಆರಂಭದಲ್ಲಿಯೇ ರೋಗ ಹರಡುವುದನ್ನು ಪತ್ತೆ ಹೆಚ್ಚಿ ತಡೆಗಟ್ಟಲು ಸಾಧ್ಯವಾಗುತ್ತದೆ ಎಂದರು. ಆಹಾರದಲ್ಲಿ ಉಪ್ಪು ಕಡಿಮೆ ಸೇವಿಸಿ, ಪದೇಪದೇ ಚಹಾ ಕುಡಿಯಬೇಡಿ. ಹಸಿಮೆಣಸಿನ ಕಾಯಿ ಖಾರದ ಪುಡಿಯನ್ನು ಅಧಿಕ ಸೇವಿಸುವುದರಿಂದ ಹೊಟ್ಟೆಯಲ್ಲಿ ಅಲ್ಸರ್ ಆಗುವ ಸಾಧ್ಯತೆ ಇರುತ್ತದೆ. ಅದಕ್ಕೆ ಮಿತವಾಗಿ ಆಹಾರ ಸೇವಿಸಿ ಮತ್ತು ಹೆಚ್ಚು ನೀರು ಕುಡಿಯಿರಿ ಎಂದು ಸಲಹೆ ನೀಡಿದರು.

ಬಿಸಿಲಲ್ಲಿ ಕೆಲಸ ಮಾಡುವುದರಿಂದ ನಿತ್ಯ 4 ರಿಂದ 5 ಲೀಟರ್ ನೀರು ಸೇವಿಸಬೇಕು ಎಂದರು. ಗ್ರಾಮ ಪಂಚಾಯಿತಿ ಅಭಿವೃದ್ಧಿ ಅಧಿಕಾರಿ ಮಲ್ಲಿಕಾರ್ಜುನ್ ಸಜ್ಜನ್ ಮಾತನಾಡಿ, ಕೂಲಿಕಾರರು ಆರೋಗ್ಯದಿಂದ್ದರೆ, ಕೆಲಸ ಮಾಡಲು ಸಾಧ್ಯವಾಗುತ್ತದೆ. ಆದ್ದರಿಂದ ಪ್ರತಿಯೊಬ್ಬರೂ ತಮ್ಮ ಆರೋಗ್ಯದ ಕಡೆ ಗಮನ ಹರಿಸಬೇಕು ಎಂದರು. ಮಲೇರಿಯಾ, ಕೊಲೆಸ್ಟ್ರಾಲ್ ರಕ್ತದೊತ್ತಡ, ಸಕ್ಕರೆ ಕಾಯಿಲೆ, ಮಂಡಿ ನೋವು ಹಾಗೂ ರಕ್ತಹೀನತೆ ತಪಾಸಣೆ ಮಾಡಲಾಯಿತು. ಈ ಕಾಯಿಲೆಗಳ ನ್ಯೂನತೆಯಿಂದ ಬಳಲುತ್ತಿರುವವರಿಗೆ ಮಾತ್ರೆಗಳು ಹಂಚಲಾಯಿತು.

ಜೊತೆಗೆ ವಿಟಮಿನ್ಸ್ ಮಾತ್ರೆಗಳು ಮತ್ತು ಓ ಆರ್ ಎಸ್ ಪೌಡರ್ ಕೊಡಲಾಯಿತು. ಒಟ್ಟು 71 ನರೇಗಾ ಕೂಲಿಕಾರರಿಗೆ ಆರೋಗ್ಯ ತಪಾಸಣೆ ಮಾಡಲಾಯಿತು. ಈ ಸಂದರ್ಭದಲ್ಲಿ ಗ್ರಾಮ ಪಂಚಾಯಿತಿ ಕಾರ್ಯದರ್ಶಿ ಉಮಾಪತಿ ಹಿರೇಮಠ್, ಡಿ ಇಓ ಬಸವರಾಜ್ ಅಂಗಡಿ, ಐಇಸಿ ತಾಲೂಕು ಸಂಯೋಜಕ ರಾಘವೇಂದ್ರ, ಟಿಎಇ ವಿಜಯ್ ಪತ್ತಾರ್, ಬಿ ಎಫ್ ಟಿ ಬಸಲಿಂಗಪ್ಪ, ಆರೋಗ್ಯ ಇಲಾಖೆಯ ಸಿ ಹೆಚ್ ಓ ಕೃನಾಲ್ ಕುಮಾರ್, ಎಚ್ಐಓ ಶರಣು, ಪಿಎಚ್ ಸಿಓ ಮಂಜುಳಾ ಸೇರಿದಂತೆ ಆರೋಗ್ಯ ಇಲಾಖೆ ಸಿಬ್ಬಂದಿ ವರ್ಗದವರು ಮತ್ತು ಗ್ರಾಮ ಪಂಚಾಯಿತಿ ಸಿಬ್ಬಂದಿ ವರ್ಗದವರು, ಕಾಯಕ ಬಂದುಗಳು ಹಾಗೂ ಕೂಲಿಕಾರರು ಇದ್ದರು.

# ಮತದಾರ ಪಟ್ಟಿ ಪರಿಷ್ಕರಣೆಗೆ ಸರಳ ವಿಧಾನ ಅಳವಡಿಸಿ. ಎಸ್ ಐ ಆರ್ ಕೈಬಿಡಿ



• ಮಲ್ಲಮ್ಮ ನುಡಿ ವಾರ್ತೆ ಹುಣಸೂರು

ಜೂ 16.ತಾಲೂಕಿನ ಕೊಟ್ಟಿಗೆಕಾವಲ್ ಜೇನುಕುರುಬ ಆದಿವಾಸಿಗಳ ಹಾಡಿಗೆ ಎಸ್. ಐ.ಆರ್.(ಮತದಾನ ಪಟ್ಟಿ ವಿಶೇಷ ತೀವ್ರ ಪರಿಷ್ಕರಣೆ) ವಿರೋಧಿ ಕರ್ನಾಟಕ ಚಳುವಳಿಯ 5 ನೇ ತಂಡ ತಮ್ಮ ಜಾತಾ ಅಂಗವಾಗಿ ಭೇಟಿ ಇತ್ತು ಎಸ್ ಐ ಆರ್ ವಿರೋಧಿ ಕರಪತ್ರ ಬಿಡುಗಡೆ ಮಾಡಿ ಆದಿವಾಸಿಗಳೊಡನೆ ಸಂವಾದ ನಡೆಸಿದರು. ತಂಡದ ಮುಖಂಡ ಉಮೇಶ್ ಮಾತನಾಡಿ ಮತದಾರರ ಪರಿಷ್ಕರಣೆ ಸರ್ಕಾರದ ಒಂದು ಸಹಜ ಕರ್ತವ್ಯ. ಈ ಹಿಂದೆ ತೀರಿ ಕೊಂಡವರ ಹೆಸರು ಕೈಬಿಡಲು, ಹೊಸದಾಗಿ ಸೇರ್ಪಡೆ ಆಗುವವರನ್ನು ಸೇರಿಸಲು, ಊರುಬಿಟ್ಟವರ ಹೆಸರು ತೆಗೆಯುವುದು ಸಹಜ ವಾಗಿ ಸರ್ಕಾರಿ ಅಧಿಕಾರಿಗಳು ಪರಿಷ್ಕರಣೆ ಮಾಡುತ್ತಿದ್ದರು. ಈ ವಿಧಾನವೇ ಸಾಕಿತ್ತು.ಆದರೆ ಈಗ ಕೇಂದ್ರ ಸರ್ಕಾರ, ಉಚ್ಚ ನ್ಯಾಯಾಲಯ ತಮ್ಮೆಲ್ಲ ಅಧಿಕಾರವನ್ನು ಚುನಾವಣಾ ಆಯೋಗಕ್ಕೆ ನೀಡಿ ತೀವ್ರ ಪರಿಷ್ಕರಣೆ ಹೆಸರಲ್ಲಿ ಬಿಜೆಪಿ ಗೆ ಅನುಕೂಲ ವಾಗುವಂತೆ ಮತದಾರರ ಪಟ್ಟಿ ಸಿದ್ದಪಡಿಸಿ ವಿರೋಧಿ ಗಳನ್ನು ಕೈಬಿಡುವ ಹುನ್ನಾರ ನಡೆದಿದೆ. ಈಗ ತಪಟ್ಟಿ ಯಲ್ಲಿ ನಿಮ್ಮ ಹೆಸರಿರಿಸಲು ಹುಟ್ಟಿದ ದಿನಾಂಕ, ಜಾತಿ ಧೃಡೀ ಕಾರಣ, ವಾಸ ಧೃಡೀಕರಣ, ಆಸ್ತಿ ಹಕ್ಕುಪತ್ರ ವೀಡುವಂತೆ, ಹಲವಾರು ವಿವೇಚನಾ ರಹಿತ ಪ್ರಕ್ರಿಯೆ ಅಳವಡಿಸಿ ಪ್ರಭುಗಳಾದ ಪ್ರಜೆಗಳಿಗೆ ಓಟಿನ ಹಕ್ಕು ನಿರಾಕರಿಸುವ, ಮತದಾರರನ್ನು ಪಕ್ಷಗಳೇ ಆಯ್ಕೆ ಮಾಡುವ ಅಪ್ರಜಾಪ್ರಭುತ್ವ ವಿಧಾನ ಅಳವಡಿಸಿ ಪ್ರಜಾಪ್ರಭುತ್ವಕ್ಕೆ ಅಪಚಾರ ಮಾಡಲಾಗುತ್ತಿದೆ. ಇಂತ ಎಸ್ ಐ ಆರ್ ಅನ್ನು ತೀವ್ರವಾಗಿ ವಿರೋಧಿಸಿ ರಾಜ್ಯ ಹಾಗು ಕೇಂದ್ರ ಸರ್ಕಾರಗಳನ್ನು ನ್ಯಾಯಸಮ್ಮತವಾಗಿ, ಸರಳ, ಸಹಜವಾಗಿ ತದಾರರ ಪಟ್ಟಿ ಪರಿಷ್ಕರಿಸಬೇಕು ಎಂದು ತಿಳಿಸಿ ಪ್ರತಿಅರ್ಹ ಆದಿವಾಸಿ ಮತದಾರರ ಪಟ್ಟಿಯಲ್ಲಿ ಇರುವಂತೆ ನೋಡಿಕೊಳ್ಳಬೇಕು ಎಂದರು. ಹಾಡಿಯ ಸಾಕಮ್ಮ, ಕಲ್ಲೂರಯ್ಯ, ಕುಳ್ಳಯ್ಯ, ಮಾದಮ್ಮ ಮಾತನಾಡಿ ಜಾತಿಪತ್ರ, ಹುಟ್ಟಿದ ದಿನಾಂಕ ಪತ್ರ, ಅಸ್ತಿಹಕ್ಕು ಪತ್ರ, ವಾಸದೃಡೀಕರಣ ಇವುಗಳನ್ನು ಅಧಿಕಾರಿಗಳು ಹಾಡಿಗೆ ಬಂದು ಪರಿಶೀಲಿಸಿ ಈ ಎಲ್ಲಾ ದಾಖಲೆ ನೀಡಬೇಕು. ಅಗತ್ಯ ಬಿದ್ದರೆ ತಾಸೀಲ್ದಾರ್ ಹಾಗುಗಿರಿಜನ ಅಧಿಕಾರಿಗೆ ಪ್ರತಿ ಹಾಡಿಯಿಂದಮನವಿಸಲ್ಲಿಸುತ್ತೇವೆ ಎಂದರಲ್ಲದೆ ಎಸ್ ಐ ಆರ್ ಅನ್ನು ಸರ್ಕಾರ ಹಿಂದೆ ಪಡೆಯಲಿ ಎಂದು ಆಗ್ರಹಿಸಿದರು. ಡೀಡ್ ನಿರ್ದೇಶಕ ಡಾ. ಎಸ್ ಶ್ರೀಕಾಂತ್ ಮಾತನಾಡಿ ಬಂಗಾಳದಲ್ಲಿ ಬಾಂಗ್ಲಾ ಜನರು ಒಳ ನುಸುಳಿ ಮತದಾರರ ಪಟ್ಟಿಯಲ್ಲಿ ಸೇರಿ ಮತ ಚಲಾಯಿಸುತ್ತಿದ್ದರು ಎಂದು ಬಿಜೆಪಿ ದೂರುವುದಾದರೆ ಬಾರ್ಡರ್ ಸೆಕ್ಯೂರಿಟಿ ಫೋರ್ಸ್ ಕೇಂದ್ರದ ಅಧೀನದಲ್ಲಿದೆ, 12 ವರ್ಷ ಗಳಿಂದ ಕೇಂದ್ರದಲ್ಲಿ ಅಧಿಕಾರ ನಡೆಸಿದೆ. ಇಂತದರಲ್ಲಿ ವೊಳನುಸುಳಲು ಹೇಗೆ ಸಾಧ್ಯ ಎಂದು ಪ್ರಶ್ನಿಸಿದರು. ಎಸ್ ಐ ಆರ್ ಹೆಸರಲ್ಲಿ ಪ್ರಭುಗಳಾದ ಪ್ರಜೆ ಗಳ ಮತದಾನದ ಹಕ್ಕು ಕಸಿಯುವುದು ಅನ್ಯಾಯ. ಸರಳರೀತಿಯಲ್ಲಿ ಈಹಿಂದೆ ಪರಿಷ್ಕರಿಸುತ್ತಿದ್ದಂತೆ ಈಗಲೂ ಮಾಡಲಿ ಎಂದು ಆಗ್ರಹಿಸಿದರು. ಎಸ್ ಐ ಆರ್ ಹಿಂಪಡೆಯಲು ಘೋಷಣೆ ಕೂಗಿದರು. ಜಾತಾ ತಂಡದ ಉಮೇಶ್ ಮಂಜುನಾಥ್ ಹೇಮಂತ, ಮಮತಾ, ರವಿ ಮಂಜುಳಾ, ಸವಿತಾ, ಹಾಡಿ ಜನ ರೊಡನೆ ಕುಟುಂಬಗಳು ಹೊಂದಿರುವ ದಾಖಲೆ ನೋಡಿದರು. ಪ್ರತಿ ಆದಿವಾಸಿಯ ಹೆಸರು ಮತದಾರರ ಪಟ್ಟಿಯಲ್ಲಿ ಇರುವಂತೆ ನೋಡಿಕೊಳ್ಳಿ ಎಂದರು.

# ಇಂದಿನಿಂದ ಮೊಹರಂ ಹಬ್ಬ ಆರಂಭ



• ಮಲ್ಲಮ್ಮ ನುಡಿ ವಾರ್ತೆ ಮುದಗಲ್

ಬುಧವಾರ ದಿನಾಂಕ 17-06-2026 ರಂದು ಚಂದ್ರಗೋಚರವಾದಲ್ಲಿ ಅಂದು ಹುಸೇನಿ ಆಲಂ ಆಶೂರಖಾನಾ ದರ್ಗಾದಿಂದ ಹಳೆಪೇಟೆಯವರೆಗೆ ಹಸಿರು ಜಂಡಾವನ್ನು ಮೆರವಣಿಗೆಯ ಮೂಲಕ ಮೊಹರಂ ಹಬ್ಬದ ಚಾಲನೆ ನೀಡಲಾಗುವುದು ಎಂದು ಪುರಸಭೆ ಮಾಜಿ ಸದಸ್ಯ ಹಾಗೂ ಚಿರಾಗ್ ಫೌಂಡೇಶನ್ ಅಧ್ಯಕ್ಷ ಮೊಹಮ್ಮದ್ ಸಾಧಿಕಲಿ ಹೇಳಿದರು. ಪಟ್ಟಣದ ಸುದ್ದಿಗಾರರೊಂದಿಗೆ ಮಾತನಾಡಿದ ಅವರು ಪ್ರತಿ ವರ್ಷದಂತೆ ಈ ವರ್ಷವೂ ಸಹ ಮೊಹರಂ ಹಬ್ಬವನ್ನು ಅದ್ದೂರಿಯಾಗಿ ಜರುಗುವುದು. ಒಂದು ವೇಳೆ ಮಂಗಳವಾರ ಚಂದ್ರಗೋಚರಿಸಿದರೆ ಒಂದು ದಿನ ಮುಂಚಿತವಾಗಿ ಕಾರ್ಯಕ್ರಮ ನಡೆಯಲಿದೆ ಎಂದರು. ದಿನಾಂಕ:18-06-2026 ಗುರುವಾರದಂದು ಆಲಂಗಳ ಪ್ರತಿಷ್ಠಾಪನೆ ಮಾಡಲಾಗುತ್ತದೆ. ಅಮವಾಸ್ಯೆ ಮರುದಿನ ಚಂದ್ರನನ್ನು ಕಂಡು ಗುದ್ದಲಿ ಪೂಜೆ ನೆರವೇರಿಸಿ ಸಂಜೆ ವೇಳೆಯಲ್ಲಿ ಕಿಲ್ಲಾ ದರ್ಗಾದಲ್ಲಿ ಹಜರತ್ ಹುಸೇನ್ ಮತ್ತು ಮೇಗಳಪೇಟೆ ದರ್ಗಾದಲ್ಲಿ ಹಜರತ್ ಹಸನ್ ಆಲಂಗಳ ಮುಜಾವರರು ಪ್ರತಿಷ್ಠಾಪನೆ ಮಾಡುತ್ತಾರೆ.. ಹತ್ತು ದಿನದವರೆಗೂ ನಡೆಯುವ ಮೊಹರಂ ಹಬ್ಬ ಆಚರಣೆಯಲ್ಲಿ ಪ್ರತಿಯೊಂದು ದಿನ ಆಲಂಗಳಿಗೆ ವಿವಿಧ ಧಾರ್ಮಿಕ ಕಾರ್ಯಕ್ರಮ ನಡೆಯುತ್ತವೆ. ಮೊಹರಂ ನಾಲ್ಕನೇ ದಿನದಂದು ಹೊರ ಜಿಲ್ಲೆಗಳಿಂದ ಮತ್ತು ಗ್ರಾಮಗಳಿಂದ ದೇವರ ಬಾವಿಯಲ್ಲಿ ಆಲಂ ಮಹಾ ಮಜ್ಜನ ಕಾರ್ಯಕ್ರಮ ಜರುಗಲಿದೆ. 5ನೇ ದಿನ ಜಿಹಾಲ, 6ನೇ ಅಬ್ಬಾಸ್ ಅಲಿ ಪೀರ ರವರ ಸವಾರಿ, 7ನೇ ದಿನ ಖಾಸಿಂ ಪೀರಾರವರ ಸವಾರಿ, 8ನೇ ದಿನ ಮೌಲಾಲಿ ಆಲಂ ಸವಾರಿ, 9ನೇ ದಿನ ಶನಿವಾರ ಹಸೇನ್ - ಹುಸೇನ್ ರವರಸವಾರಿ (ಕತ್ತಲ ರಾತ್ರಿ) 10ನೇ ದಿನ ಶನಿವಾರ ದಫನ್ (ಆಶುರಾ) ಕಾರ್ಯಕ್ರಮ 29 ತಾರೀಖು ಸೋಮವಾರ ರಂದು ಕೊನೆಯ ದಿನ ಜಿಯಾರತ್ ಕಾರ್ಯಕ್ರಮನೇರವೇರುತ್ತದೆ. ಪಟ್ಟಣದಲ್ಲಿ ಹತ್ತು ದಿನಗಳ ಕಾಲ ಆಲಂಗಳ ಧಾರ್ಮಿಕ ಕಾರ್ಯಕ್ರಮ ನೇರವೇರಿಸಿದರೆ ಹಳ್ಳಿಗಳಲ್ಲಿ ಐದು ದಿನಗಳ ಆಲಂಗಳ ಪ್ರತಿಷ್ಠಾಪಿಸಲಾಗುತ್ತದೆ. ಭಕ್ತರಿಂದ ನಿತ್ಯ5 ದಿನ ಧಾರ್ಮಿಕ ಪೂಜೆ ಕಾರ್ಯಕ್ರಮ ನಡೆಯಲಿವೆ. ಭಕ್ತರು ಆಲಂದೇವರಿಗೆ ಕೆಂಪು ಸಕ್ಕರೆ, ಕೊಬ್ಬರಿ, ಉತ್ತತ್ತಿ, ಬೆಳ್ಳಿ ಕುದುರೆಗಳುನೀಡಿ ಹರಕೆ ತೀರಿಸುತ್ತಾರೆ ಧಾರ್ಮಿಕ ಕಾರ್ಯಕ್ರಮ ನೇರವೇರುತ್ತದೆ ಎಂದು ಹೇಳಿದರು. ಅಮೀರ್ ಬೇಗ್ ಉಸ್ತಾದ್, ಮಾಸುಮ್ ಶರೀಫ್ ,ಮೀರುವ ಮಕಂದಾರ, ರಹಿಮಾನ್ ಅರಬ್, ರಾಜಾಸಾಬ್ ಮಂಡಿ, ಸೈಯ್ಯದ್ ಹುಸೇನ್ ಖಾದ್ರಿ, ಮಾಬುಹುಸೇನ್ ಜಂಬಾಳೆ, ಗಯಾಜುದ್ದಿನ್ ಇದ್ದರು.

# ವಿದ್ಯಾರ್ಥಿಗಳಿಗೆ ನೋಟ್‌ಬುಕ್, ಪೆನ್ನು ವಿತರಣೆ



• ಮಲ್ಲಮ್ಮ ನುಡಿ ವಾರ್ತೆ ಕಮಲನಗರ

ತಾಲೂಕಿನ ಡಿಗ್ಗಿ ಗ್ರಾಮದ ಸರಕಾರಿ ಹಿರಿಯ ಪ್ರಾಥಮಿಕ ಶಾಲೆಯಲ್ಲಿ ಹಳೆ ವಿದ್ಯಾರ್ಥಿಗಳ ಬಳಗದ ವತಿಯಿಂದ ಪ್ರತಿಯೊಬ್ಬ ವಿದ್ಯಾರ್ಥಿಗೂ 7 ನೋಟ್‌ಬುಕ್ ಹಾಗೂ 2 ಪೆನ್ನುಗಳನ್ನು ವಿತರಿಸುವ ಕಾರ್ಯಕ್ರಮವು ಅತ್ಯಂತ ಅದ್ದೂ-ರಿಯಾಗಿ ಜರುಗಿತು.

1954-55 ರಲ್ಲಿ ಆರಂಭಗೊಂಡು ಸುಮಾರು 72 ವರ್ಷಗಳ ಸುದೀರ್ಘ ಇತಿಹಾಸ ಹೊಂದಿರುವ ಈ ಶಾಲೆಯ ಹಳೆ ವಿದ್ಯಾರ್ಥಿಗಳು ಒಗ್ಗೂಡಿ, "ನನ್ನ ಶಾಲೆ ನನ್ನ ಕೊಡುಗೆ" ಅಭಿಯಾನದ ಅಡಿಯಲ್ಲಿ 1 ರಿಂದ 8ನೇ ತರಗತಿಯ ವರೆಗಿನ ಎಲ್ಲಾ ಮಕ್ಕಳಿಗೆ ಉಚಿತವಾಗಿ ಲೇಖನ ಸಾಮಗ್ರಿಗಳನ್ನು ವಿತರಿಸಿದರು. ಕಾರ್ಯಕ್ರಮದ ಪ್ರಾಸ್ತಾವಿಕ ನುಡಿಗಳನ್ನಾಡಿದ ಪರಮೇಶ ರಾಂಪುರೆ ಅವರು, "ನನ್ನ ಶಾಲೆ ನನ್ನ ಕೊಡುಗೆ" ಯೋಜನೆಯ ಮೂಲ ಉದ್ದೇಶ ಹಾಗೂ ಪ್ರಸ್ತುತ ದಿನಗಳಲ್ಲಿ ಇದರ ಅವಶ್ಯಕತೆಯ ಬಗ್ಗೆ ಸವಿಸ್ತಾರವಾಗಿ ಮಾತನಾಡಿದರು.

ಬಳಿಕ ಮಾತನಾಡಿದ ಪ್ರಮುಖರಾದ ವಿಜಯಕುಮಾರ ಪಾಟೀಲ, ಶಿವಕುಮಾರ ರಾಮಪೂರೆ, ಮಡಿವಾಳಪ್ಪಾ ಮುರ್ಕೆ, ನಿವೃತ್ತ ಶಿಕ್ಷಕ ಲಿಂಗಾನಂದ ಮಠಪತಿ ಹಾಗೂ ಸಂಗಮನಾಥ ಬಿರಾದಾರ್ ಅವರು, ಗ್ರಾಮೀಣ ಭಾಗದ ವಿದ್ಯಾರ್ಥಿಗಳು ಉತ್ತಮ ಶಿಕ್ಷಣ ಪಡೆದು ಜೀವನದಲ್ಲಿ ಉನ್ನತ ಸಾಧನೆ ಮಾಡಲು ಹಳೆ ವಿದ್ಯಾರ್ಥಿಗಳ ಈ ಕಾರ್ಯ ಪ್ರೇರಣೆಯಾಗಲಿ ಎಂದು ಆಶಿಸಿದರು.

ಇದೇ ಸಂದರ್ಭದಲ್ಲಿ ಎಸ್‌ಡಿಎಂಸಿ ಅಧ್ಯಕ್ಷರಾದ ಸಂತೋಷ ಬನವಾಸೆ ಅವರು ಅಧ್ಯಕ್ಷೀಯ ಭಾಷಣ ಮಾಡಿದರು. ಶಾಲೆಯ ಮುಖ್ಯಗುರುಗಳಾದ ಗೌತಮ ಸಿಂಧೆ, ಸಿಬ್ಬಂದಿಗಳಾದ ಸತೀಶ ಕುಲಾಲ, ಮಲ್ಲಿಕಾರ್ಜುನ ಸರ್, ಮಂಗಲಾ ಮಾನ್ಯ ಹಾಗೂ ಹಳೆ ವಿದ್ಯಾರ್ಥಿಗಳಾದ ಮಹೇಶ ಚಾಂಡೇಶ್ವರೆ, ವಿಜಯಕುಮಾರ ಬನವಾಸೆ, ರಾಜಕುಮಾರ ಕುಂಬಾರಗೆರೆ, ಆಕಾಶ ಪಾಟೀಲ್, ಅಭಿಜಿತ್ ರಾಂಪುರೆ, ವಿರೇಶ ಹಿರೇಮಠ, ಆದಿ ರಾಂಪುರೆ ಸೇರಿದಂತೆ ಪ್ರಮುಖರು ಉಪಸ್ಥಿತರಿದ್ದರು.

ಸಿಆರ್‌ಪಿ ಮಹಾದೇವ ಮಡಿವಾಳ ಅವರು ಕಾರ್ಯಕ್ರಮವನ್ನು ಅತ್ಯಂತ ಅಚ್ಚುಕಟ್ಟಾಗಿ ನಿರೂಪಿಸಿದರು. ಶಾಲಾ ಮಕ್ಕಳು ಅತ್ಯಂತ ಉತ್ಸಾಹದಿಂದ ಲೇಖನ ಸಾಮಗ್ರಿಗಳನ್ನು ಪಡೆದುಕೊಂಡು ಸಂಭ್ರಮಿಸಿದರು.

# ವಿದ್ಯಾರ್ಥಿಗಳಿಗೆ ಉಚಿತ ಬಸ್ ಪಾಸ್ ಸರ್ಕಾರದ ಕ್ರಮ ಸ್ವಾಗತ:ಹೊನ್ನೇಶ

• ಮಲ್ಲಮ್ಮ ನುಡಿ ವಾರ್ತೆ ಯಾದಗಿರಿ



ರಾಜ್ಯ ಸರ್ಕಾರದಿಂದ ಶಾಲಾ ಕಾಲೇಜು ವಿದ್ಯಾರ್ಥಿಗಳಿಗೆ ಉಚಿತಬಸ್ ಪಾಸ್ ಘೋಷಣೆಯನ್ನು ಕಾಂಗ್ರೆಸ್ ಎನ್.ಎಸ್.ಯು.ಐ ಜಿಲ್ಲಾ ಘಟಕ ಅಧ್ಯಕ್ಷ ಹೊನ್ನೇಶ ದೊಡ್ಡಮನಿ ಬಳಿಚಕ್ರ ಸ್ವಾಗತಿಸಿದ್ದಾರೆ. ಈ ಕುರಿತು ಪತ್ರಿಕಾ ಹೇಳಿಕೆ ನೀಡಿರುವ ಅವರು ರಾಜ್ಯದ ಮುಖ್ಯಮಂತ್ರಿ ಡಿ.ಕೆ ಶಿವಕುಮಾರ್ ನೇತೃತ್ವದ ಕಾಂಗ್ರೆಸ್ ಸರ್ಕಾರ ಅಸ್ತಿತ್ವಕ್ಕೆ ಬಂದ ಕ್ಷಣವೇ ಶಾಲಾ ಕಾಲೇಜು ವಿದ್ಯಾರ್ಥಿಗಳಿಗೆ ಉಚಿತ ಬಸ್ ಪಾಸ್ ವಿತರಿಸಲು ಕ್ರಮ ಕೈಗೊಂಡಿರುವುದು ಅತ್ಯಂತ ಸಂತಸದ ವಿಷಯ ರಾಜ್ಯದ ಅದೆಷ್ಟು ಬಡ ವಿದ್ಯಾರ್ಥಿಗಳಿಗೆ ಶಿಕ್ಷಣ ಕಲಿಯಲು ಅನುಕೂಲವಾಗಲಿದೆ ಈ ಹಿಂದೆ ಬಡ ಕೂಲಿ ಕಾರ್ಮಿಕರ ರೈತರ ಮಕ್ಕಳು ಶಾಲಾ ಕಾಲೇಜುಗಳಿಗೆ ತೇರಳಬೇಕಾದರೆ ಪ್ರತಿ ವರ್ಷ ದುಡ್ಡು ಕಟ್ಟಿ ಪಾಸ್ ತೆಗೆದುಕೊಳ್ಳುವ ಪರಿಸ್ಥಿತಿ ಇತ್ತು ಆದರೆ ಈಗ ಉಚಿತ ಬಸ್ ಪಾಸ್ ಜಾರಿಗೆ ತಂದಿದ್ದು ವಿದ್ಯಾರ್ಥಿಗಳ ಪಾಲಿಗೆ ಶುಭ ಸುದ್ದಿ ಡಿ.ಕೆ ಶಿವಕುಮಾರ್ ಅವರು ಕೂಡಾ ಕಾಂಗ್ರೆಸ್ ವಿದ್ಯಾರ್ಥಿ ಘಟಕದಿಂದ ಈ ಮಟ್ಟಕ್ಕೆ ಬೆಳೆದು ಬಂದಿದ್ದು ವಿದ್ಯಾರ್ಥಿಗಳ ಕಷ್ಟವನ್ನು ಅರ್ಥೈಸಿಕೊಂಡು ಉಚಿತ ಬಸ್ ಪಾಸ್ ವಿತರಣೆ ಜಾರಿಗೆ ತಂದಿದ್ದು ರಾಜ್ಯ ಸರ್ಕಾರದ ಈ ನಿರ್ಧಾರದಿಂದ ವಿದ್ಯಾರ್ಥಿಗಳಿಗೆ ತುಂಬಾ ಸಹಾಯ ಮಾಡಿದಂತಾಗಿದೆ ಎಲ್ಲಾ ಶಾಲಾ ಕಾಲೇಜಿನ್ ಸಮಸ್ತ ವಿದ್ಯಾರ್ಥಿ ಮಿತ್ರರು ಉಚಿತ ಬಸ್ ಪಾಸಿನ್ ಸದುಪಯೋಗವನ್ನು ಪಡಿಸಿಕೊಳ್ಳುವಂತೆ ಸಲಹೆ ನೀಡಿದ್ದಾರೆ. ನಮ್ಮ ಕಾಂಗ್ರೆಸ್ ಸರ್ಕಾರ ನುಡಿದಂತೆ ನಡೆದಿದೆ ಹಲವು ಹತ್ತಾರು ಯೋಜನೆಗಳನ್ನು ಜಾರಿಗೆ ತಂದು ಬಡವರ ಪಾಲಿಗೆ ಬೆಳಕಾಗಿದೆ

ಈ ಯೋಜನೆ ಜಾರಿಗೆ ತರುವಲ್ಲಿ ಶ್ರಮಿಸಿದ ರಾಜ್ಯದ ನೂತನ ಮುಖ್ಯಮಂತ್ರಿ ಡಿ.ಕೆ ಶಿವಕುಮಾರ ಹಾಗೂ ಸಾರಿಗೆ ಸಚಿವ ಬೈರತಿ ಸುರೇಶ್ ರವರನ್ನು ಕಾಂಗ್ರೆಸ್ ಎನ್.ಎಸ್.ಯು.ಐ ಜಿಲ್ಲಾ ಘಟಕದ ಅಧ್ಯಕ್ಷ ಹೊನ್ನೇಶ ದೊಡ್ಡಮನಿ ಬಳಿಚಕ್ರ ರಾಜ್ಯದ ವಿದ್ಯಾರ್ಥಿಗಳ ಪರವಾಗಿ ಅಭಿನಂದನೆ ತಿಳಿಸಿದ್ದಾರೆ.



ಬಸವಕಲ್ಯಾಣ:– ತಾಲೂಕಿನ ಸುಕ್ಷೇತ್ರ ಹಾರಕೂಡ ಶ್ರೀಮಠಕ್ಕೆ ಭೇಟಿ ನೀಡಿದ ವಿಜಯಪುರದ ಕರ್ನಾಟಕ ರಾಜ್ಯ ಅಕ್ಕಮಹಾದೇವಿ ಮಹಿಳಾ ವಿಶ್ವವಿದ್ಯಾಲಯದ ಕುಲಪತಿಗಳಾದ ಪ್ರೊ. ವಿಜಯಾ ಬಿ. ಕೋರಿಶೆಟ್ಟಿ ಯವರಿಗೆ ಪೀಠಾಧಿಪತಿಗಳಾದ ಪೂಜ್ಯಶ್ರೀ ಡಾ. ಚನ್ನವೀರ ಶಿವಾಚಾರ್ಯರು ಸತ್ಕರಿಸಿ ಗೌರವಿಸಿದರು. ಈ ಸಂದರ್ಭದಲ್ಲಿ ವಿಜಯಕುಮಾರ ಎಸ್. ಹಿರೇಮಠ ಹಿರೂರ, ಮಲ್ಲಿನಾಥ ಹಿರೇಮಠ ಹಾರಕೂಡ, ಬಸವನಗೌಡ ಬಿರಾದಾರ, ಮಹೇಶ ದೇಗಾಂವ ಇನ್ನಿತರರು ಉಪಸ್ಥಿತರಿದ್ದರು. (ಮಲ್ಲಮ್ಮ ನುಡಿ ಚಿತ್ರ)

## ಜೂ 20ರಂದು ಮಾಹಿತಿ ಹಕ್ಕು ಕಾಯ್ದೆ ಕುರಿತು ಕಾರ್ಯಾಗಾರ ಅಧಿಕಾರಿಗಳು ಕಡ್ಡಾಯವಾಗಿ ಭಾಗಿಯಾಗುವಂತೆ ಜಿಲ್ಲಾಧಿಕಾರಿ ಸೂಚನೆ

• ಮಲ್ಲಮ್ಮ ನುಡಿ ವಾರ್ತೆ ರಾಯಚೂರು



ಜೂ 16: ಮಾಹಿತಿ ಹಕ್ಕು ಕಾಯ್ದೆ–2005ರ ಪರಿಣಾಮಕಾರಿ ಅನುಷ್ಠಾನ, ಸಾರ್ವಜನಿಕ ಮಾಹಿತಿ ಅಧಿಕಾರಿಗಳ ಕರ್ತವ್ಯಗಳು ಹಾಗೂ ಮಾಹಿತಿ ಹಕ್ಕು ಸಂಬಂಧಿತ ವಿಷಯಗಳ ಕುರಿತು ಕಾರ್ಯಾಗಾರ ಮತ್ತು ಸಂವಾದ ಕಾರ್ಯಕ್ರಮದಲ್ಲಿ ರಾಯಚೂರು ನಗರದ ಜಿಲ್ಲಾ ಪಂಚಾಯತ್ ಸಭಾಂಗಣದಲ್ಲಿ ಇದೇ ಜೂನ್ 20ರ ಬೆಳಿಗ್ಗೆ 10ಗಂಟೆಗೆ ಹಮ್ಮಿಕೊಳ್ಳಲಾಗಿದ್ದು, ಜಿಲ್ಲೆಯ ಎಲ್ಲಾ ಇಲಾಖೆಗಳ ಅಧಿಕಾರಿಗಳು ಹಾಜರಾಗುವಂತೆ ಜಿಲ್ಲಾಧಿಕಾರಿಗಳಾದ ಪೂವಿತಾ ಎಸ್ ಅವರು ಕೋರಿದ್ದಾರೆ.

ಕರ್ನಾಟಕ ಮಾಹಿತಿ ಆಯೋಗದ ಕಲಬುರಗಿ ಪೀಠದ ರಾಜ್ಯ ಮಾಹಿತಿ ಆಯುಕ್ತರಾದ ಬಿ. ವೆಂಕಟ ಸಿಂಗ್ ಹಾಗೂ ಬೆಂಗಳೂರು ಪೀಠದ ರಾಜ್ಯ ಮಾಹಿತಿ ಆಯುಕ್ತರುಗಳಾದ ರಾಮನ್ ಕೆ. ಮತ್ತು ಡಾ.ರಿಚರ್ಡ್ ವಿನ್ಸೆಂಟ್ ಡೊಸೋಜ ಅವರು ಜೂನ್.20ರ ಶನಿವಾರ ದಂದು ರಾಯಚೂರು ಜಿಲ್ಲೆಗೆ ಆಗಮಿಸಿ, ಮಾಹಿತಿ ಹಕ್ಕು ಕಾಯ್ದೆ–2005ರ ಪರಿಣಾಮಕಾರಿ ಅನುಷ್ಠಾನ, ಸಾರ್ವಜನಿಕ ಮಾಹಿತಿ ಅಧಿಕಾರಿಗಳ ಕರ್ತವ್ಯಗಳು ಹಾಗೂ ಮಾಹಿತಿ ಹಕ್ಕು ಸಂಬಂಧಿತ ವಿಷಯಗಳ ಕುರಿತು ಕಾರ್ಯಾಗಾರ ಮತ್ತು ಸಂವಾದ ಕಾರ್ಯಕ್ರಮ ನಡೆಸಲಿದ್ದಾರೆ.

ಈ ಕಾರ್ಯಾಗಾರದಲ್ಲಿ ಜಿಲ್ಲೆಯ ಎಲ್ಲಾ ಇಲಾಖೆಗಳ ಜಿಲ್ಲಾ ಮಟ್ಟದ ಅಧಿಕಾರಿಗಳು, ಜಿಲ್ಲಾ ಪಂಚಾಯತ್ ವ್ಯಾಪ್ತಿಯ ಅಧಿಕಾರಿಗಳು, ಕಂದಾಯ ಇಲಾಖೆಯ ಅಧಿಕಾರಿಗಳು, ತಾಲೂಕು ಮಟ್ಟದ ಅಧಿಕಾರಿಗಳು, ಪೊಲೀಸ್ ಇಲಾಖೆಯ ಅಧಿಕಾರಿಗಳು, ಗ್ರಾಮ ಪಂಚಾಯತ್ ಅಭಿವೃದ್ಧಿ ಅಧಿಕಾರಿಗಳು (ಪಿಡಿಒ), ಗ್ರಾಮ ಪಂಚಾಯತ್ ಕಾರ್ಯದರ್ಶಿಗಳು ಹಾಗೂ ಎಲ್ಲಾ ಸಾರ್ವಜನಿಕ ಮಾಹಿತಿ ಅಧಿಕಾರಿಗಳು ಕಡ್ಡಾಯವಾಗಿ ನಿಗದಿತ ಸಮಯಕ್ಕೆ ಕಾರ್ಯಾಗಾರದಲ್ಲಿ ಭಾಗವಹಿಸುವಂತೆ ಜಿಲ್ಲಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಗ್ಯಾರಂಟಿ ಯೋಜನೆಗಳ ಪ್ರಗತಿ ಪರಿಶೀಲನೆ ಸಭೆ



• ಮಲ್ಲಮ್ಮ ನುಡಿ ವಾರ್ತೆ ಕೊಟ್ಟೂರು

ಕೊಟ್ಟೂರು ತಾಲೂಕು ಪಂಚಾಯಿತಿ ಸಭಾಂಗಣದಲ್ಲಿ ಮಂಗಳವಾರ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿ ಅಧ್ಯಕ್ಷರಾದ ಶ್ರೀ ಹೊಸಮನಿ ಅನಿಲ್ ಅವರ ಅಧ್ಯಕ್ಷತೆಯಲ್ಲಿ ಪ್ರಗತಿ ಪರಿಶೀಲನೆ ಸಭೆ ಜರುಗಿತು.ಗ್ಯಾರಂಟಿ ಯೋಜನೆಗಳಾದ ಗೃಹಲಕ್ಷ್ಮಿ, ಗೃಹ ಜ್ಯೋತಿ, ಶಕ್ತಿ, ಯುವ ನಿಧಿ, ಅನ್ನ ಭಾಗ್ಯ ಯೋಜನೆಗಳ ಕುರಿತು ಚರ್ಚಿಸಿದರು. ಶಕ್ತಿ ಯೋಜನೆ: ಜಿಲ್ಲಾ ಕೇಂದ್ರಕ್ಕೆ ಹೋಗಿ ಬರಲು ಅನುಕೂಲವಾಗುವುದಕ್ಕೆ ಹೆಚ್ಚಿನ ಬಸ್ ವ್ಯವಸ್ಥೆ ಮಾಡುವಂತೆ ಹಿಂದಿನಸಭೆಯಲ್ಲಿ ತಿಳಿಸಲಾಗಿತ್ತು. ಅದರಂತೆ ಜಿಲ್ಲಾ ಕೇಂದ್ರದಿಂದ ಕೊಟ್ಟೂರು,ಹರಪನಹಳ್ಳಿ ಮಾರ್ಗವಾಗಿ ಬಸ್ ವ್ಯವಸ್ಥೆ ಕಲ್ಪಿಸಿರುವುದಾಗಿ ಸಾರಿಗೆ ಅಧಿಕಾರಿ ಎಚ್.ಕೆ.ವಿಶ್ವನಾಥ್ ಸಭೆಗೆ ಮಾಹಿತಿ ನೀಡದರು.ರಾತ್ರಿ 8 ಗಂಟೆಯ ನಂತರ ಜಿಲ್ಲಾ ಕೇಂದ್ರಕ್ಕೆ ಸಂಪರ್ಕಿಸುವ ಕೊಟ್ಟೂರು–ಹೊಸಪೇಟೆಗೆ ರಾತ್ರಿ ಬಸ್ ವ್ಯವಸ್ಥೆ ಕಲ್ಪಿಸುವಂತೆ ಸದಸ್ಯರು ಒತ್ತಾಯಿಸಿದರು.ಇದಕ್ಕೆ ಉತ್ತರಿಸಿದ ಸಾರಿಗೆ ಘಟಕದ ಸಿಬ್ಬಂದಿ ಮೇಲ್ವಿಚಾಕರಾದ ಶ್ರೀ ಎಚ್. ಕೆ.ವಿಶ್ವನಾಥ್ ಅವರು ಮೇಲಧಿಕಾರಿಗಳ ಗಮನಕ್ಕೆ ತರುವುದಾಗಿ ಉತ್ತರಿಸಿದರು.ಅನ್ನ ಭಾಗ್ಯ: ಆಹಾರ ನಿರೀಕ್ಷಕರಾದ ಕಮಲಮ್ಮ ಅವರು ಮಾತನಾಡಿ, ಪಡಿತರ ಚೀಟಿ ಗಳಲ್ಲಿ ಸದ್ಯಕ್ಕೆ ಸೇರ್ಪಡೆ, ತಿದ್ದುಪಡೆಹೆ ಅವಕಾಶವಿದೆ, ಹೊಸ ಕಾರ್ಡ್ ಗಳ ಅರ್ಜಿಗೆ ಇನ್ನೂ ಅವಕಾಶ ನೀಡಿಲ್ಲ. ಅದೇರೀತಿಯಾಗಿ ಇ ಕೆವೈಸಿ ಯನ್ನು ಪ್ರತಿಯೊಬ್ಬರೂ ಮಾಡಿಸಬೇಕು ಎಂದು ತಿಳಿಸಿದರು. ಗ್ಯಾರಂಟಿ ಯೋಜನೆಯ ಅಧ್ಯಕ್ಷರು ಮಾತನಾಡಿ, ಸೊಸೈಟಿಗಳ ಎದುರು ಪಂಚಗ್ಯಾರಂಟಿ ಯೋಜನೆಗಳ ಪ್ರಚಾರಕ್ಕಾಗಿ ಬ್ಯಾನರ್ ಅಳವಡಿಕೆಗೆ ಕ್ರಮವಹಿಸುವಂತೆ ತಿಳಿಸಿದರು. ಪಡಿತರ ವಿತರಣೆ ಸಂದರ್ಭದಲ್ಲಿ ಒಬ್ಬೊಬ್ಬರಿಂದ ಒಂದು ಕೆಜಿ ಅಕ್ಕಿಯನ್ನು ಪಡೆಯುವುದು ಕಂಡು ಬರುತ್ತಿದೆ ಇದರ ವಿರುದ್ಧ ಕ್ರಮವಹಿಸುವಂತೆ ಸದಸ್ಯರೊಬ್ಬರು ಸಭೆಯ ಗಮನಕ್ಕೆ ತಂದರು.. ಇದಕ್ಕೆ ಪೂರಕವಾಗಿ ಮಾನ್ಯ ಕಾರ್ಯನಿರ್ವಾಹಕ ಅಧಿಕಾರಿಗಳು ಶ್ರೀ ಡಾ.ಬಿ.ಆನಂದಕುಮಾರ ಅವರು ಪ್ರತಿಕ್ರಿಯಿಸಿ, ಪಡಿತರ ವಿತರಣೆ ಸಂದರ್ಭದಲ್ಲಿ ಅಕ್ಕಿ ಪಡೆಯುವವರ ವಿರುದ್ಧ ನೋಟಿಸ್ ನೀಡುವಂತೆ ತಿಳಿಸಿದರು.ಗೃಹಜ್ಯೋತಿ : ಜೆಸ್ಕಾಂನ ಸಹಾಯಕ ಇಂಜಿನಿಯರ್ ತಿಪ್ಪೇಶ್ ಅವರು ಮಾತನಾಡಿ, ಮಳೆಯ ಸಂದರ್ಭದಲ್ಲಿ ಬಿದ್ದಿರುವ 83 ಕಂಬಗಳನ್ನು ಬದಲಾಯಿಸಲಾಗಿದೆ. ಟಿಸಿಗಳು ಸುಟ್ಟರೆ ಅಗತ್ಯ ಟಿಸಿಗಳು ಇವೆ. ಲೈನ್ ಗಳಿಗೆ ತಂತಿ ತಾಗುವುದರಿಂದ ಸಮಸ್ಯೆಯಾಗಲಿದ್ದು, ಕೊಂಬೆಗಳನ್ನು ತೆರವು ಮಾಡಲಾಗುತ್ತಿದೆ ಎಂದರು.ಪೂರಕವಾಗಿ ಅಧ್ಯಕ್ಷರು ಮಾತನಾಡಿ, ಹಳ್ಳಿಗಳಲ್ಲಿ ಕೊಂಡಿ ಹಾಕುವುದನ್ನು ತಪ್ಪಿಸಲು ಕ್ರಮವಹಿಸಬೇಕು ಎಂದರು.ಕೊಂಡಿ ಹಾಕಿಕೊಳ್ಳದಂತೆ ಅಭಿಯಾನದ ಮೂಲಕ ಜಾಗೃತಿ ಮೂಡಿಸಲಾಗುತ್ತಿದೆ ಎಂದರು.ಗಜಾಪುರ ಗ್ರಾಮದಲ್ಲಿ ಹಳೆ ಕಂಬಗಳನ್ನು ಅತೀತುರ್ತಾಗಿ ಬದಲಾಯಿಸುವಂತೆ ಜೆಸ್ಕಾಂ ಅಧಿಕಾರಿಗೆ ಮಾನ್ಯ ಕಾರ್ಯನಿರ್ವಾಹಕ ಅಧಿಕಾರಿಗಳು ತಿಳಿಸಿದರು.ಗೃಹಲಕ್ಷ್ಮೀ : ಗೃಹ ಲಕ್ಷ್ಮೀ ಹಣ ಫಲಾನುಭವಿಗಳ ಖಾತೆಗೆ ಫೆಬ್ರವರಿ ವರೆಗೆ ಜಮಾ ಆಗಿದೆ, ಇನ್ನೂ ಮೂರು ತಿಂಗಳು ಬಾಕಿ ಇದೆ ಎಂದು ಸಿಡಿಪಿಒ ಶ್ರೀಮತಿ ಮಾಲುಂಬಿ ಅವರು ಸಭೆಗೆ ತಿಳಿಸಿದರು. ಮರಣ ಹೊಂದಿದ ಫಲಾನುಭವಿಗಳ ನ್ನು ಪತ್ತೆಹಚ್ಚಿ ಗೃಹ ಲಕ್ಷ್ಮಿ ಹಣ ಅವರ ಖಾತೆಗೆ ಹೋಗದಂತೆ ಕ್ರಮವಹಿಸಲಾಗುತ್ತಿದೆ. ಪ್ರತಿ ತಿಂಗಳು ಮರಣ ಹೊಂದಿದ ಫಲಾನುಭವಿಗಳ ಮಾಹಿತಿಯನ್ನು ಪಡೆಯಲಾಗುತ್ತಿದೆ ಎಂದು ಮಾಹಿತಿ ನೀಡಿದರು.ಸಮಿತಿಯ ಸದಸ್ಯಕಾರ್ಯದರ್ಶಿಗಳೂ ಆದ ಮಾನ್ಯ ಕಾರ್ಯನಿರ್ವಾಹಕ ಅಧಿಕಾರಿಗಳು ತಾಲೂಕು ಪಂಚಾಯಿತಿ ಕೊಟ್ಟೂರು ಶ್ರೀ ಡಾ.ಬಿ.ಆನಂದ ಕುಮಾರ, ಸಮಿತಿ ಸದಸ್ಯರಾದ ಶ್ರೀ ಪ್ರಭುದೇವ, ಶ್ರೀಮತಿ ಸುಶೀಲಮ್ಮ, ಎನ್.ಚಂದ್ರಪ್ಪ, ಶ್ರೀ ಮಾರಪ್ಪ, ಶ್ರೀಮತಿ ಗಾಯತ್ರಿ ಎ.ಎಸ್, ಶ್ರೀ ಶಿವರಾಜ್ ಟಿ, ಶ್ರೀ ಪಿ.ಕೆ.ಇಂದ್ರಜಿತ್, ಶ್ರೀ ತಿರುಕಪ್ಪ ಕರಡಿ, ಶ್ರೀ ಆನಂದ, ಮಾಲ್ವಿ ಜಮೀರ್ ಖಾನ್, ಉಮಾಪತಿ ಸ್ವಾಮಿ ಎಂ,ಎಂ, ವಿಷಯ ನಿರ್ವಾಹಕರು, ತಾಪಂ ಸಿಬ್ಬಂದಿ ಇದ್ದರು.

## ಧ್ವನಿ ಸಂಘದ ತಾಲೂಕಾ ಪದಾಧಿಕಾರಿಗಳ ಆಯ್ಕೆ



• ಮಲ್ಲಮ್ಮ ನುಡಿ ವಾರ್ತೆಯಲಬುರ್ಗಾ

ಪಟ್ಟಣದ ಪ್ರವಾಸಿ ಮಂದಿರದಲ್ಲಿ ಜೂ.16 ರಂದು ಬೆಳಿಗ್ಗೆ 11–30 ಗಂಟೆಗೆ ಕರ್ನಾಟಕ ಕಾರ್ಯನಿರತ ಪತ್ರಕರ್ತರ ಧ್ವನಿ ಸಂಘಟನೇಯ ತಾಲೂಕಾ ನೂತನ ಪದಾಧಿಕಾರಿಗನ್ನು ಆಯ್ಕೆಮಾಡಲಾಗಿತು. ತಾಲೂಕಾ ಗೌರವಾಧ್ಯಕ್ಷ ಶರಣಬಸಪ್ಪ.ಕೆ.ದಾನಕೈ, ಅಧ್ಯಕ್ಷ ಶಿವಮೂರ್ತಿ ಇಟಗಿ.ಪ್ರಧಾನ ಕಾರ್ಯಧರ್ಶಿ ವಿ.ಎಸ್.ಶಿವಪ್ಪಯ್ಯನಮಠ.ಉಪಾಧ್ಯಕ್ಷ ಸಿ.ಎ.ಆದಿ ಹಾಗೂ ದೇವರಾಜ ದೊಡ್ಡಮನಿ,ಖಜಾಂಜಿ ಶಶಿಧರ ಹೊಸ್ಮನಿ,ಸಂಘಟನಾ ಕಾರ್ಯದರ್ಶಿ ಮೌನೇಶ ಮದ್ಲೂರ.ಸಹಕಾರ್ಯದರ್ಶಿ ಕಳಕೇಶ ಬೇವಿನಗಿಡದ ಮತ್ತು ಶರಣಪ್ಪ ಆಡೀನ,ಕಾರ್ಯ ಕಾರಣಿ ಸಮಿತಿ ಸದಸ್ಯರಾಗಿ ಈರಣ್ಣ ತೋಟದ, ಕು.ಯಲ್ಲಮ್ಮ ರಾಠೋಡ ಇವರನ್ನು ಸರ್ವಾನುಮತದಿಂದ ಆಯ್ಕೆ ಮಾಡಲಾಯಿತು. ಸಂಘದ ಅಧ್ಯಕ್ಷ ಶಿವಮೂರ್ತಿ ಇಟಗಿ ಇವರ ಅದ್ಯಕ್ಷತೆಯಲ್ಲಿ ಜರುಗಿತು.

## ಪ್ರಧಾನಮಂತ್ರಿ ವಿಕಸಿತ ಭಾರತ ಯೋಜನೆಗೆ ಉದ್ಯೋಗ ಹೆಚ್ಚಿಸುವ ಗುರಿ

• ಮಲ್ಲಮ್ಮ ನುಡಿ ವಾರ್ತೆ ರಾಯಚೂರು




ಜೂ 16: 2025ರ ಆಗಸ್ಟ್ 15ರಂದು ಪ್ರಧಾನಿ ನರೇಂದ್ರ ಮೋದಿ ಅವರು ಪ್ರಾರಂಭಿಸಿದ ಪ್ರಧಾನಮಂತ್ರಿ ವಿಕಸಿತ ಭಾರತ ಉದ್ಯೋಗ ಯೋಜನೆಯು ಭಾರತದಲ್ಲಿ ಖಾಸಗಿ ವಲಯದಲ್ಲಿ ಮೊದಲ ಬಾರಿಗೆ ಉದ್ಯೋಗಾಕಾಂಕ್ಷಿಗಳಿಗೆ ಉದ್ಯೋಗವನ್ನು ಹೆಚ್ಚಿಸುವ ಗುರಿಯನ್ನು ಹೊಂದಿರುವ ಉದ್ಯೋಗ ಸೃಷ್ಟಿ ಯೋಜನೆಯಾಗಿದೆ ಎಂದು ರಾಯಚೂರಿನ ಪ್ರಾದೇಶಿಕ ಸಹಾಯಕ ಭವಿಷ್ಯ ನಿಧಿ ಆಯುಕ್ತರಾದ ನಿರಾಜ್ ಕುಮಾರ್ ಅವರು ಹೇಳಿದರು.ಜೂನ್ 16ರ ಮಂಗಳವಾರ ದಂದು ನಗರದ ಇಪಿಎಫ್ ಕಚೇರಿಯಲ್ಲಿ ಹಮ್ಮಿಕೊಳ್ಳಲಾಗಿದ್ದ ಪತ್ರಿಕಾಗೋಷ್ಠಿಯನ್ನು ಉದ್ದೇಶಿಸಿ ಅವರು ಮಾತನಾಡಿದರು.

ಯೋಜನಯಡಿ 1 ಲಕ್ಷ ಕೋಟಿ ರೂ. ವೆಚ್ಚದೊಂದಿಗೆ ಈ ಯೋಜನೆಯು 2025ರ ಆಗಸ್ಟ್ 1ರಿಂದ 2027ರ ಜುಲೈ 31ರ ಅವಧಿಯಲ್ಲಿ 3.5 ಕೋಟಿ ಉದ್ಯೋಗಗಳನ್ನು ಸೃಷ್ಟಿಸುವ ಗುರಿಯನ್ನು ಹೊಂದಿದೆ. ಈ ಯೋಜನೆಯು ಎರಡು ವಿಭಾಗಗಳನ್ನು ಒಳಗೊಂಡಿದ್ದು, ಭಾಗ–ಎ ಮೊದಲ ಬಾರಿಗೆ ಕೆಲಸ ಮಾಡುವವರ ಮೇಲೆ ಗಮನ ಕೇಂದ್ರೀಕರಿಸಿದರೆ ಭಾಗ–ಬಿ ಉದ್ಯೋಗದಾತರು ಅಥವಾ ನಿಯೋಜಕರ ಮೇಲೆ ಗಮನ ಕೇಂದ್ರೀಕರಿಸಲಾಗಿದೆ ಎಂದರು.ಈ ಮುನ್ನ ಈ ಯೋಜನೆಗೆ ಉದ್ಯೋಗ ಸಂಬಂಧಿತ ಪ್ರೋತ್ಸಾಹಕ ಯೋಜನೆ ಎಂದು ಹೆಸರಿಸಲಾಗಿತ್ತು. 2025ರ ಆಗಸ್ಟ್ 1 ರಂದು ಯೋಜನೆಯ ಹೆಸರನ್ನು ವಿಕಸಿತ ಭಾರತ ಉದ್ಯೋಗ ಯೋಜನೆ ಎಂಬ ಹೆಸರನ್ನು ನೀಡಲಾಗಿದ್ದು, ಆ.15ರ ಸ್ವಾತಂತ್ರ್ಯ ದಿನಾಚರಣೆಯ ಭಾಷಣದ ವೇಳೆ ಪ್ರಧಾನಿ ನರೇಂದ್ರ ಮೋದಿ ಅವರು ಅಧಿಕೃತವಾಗಿ ಈ ಯೋಜನೆಯನ್ನು ಘೋಷಿಸಿದರು ಎಂದರು.ಯೋಜನೆಯಡಿಯಲ್ಲಿ ಖಾಸಗಿ ವಲಯದಲ್ಲಿ ತಮ್ಮ ಮೊದಲ ಉದ್ಯೋಗವನ್ನು ಪಡೆಯುವ ಯುವ ಉದ್ಯೋಗಿಳು 15,000 ರೂಪಾಯಿಗಳ ಪ್ರೋತ್ಸಾಹವನ್ನು ಪಡೆಯುತ್ತಾರೆ. ಅದನ್ನು ನೇರವಾಗಿ ಅವರ ಬ್ಯಾಂಕ್ ಖಾತೆಗಳಿಗೆ ವರ್ಗಾಯಿಸಲಾಗುತ್ತದೆ. ಈ ಪ್ರೋತ್ಸಾಹಕವನ್ನು ಎರಡು ಕಂತುಗಳಲ್ಲಿ ವಿತರಿಸಲಾಗುತ್ತದೆ. ಮೊದಲನೆಯದು 6 ತಿಂಗಳ ಉದ್ಯೋಗವನ್ನು ಪೂರ್ಣಗೊಳಿಸಿದ ನಂತರ ಮತ್ತು ಎರಡನೆಯದು 12 ತಿಂಗಳುಗಳನ್ನು ಪೂರ್ಣಗೊಳಿಸಿದ ನಂತರ ನೀಡಲಾಗುತ್ತದೆ ಎಂದರು.ಹೆಚ್ಚಿನ ಉದ್ಯೋಗಿಗಳನ್ನು ನೇಮಿಸಿಕೊಳ್ಳಲು ಕಂಪನಿಗಳನ್ನು ಪ್ರೋತ್ಸಾಹಿಸಲು, ಸರ್ಕಾರವು ಎರಡು ವರ್ಷಗಳ ಅವಧಿಗೆ ಪ್ರತಿ ಉದ್ಯೋಗಿಗೆ ತಿಂಗಳಿಗೆ 3,000 ರೂ. ಪ್ರೋತ್ಸಾಹವನ್ನು ನೀಡುತ್ತದೆ. ಭಾರತವನ್ನು ಉತ್ಪಾದನಾ ಕೇಂದ್ರವನ್ನಾಗಿ ಮಾಡುವ ಗುರಿಯೊಂದಿಗೆ ಈ ವಲಯದ ಕಂಪನಿಗಳು ಹೆಚ್ಚುವರಿ ಎರಡು ವರ್ಷಗಳವರೆಗೆ ಮೂರನೇ ಮತ್ತು ನಾಲ್ಕನೇ ವರ್ಷದ ಉದ್ಯೋಗ ಈ ಪ್ರೋತ್ಸಾಹವನ್ನು ಪಡೆಯುತ್ತವೆ ಎಂದರು.

ಅರ್ಹತಾ ಮಾನದಂಡಗಳು ಈ ಯೋಜನೆಯು ನೌಕರರ ಭವಿಷ್ಯನಿಧಿ ಸಘಟನೆಯಲ್ಲಿ ನೋಂದಾಯಿಸಿಕೊಂಡಿರುವ, ಮೊದಲ ಬಾರಿಗೆ ಖಾಸಗಿ ವಲಯದಲ್ಲಿ ಕೆಲಸ ಮಾಡುತ್ತಿರುವ ಮತ್ತು ಮಾಸಿಕ 1 ಲಕ್ಷ ರೂ.ದವರೆಗೆ ಸಂಬಳ ಹೊಂದಿರುವ ವ್ಯಕ್ತಿಗಳನ್ನು ಗುರಿಯಾಗಿರಿಸಿಕೊಂಡಿದೆ. ಉದ್ಯೋಗ ಸೃಷ್ಟಿಯನ್ನು ಮತ್ತಷ್ಟು ಉತ್ತೇಜಿಸಲು, ಸುಸ್ಥಿರ ಉದ್ಯೋಗವನ್ನು ಸೃಷ್ಟಿಸುವ ಕಂಪನಿಗಳಿಗೆ ಆರ್ಥಿಕ ಪ್ರೋತ್ಸಾಹಕಗಳನ್ನು ನೀಡಲಾಗುತ್ತದೆ ಎಂದರು.ಉದ್ಯೋಗಿಯು 1 ಆಗಸ್ಟ್ 2025 ರಿಂದ 31 ಜುಲೈ 2025 ರ ನಡುವೆ ನೌಕರರ ಭವಿಷ್ಯ ನಿಧಿಗೆ ಸೇರಬೇಕು.ಆಗಸ್ಟ್ 1, 2025ರ ಮೊದಲು ಅವರು ನೌಕರರ ಭವಿಷ್ಯ ನಿಧಿ ಸಂಘಟನೆಯ ಸದಸ್ಯರಾಗಿರಬಾರದು. ಆಗಸ್ಟ್ 2025 ಅಥವಾ ನಂತರ ಭವಿಷ್ಯನಿಧಿಯ ಕೊಡುಗೆಯನ್ನು ಪಡೆಯಬೇಕು. ಮಾಸಿಕ ಒಟ್ಟು ವೇತನವು ತಿಂಗಳಿಗೆ 1 ಲಕ್ಷ ರೂ. ಕ್ಕಿಂತ ಕಡಿಮೆಯಿರಬೇಕು ಎಂದರು.ಜೂನ್ 19ರಂದು ಪ್ರಧಾನಿಮಂತ್ರಿ ಶ್ರೀ ನರೇಂದ್ರ ಮೋದಿ ಅವರು ನವದೆಹಲಿಯ ವಿಜ್ಞಾನ ಭವನದಿಂದ ಈ ಯೋಜನೆಯ ಫಲಾನುಭವಿಗಳೊಂದಿಗೆ ಸಂವಾದ ನಡೆಸಲಿದ್ದು, ದೇಶದ 200 ಸ್ಥಳಗಳನ್ನು ಈ ಕಾರ್ಯಕ್ರಮದ ನೇರ ಪ್ರಸಾರ ಇರಲಿದೆ. ಅಂದು ಈ ಕಾರ್ಯಕ್ರಮ ರಾಯಚೂರು ನಗರದ ನವೋದಯ ಇನ್ಸೂಟ್ ಆಫ್ ಟೆಕ್ನಾಲಜಿ ನಲ್ಲಿ ಈ ಕಾರ್ಯಕ್ರಮದ ನೇರ ಪ್ರಸಾರವಿದ್ದು, ಇದರಲ್ಲಿ ಜನಪ್ರತಿನಿಧಿಗಳು ಹಾಗೂಈ ಯೋಜನೆಯ ಫಲಾನುಭವಿಗಳು ಸೇರಿದಂತೆ ಇತರರು ಭಾಗಿಯಾಗಲಿದ್ದಾರೆ ಎಂದರು. ಇದೇ ಸಂದರ್ಭದಲ್ಲಿ ಪ್ರಾದೇಶಿಕ ಸಹಾಯಕ ಭವಿಷ್ಯ ನಿಧಿ ಕಚೇರಿಯ ಲೆಕ್ಕಾಧಿಕಾರಿ ಪಿ.ರಾಘವೇಂದ್ರ, ಶರಣಬಸವ, ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ಹಿರಿಯ ಸಹಾಯಕ ನಿರ್ದೇಶಕ ಜಿ.ಸುರೇಶ ಸೇರಿದಂತೆ ಇತರರು ಉಪಸ್ಥಿತರಿದ್ದರು.

## ರಕ್ತದಾನದ ಮಹತ್ವ ತಿಳಿಸುವ ಕಾರ್ಯವಾಗಲಿ: ಎಸ್ಪಿ ಅರುಣಾಂಗ್ಷು ಗಿರಿ

• ಮಲ್ಲಮ್ಮ ನುಡಿ ವಾರ್ತೆ ರಾಯಚೂರು



ಜೂ 16 : ಅಪಘಾತದಿಂದ ಹಾಗೂ ಕಾಯಿಲೆಯಿಂದ ಪ್ರಾಣಾಪಾಯದಲ್ಲಿ ಇರುವವರ ಜೀವ ಉಳಿಸಲು ರಕ್ತದಾನ ಮಹತ್ತರ ಪಾತ್ರ ವಹಿಸುತ್ತದೆ. ರಕ್ತದಾನ ಮಾಡಲು ಜನರು ಮುಂದೆ ಬರಬೇಕು ಎಂದು ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳಾದ ಅರುಣಾಂಗ್ಷು ಗಿರಿ ಅವರು ಹೇಳಿದರು.

ಜೂನ್ 16ರ ಮಂಗಳವಾರ ದಂದು ನಗರದ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ಆವರಣದಲ್ಲಿ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ, ಜಿಲ್ಲಾ ಪೊಲೀಸ್ ಇಲಾಖೆ, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಜಿಲ್ಲಾ ಏಡ್ಸ್ ತಡೆ ಮತ್ತು ನಿಯಂತ್ರಣ ಘಟಕ ರಾಯಚೂರು, ಲಯನ್ಸ್ ಕ್ಲಬ್, ರೆಡ್ ಕ್ರಾಸ್ ಸಂಸ್ಥೆ, ರೆಡ್ ರಿಬ್ಬನ್ ಕ್ಲಬ್, ಎನ್.ಎಸ್.ಎಸ್. ಎನ್.ಸಿ.ಸಿ, ರಾಯಚೂರು ಜಿಲ್ಲೆಯ ಎಲ್ಲ ರಕ್ತ ಕೇಂದ್ರಗಳು ಹಾಗೂ ವಿವಿಧ ಸಂಘ ಸಂಸ್ಥೆಗಳ ಸಂಯುಕ್ತಾಶ್ರಯದಲ್ಲಿ ವಿಶ್ವರಕ್ತದಾನಿಗಳ ದಿನಾಚರಣೆಯ ಅಂಗವಾಗಿ ಜಾಗೃತಿ ಜಾಥಾ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಅವರು ಮಾತನಾಡಿದರು.

ದೇಶದಾದ್ಯಂತ ಆಸ್ಪತ್ರೆಗಳಲ್ಲಿ ಪ್ರತಿದಿನ ಸೂಕ್ತ ಗುಂಪಿನ ರಕ್ತದ ಕೊರತೆಯಿಂದ, ಅಪಘಾತದಲ್ಲಿ ತೀವ್ರ ತರಹದ ಗಾಯದಿಂದ ರಕ್ತಸ್ರಾವವಾಗಿ ಮೃತಪಡುತ್ತಿರುವವರ ಸಂಖ್ಯೆ ಹೆಚ್ಚಾಗಿದೆ. ರಕ್ತದಾನದ ಮಹತ್ವದ ಕುರಿತು ಸಾರ್ವಜನಿಕರಲ್ಲಿ ಮಾಹಿತಿ ಕೊರತೆ ಇದ್ದು, ರಕ್ತದಾನ ಮಾಡುವುದರಿಂದ ಆಗುವ ಪ್ರಯೋಜನಗಳ ಬಗ್ಗೆ ಜನರಲ್ಲಿ ಜಾಗೃತಿ ಮೂಡಿಸಿ ರಕ್ತದಾನದಂತಹ ಮಹತ್ವಪೂರ್ಣ ಕಾರ್ಯದಲ್ಲಿ ಭಾಗವಹಿಸುವಂತೆ ಪ್ರೇರೇಪಿಸಬೇಕು ಎಂದರು.

ರಕ್ತದಾನದಿಂದ ಕೆಲವೇ ದಿನಗಳಲ್ಲಿ ಹೊಸ ರಕ್ತ ಉತ್ಪತ್ತಿಯಾಗಿ ರಕ್ತದೊತ್ತಡ, ಸಕ್ಕರೆ ಕಾಯಿಲೆಯಂತಹ ರೋಗಗಳು ದೂರವಾಗುತ್ತವೆ, ಹೊಸ ಚೈತನ್ಯ, ಉಲ್ಲಾಸ ಕಂಡುಬರುತ್ತದೆ, ಜನತೆಯಲ್ಲಿ ತಪ್ಪು ನಂಬಿಕೆ ಹಾಗೂ ತಿಳುವಳಿಕೆಯಿಂದ ಕೆಲವರು ಕೆಲವರು ರಕ್ತದಾನ ಮಾಡಲು ಮುಂದೆ ಬರುವುದಿಲ್ಲ. ಅಂತವರಿಗೆ ರಕ್ತದ ಅವಶ್ಯಕತೆ ಮಹತ್ವವನ್ನು ಮನವರಿಕೆ ಮಾಡಿ ರಕ್ತದಾನ ಮಾಡಲು ಶಿಬಿರಗಳನ್ನು ಏರ್ಪಡಿಸಬೇಕು ಎಂದರು.

ಈ ವೇಳೆ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ಅಧಿಕಾರಿ ಡಾ.ಸುರೇಂದ್ರ ಬಾಬು ಅವರು ಮಾತನಾಡಿ, ರಕ್ತಕ್ಕೆ ಪರ್ಯಾಯ ವಸ್ತುವಿಲ್ಲ. ಅದನ್ನು ಕೃತಕವಾಗಿ ತಯಾರಿಸಲೂ ಸಾಧ್ಯವಿಲ್ಲ. ವ್ಯಕ್ತಿಯು ಪ್ರತಿ ಮೂರು ತಿಂಗಳಿಗೊಮ್ಮೆ ಒಂದು ಬಾರಿಯಾದರೂ ರಕ್ತದಾನ ಮಾಡಿದಲ್ಲಿ ದೇಹದಲ್ಲಿ ಹೊಸ ರಕ್ತ ಉತ್ಪಾದನೆ ಆಗುವುದರೊಂದಿಗೆ ಹೃದಯಾಘಾತ, ಕ್ಯಾನ್ಸರ್, ಹೃದಯ ಸಂಬಂಧಿ ರೋಗಗಳು ಸೇರಿದಂತೆ ವಿವಿಧ ಕಾಯಿಲೆಗಳಿಂದ ದೂರ ಉಳಿಯಬಹುದು ಎಂದರು.

ಇದೇ ಸಂದರ್ಭದಲ್ಲಿ ಜಿಲ್ಲಾ ಆರ್‌ಸಿಹೆಚ್‌ಓ ಡಾ.ನಂದಿತಾ ಎಮ್‌ಎನ್, ಜಿಲ್ಲಾ ಏಡ್ಸ್ ನಿಯಂತ್ರಣಾಧಿಕಾರಿ ಡಾ.ಮಹಮ್ಮದ್ ಶಾಕೀರ್ ಮೋಹಿಯುದ್ದೀನ್, ಜಿಲ್ಲಾ ಸರ್ವೆಕ್ಷಣಾಧಿಕಾರಿ ಡಾ.ಗಣೇಶ್, ರಿಮ್ಸ್ ಭೋದಕ ಆಸ್ಪತ್ರೆ ಪ್ರಾಂಶುಪಾಲ ಡಾ.ರಾಹುಲ್ ಕೀರ್ತಿ, ನವೋದಯ ಕಾಲೇಜಿನ ಪ್ರಾಂಶುಪಾಲ ಡಾ.ಗುರುದತ್ತ ಪವಾರ್, ಎಎಮ್‌ಇ ಕಾಲೇಜಿನ ದಂತ ವಿಭಾಗದ ಮುಖ್ಯಸ್ಥರಾದ ಡಾ.ಸೋಮನಾಥರೆಡ್ಡಿ,ಡಾ.ಅರುಣಾ ಕುಮಾರಿ, ಎಫ್‌ಡಬ್ಲ್ಯುಓ ಡಾ.ಶಿವಕುಮಾರ್ ನಾರಾ, ಡಾ.ಜಹೀರ್, ಮಹಿಳಾ ಕಾಲೇಜಿನ ಎನ್.ಎಸ್.ಎಸ್. ಅಧಿಕಾರಿ ಡಾ.ಸಂತೋಷ್, ಡಿಹೆಚ್‌ಇಓ ಈಶ್ವರ ಹೆಚ್ ದಾಸಪ್ಪನವರ, ಡಿವೈಹೆಚ್‌ಇಓ ಬಸಯ್ಯ, ಡ್ಯಾಪ್ಕೋ ಮೇಲ್ವಿಚಾರಕರು ಮಲ್ಲಯ್ಯ ಮಠಪತಿ, ಸಿಪಿಓ ಬಸವರಾಜಪ್ಪಗೌಡ ಸೇರಿದಂತೆ ಇಲಾಖೆಯ ಸಿಬ್ಬಂದಿಯವರು, ವೈದ್ಯಕೀಯ ವಿದ್ಯಾರ್ಥಿಗಳು, ಆಶಾ ಕಾರ್ಯಕರ್ತೆಯರು ಉಪಸ್ಥಿತರಿದ್ದರು.

ಜಾಥಾವು ವಿವಿಧ ಘೋಷಗಳೊಂದಿಗೆ ನಗರದ ಪ್ರಮುಖ ಬೀದಿಗಳಲ್ಲಿ ಜಾಗೃತಿ ಜಾಥಾ ಜರುಗಿತು.

## ಮೋದಿ ಸಾಧನೆಗಳು ದೇಶದ ಅಭಿವೃದ್ಧಿಗೆ ಹೊಸ ದಿಕ್ಕು : ಜನಾರ್ದನ ರೆಡ್ಡಿ

• ಮಲ್ಲಮ್ಮ ನುಡಿ ವಾರ್ತೆ ಕೊಪ್ಪಳ




ಪ್ರಧಾನಮಂತ್ರಿನರೇಂದ್ರಮೋದಿ ಅವರ ನೇತೃತ್ವದ ಕೇಂದ್ರ ಸರ್ಕಾರ ಕಳೆದ 12 ವರ್ಷಗಳಲ್ಲಿ ದೇಶದ ಸಮಗ್ರ ಅಭಿವೃದ್ಧಿಗೆ ಅನೇಕ ಐತಿಹಾಸಿಕ ಯೋಜನೆಗಳು ಹಾಗೂ ಜನಪರ ಕಾರ್ಯಕ್ರಮಗಳನ್ನು ಜಾರಿಗೊಳಿಸಿದ್ದು, ಬಡವರು, ರೈತರು, ಮಹಿಳೆಯರು, ಯುವಕರು ಹಾಗೂ ಮಧ್ಯಮ ವರ್ಗದ ಜನರ ಜೀವನಮಟ್ಟವನ್ನು ಸುಧಾರಿಸುವಲ್ಲಿ ಮಹತ್ವದ ಸಾಧನೆ ಮಾಡಿದೆ ಎಂದು ಗಂಗಾವತಿ ಶಾಸಕ ಗಾಲಿ ಜನಾರ್ಧನ ರೆಡ್ಡಿ ಹೇಳಿದರು.

ಕೊಪ್ಪಳ ನಗರದ ಬಿಜೆಪಿ ಕಾರ್ಯಾಲಯದಲ್ಲಿ ನಡೆದ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ದೇಶದ ಆರ್ಥಿಕತೆ ವಿಶ್ವದ ಪ್ರಮುಖ ಆರ್ಥಿಕತೆಗಳಲ್ಲಿ ಒಂದಾಗಿ ಹೊರಹೊಮ್ಮಿದ್ದು, ಭಾರತವು ಜಾಗತಿಕ ಮಟ್ಟದಲ್ಲಿ ತನ್ನ ಪ್ರಭಾವವನ್ನು ಹೆಚ್ಚಿಸಿಕೊಂಡಿದೆ. ರೈತರಿಗೆ ಕಿಸಾನ್ ಸಮ್ಮಾನ್ ನಿಧಿ, ಉಚಿತ ಆಹಾರ ಧಾನ್ಯ ವಿತರಣೆ, ಮಹಿಳಾ ಸಬಲೀಕರಣ, ಮೂಲಸೌಕರ್ಯ ಅಭಿವೃದ್ಧಿ, ಡಿಜಿಟಲ್ ಇಂಡಿಯಾ, ಮೇಕ್ ಇನ್ ಇಂಡಿಯಾ ಸೇರಿದಂತೆ ಹಲವಾರು ಯೋಜನೆಗಳ ಮೂಲಕ ಜನರ ಬದುಕಿನಲ್ಲಿ ಗುಣಾತ್ಮಕ ಬದಲಾವಣೆ ತರಲಾಗಿದೆ ಎಂದು ತಿಳಿಸಿದರು.

ಮೋದಿಯವರ ಆಡಳಿತದಲ್ಲಿ ರಾಷ್ಟ್ರೀಯ ಹೆದ್ದಾರಿಗಳ ವಿಸ್ತರಣೆ, ರೈಲ್ವೆ ಆಧುನೀಕರಣ, ವಿಮಾನ ನಿಲ್ದಾಣಗಳ ಅಭಿವೃದ್ಧಿ, ವಂದೇ ಭಾರತ್ ರೈಲುಗಳ ಸಂಚಾರ, ಗ್ರಾಮೀಣ ಮತ್ತು ನಗರ ಪ್ರದೇಶಗಳಲ್ಲಿ ಮೂಲಸೌಕರ್ಯಗಳ ಅಭಿವೃದ್ಧಿಗೆ ಹೆಚ್ಚಿನ ಒತ್ತು ನೀಡಲಾಗಿದೆ. ಭಾರತ ಇಂದು ವಿಶ್ವದ ನಾಲ್ಕನೇ ಅತಿದೊಡ್ಡ ಆರ್ಥಿಕತೆಯಾಗಿ ಹೊರಹೊಮ್ಮಿದ್ದು, ಆತ್ಮನಿರ್ಭರ ಭಾರತದ ಕನಸನ್ನು ನನಸಾಗಿಸುವ ದಿಕ್ಕಿನಲ್ಲಿ ದೇಶ ಮುನ್ನಡೆಯುತ್ತಿದೆ ಎಂದು ಹೇಳಿದರು.

ನಂತರ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ವಿಧಾನ ಪರಿಷತ್ ಸದಸ್ಯೆ ಹೇಮಲತಾ ನಾಯಕ, ಕೇಂದ್ರ ಸರ್ಕಾರದ ಜನಕಲ್ಯಾಣ ಯೋಜನೆಗಳು ಸಮಾಜದ ಕಟ್ಟಕಡೆಯ ವ್ಯಕ್ತಿಗೂ ತಲುಪುವಂತೆ ಕಾರ್ಯನಿರ್ವಹಿಸುತ್ತಿವೆ ಎಂದು ಹೇಳಿದರು.

ಜನಧನ್ ಯೋಜನೆ, ಉಜ್ವಲಾ ಯೋಜನೆ, ಆಯುಷ್ಮಾನ್ ಭಾರತ್, ಪ್ರಧಾನಮಂತ್ರಿ ಆವಾಸ್ ಯೋಜನೆ, ಉಚಿತ ಆಹಾರ ಧಾನ್ಯ ವಿತರಣೆ ಸೇರಿದಂತೆ ವಿವಿಧ ಯೋಜನೆಗಳು ಕೋಟ್ಯಾಂತರ ಜನರಿಗೆ ನೇರ ಪ್ರಯೋಜನವನ್ನು ಒದಗಿಸಿವೆ. ಡಿಬಿಟಿ ವ್ಯವಸ್ಥೆಯ ಮೂಲಕ ಫಲಾನುಭವಿಗಳಿಗೆ ಮಧ್ಯವರ್ತಿಗಳ ಹಾವಳಿ ಇಲ್ಲದೆ ನೇರವಾಗಿ ನೆರವು ತಲುಪುತ್ತಿರುವುದು ಕೇಂದ್ರ ಸರ್ಕಾರದ ಆಡಳಿತ ದಕ್ಷತೆಗೆ ಸಾಕ್ಷಿಯಾಗಿದೆ ಎಂದು ತಿಳಿಸಿದರು.

ಭಾರತದ ಅಂತರರಾಷ್ಟ್ರೀಯ ಗೌರವವೂ ಗಣನೀಯವಾಗಿ ಹೆಚ್ಚಿದ್ದು, ಜಿ–20 ಅಧ್ಯಕ್ಷತೆ, ಅಂತರರಾಷ್ಟ್ರೀಯ ಸೌರ ಒಕ್ಕೂಟ, ಕ್ವಾಡ್ ಸಹಕಾರ ಸೇರಿದಂತೆ ವಿವಿಧ ಜಾಗತಿಕ ವೇದಿಕೆಗಳಲ್ಲಿ ಭಾರತ ಪ್ರಮುಖ ಪಾತ್ರ ವಹಿಸುತ್ತಿದೆ. ಅಭಿವೃದ್ಧಿ, ಜನಕಲ್ಯಾಣ ಹಾಗೂ ಸುಶಾಸನದ ಮೂಲಕ ದೇಶವನ್ನು ವಿಶ್ವಗುರುವಾಗಿಸುವ ಸಂಕಲ್ಪದೊಂದಿಗೆ ಕೇಂದ್ರ ಸರ್ಕಾರ ಕಾರ್ಯನಿರ್ವಹಿಸುತ್ತಿದೆ ಎಂದು ಅವರು ಹೇಳಿದರು.

ಸುದ್ದಿಗೋಷ್ಠಿಯಲ್ಲಿ ರಾಜ್ಯ ಕಾರ್ಯಕಾರ್ಣಿ ಸದಸ್ಯ ಡಾ. ಬಸವರಾಜ ಕ್ಯಾವಟರ, ಜಿಲ್ಲಾ ಅಧ್ಯಕ್ಷ ನವೀನ ಕುಮಾರ್ ಗುಳಗಣ್ಣನವರ್, ಜಿಲ್ಲಾ ಪ್ರಧಾನ ಕಾರ್ಯದರ್ಶಿ ಸುನೀಲಕುಮಾರ ಹೆಸರೂರ, ಇನ್ನಿತರರು ಉಪಸ್ಥಿತರಿದ್ದರು.

## ವಿದ್ಯುತ್ ಖಾಸಗೀಕರಣ ವಿರೋಧಿಸಿ ಹೋರಾಟ

• ಮಲ್ಲಮ್ಮ ನುಡಿ ವಾರ್ತೆ ಲಿಂಗಸಗೂರ




ಜೂ.16: ರಾಜ್ಯ ಸರ್ಕಾರ ವಿದ್ಯುತ್ ಖಾಸಗೀಕರಣಕ್ಕೆ ಮುಂದಾದರೆ ಉಗ್ರ ಹೋರಾಟ ನಡೆಸುವುದಾಗಿ ಕರ್ನಾಟಕ ರಾಜ್ಯ ರೈತ ಸಂಘದ ಲಿಂಗಸುಗೂರು ಹಾಗೂ ಮಸ್ಕಿ ತಾಲೂಕು ಘಟಕದ ಪದಾಧಿಕಾರಿಗಳು ಎಚ್ಚರಿಕೆ ನೀಡಿದರು.

ಸೋಮವಾರ ಸಹಾಯಕ ಆಯುಕ್ತ ಬಸವಣ್ಣಪ್ಪ ಹಿರೇಮಠ ಅವರಿಗೆ ಮನವಿ ಸಲ್ಲಿಸಿದ ರೈತ ಮುಖಂಡರು, ವಿದ್ಯುತ್ ಖಾಸಗೀಕರಣದಿಂದ ರೈತರು ಮತ್ತು ಬಡ ಜನರ ಮೇಲೆ ಹೆಚ್ಚಿನ ಆರ್ಥಿಕ ಹೊರೆ ಬೀಳಲಿದೆ ಎಂದು ಆತಂಕ ವ್ಯಕ್ತಪಡಿಸಿದರು. ಕೃಷಿ ಪಂಪ್‌ಸೆಟ್‌ಗಳಿಗೆ ನಿರಂತರ ವಿದ್ಯುತ್ ಪೂರೈಕೆ ಹಾಗೂ ಈಗಿರುವ ಉಚಿತ ವಿದ್ಯುತ್ ಯೋಜನೆಗಳನ್ನು ಮುಂದುವರಿಸಬೇಕು ಎಂದು ಒತ್ತಾಯಿಸಿದರು.

ಮುಂಗಾರು ಹಂಗಾಮಿನಲ್ಲಿ ಹೆಚ್ಚಿನ ಪ್ರಮಾಣದಲ್ಲಿ ಬಿತ್ತನೆ ಮಾಡಿರುವ ಸೂರ್ಯಕಾಂತಿ ಬೆಳೆಗಳಿಗೆ ಬಳಸಿದ ಕೆಲವು ಕಂಪನಿಗಳ ಬೀಜಗಳು ಮೊಳಕೆಯೊಡೆಯದೇ ರೈತರಿಗೆ ಭಾರೀ ನಷ್ಟ ಉಂಟಾಗಿದೆ. ಕಳಪೆ ಬೀಜ ಪೂರೈಸಿದ ಕಂಪನಿಗಳ ವಿರುದ್ಧ ಕಠಿಣ ಕ್ರಮ ಕೈಗೊಂಡು, ರೈತರಿಗೆ ಪರಿಹಾರ ನೀಡಬೇಕು ಎಂದು ಆಗ್ರಹಿಸಿದರು.

ತಾಲೂಕಿನಲ್ಲಿ ಡಿಎಪಿ ಮತ್ತು ಯೂರಿಯಾ ಗೊಬ್ಬರಗಳ ಕೊರತೆ ಉಂಟಾಗದಂತೆ ಕ್ರಮವಹಿಸಬೇಕು. ಫಸಲ್ ಬಿಮಾ ಯೋಜನೆಯಡಿ ಅರ್ಹ ರೈತರಿಗೆ ಬೆಳೆ ವಿಮೆ ಪರಿಹಾರ ದೊರೆಯುವಂತೆ ಅಧಿಕಾರಿಗಳು ಕ್ರಮ ಕೈಗೊಳ್ಳಬೇಕು ಎಂದು ಮನವಿಯಲ್ಲಿ ತಿಳಿಸಿದರು.ಈ ಸಂದರ್ಭದಲ್ಲಿ ರೈತ ಸಂಘದ ಲಿಂಗಸುಗೂರು ತಾಲೂಕು ಅಧ್ಯಕ್ಷ ಮಲ್ಲನಗೌಡ ಕೋಳೂರು, ಮಸ್ಕಿ ತಾಲೂಕು ಅಧ್ಯಕ್ಷ ಬಸನಗೌಡ ಹುಡೇದ, ರೈತ ಮುಖಂಡರಾದ ಬಸನಗೌಡ ಸಾನಬಾಳ, ಕುಪ್ಪಣ್ಣ ಗೋನವಾಟ್ಲ, ಬಸವರಾಜ ಭೂಲಭಾವಿ, ಈರಣ್ಣ ಗುಡಿಹಾಳ ಸೇರಿದಂತೆ ಹಲವರು ಉಪಸ್ಥಿತರಿದ್ದರು.

# ಬಳ್ಳಾರಿ ಜಿಲ್ಲೆಯಲ್ಲಿ ಖಾಸಗಿ ಶಿಕ್ಷಣ ಸಂಸ್ಥೆಗಳ ಮೇಲೆ ನಿಗಾ ವಹಿಸುವಂತೆ ಸಾರ್ವಜನಿಕರ ಆಗ್ರಹ

• ಮಲ್ಲಮ್ಮ ನುಡಿ ವಾರ್ತೆ ಬಳ್ಳಾರಿ

ಬಳ್ಳಾರಿ ಜಿಲ್ಲೆಯ ಹಲವಾರು ಖಾಸಗಿ ಶಿಕ್ಷಣ ಸಂಸ್ಥೆಗಳ ವಿರುದ್ಧ ಪೋಷಕರು ಹಾಗೂ ಸಾರ್ವಜನಿಕರಿಂದ ಅಸಮಾಧಾನ ವ್ಯಕ್ತವಾಗುತ್ತಿದೆ. ಶಿಕ್ಷಣ ಸಂಸ್ಥೆಗಳು ಸರ್ಕಾರ ನಿಗದಿಪಡಿಸಿದ ಶುಲ್ಕಕ್ಕಿಂತ ಹೆಚ್ಚಿನ ಶುಲ್ಕವನ್ನು ವಸೂಲಿ ಮಾಡುತ್ತಿವೆ ಎಂಬ ಆರೋಪಗಳು ಕೇಳಿಬರುತ್ತಿದ್ದು, ಸಂಬಂಧಪಟ್ಟ ಅಧಿಕಾರಿಗಳು ಕಟ್ಟುನಿಟ್ಟಿನ ನಿಗಾ ವಹಿಸಬೇಕು ಎಂದು ಸಾರ್ವಜನಿಕರು ಒತ್ತಾಯಿಸಿದ್ದಾರೆ.ಪೋಷಕರ ಪ್ರಕಾರ, ಶಾಲಾ ಶುಲ್ಕದ ಜೊತೆಗೆ ಪ್ರವೇಶ ಶುಲ್ಕ, ವಾರ್ಷಿಕ ಅಭಿವೃದ್ಧಿ ಶುಲ್ಕ, ಸಾರಿಗೆ ಶುಲ್ಕ ಹಾಗೂ ವಿವಿಧ ಹೆಸರಿನಲ್ಲಿ ಹೆಚ್ಚುವರಿ ಹಣ ಸಂಗ್ರಹಿಸಲಾಗುತ್ತಿದೆ. ಇದರಿಂದ ಮಧ್ಯಮ ಮತ್ತು ಬಡ ಕುಟುಂಬಗಳ ಮೇಲೆ ಆರ್ಥಿಕ ಹೊರೆ ಹೆಚ್ಚಾಗಿದೆ ಎಂದು ಅವರು ದೂರಿದ್ದಾರೆ. ಇದರ ಜೊತೆಗೆ, ಕೆಲವು ಶಿಕ್ಷಣ ಸಂಸ್ಥೆಗಳಲ್ಲಿ ವಿದ್ಯಾರ್ಥಿಗಳಿಗೆ ಅಗತ್ಯವಾದ ಮೂಲಭೂತ ಸೌಕರ್ಯಗಳ ಕೊರತೆ ಇದೆ ಎಂಬ ಆರೋಪವೂ ಕೇಳಿಬಂದಿದೆ. ಶುದ್ಧ ಕುಡಿಯುವ ನೀರಿನ ವ್ಯವಸ್ಥೆ, ಸ್ವಚ್ಛ ಶೌಚಾಲಯಗಳು, ಸುರಕ್ಷಿತ ಕಟ್ಟಡಗಳು, ಸಮರ್ಪಕ ಆಟದ ಮೈದಾನ, ಗ್ರಂಥಾಲಯ ಮತ್ತು ಪ್ರಯೋಗಾಲಯ ಸೌಲಭ್ಯಗಳು ಸಮರ್ಪಕವಾಗಿ ಲಭ್ಯವಿಲ್ಲ ಎಂದು ಸಾರ್ವಜನಿಕರು ಅಸಮಾಧಾನ ವ್ಯಕ್ತಪಡಿಸಿದ್ದಾರೆ.ಶಿಕ್ಷಣ ಇಲಾಖೆ ಅಧಿಕಾರಿಗಳು ಖಾಸಗಿ ಶಿಕ್ಷಣ ಸಂಸ್ಥೆಗಳಲ್ಲಿ ನಿಯಮಿತ ತಪಾಸಣೆ ನಡೆಸಿ, ಶುಲ್ಕ ನಿಯಮಾವಳಿಗಳ ಪಾಲನೆ ಹಾಗೂ ಮೂಲಭೂತ ಸೌಕರ್ಯಗಳ ಲಭ್ಯತೆಯನ್ನು ಪರಿಶೀಲಿಸಬೇಕು ಎಂದು ಪೋಷಕರು ಆಗ್ರಹಿಸಿದ್ದಾರೆ. ನಿಯಮ ಉಲ್ಲಂಘಿಸುವ ಸಂಸ್ಥೆಗಳ ವಿರುದ್ಧ ಕಾನೂನು ಕ್ರಮ ಕೈಗೊಳ್ಳುವ ಮೂಲಕ ವಿದ್ಯಾರ್ಥಿಗಳ ಹಿತಾಸಕ್ತಿ ಕಾಪಾಡಬೇಕು ಎಂಬುದು ಅವರ ಒತ್ತಾಯವಾಗಿದೆ.ಸಾರ್ವಜನಿಕ ಸಂಘಟನೆಗಳ ಪ್ರತಿನಿಧಿಗಳು ಕೂಡ ಈ ಕುರಿತು ಜಿಲ್ಲಾಡಳಿತ ಹಾಗೂ ಶಿಕ್ಷಣ ಇಲಾಖೆಗೆ ಮನವಿ ಸಲ್ಲಿಸಲು ಮುಂದಾಗಿದ್ದು, ಜಿಲ್ಲೆಯ ಎಲ್ಲಾ ಖಾಸಗಿ ಶಿಕ್ಷಣ ಸಂಸ್ಥೆಗಳ ಕಾರ್ಯವೈಖರಿಯ ಕುರಿತು ಸಮಗ್ರ ಪರಿಶೀಲನೆ ನಡೆಸಬೇಕು ಎಂದು ಒತ್ತಾಯಿಸಿದ್ದಾರೆ.ಶಿಕ್ಷಣ ಇಲಾಖೆಯ ಅಧಿಕಾರಿಗಳಿಂದ ಸೂಕ್ತ ಕ್ರಮ ಕೈಗೊಳ್ಳಲಾದರೆ ಶಿಕ್ಷಣದ ಗುಣಮಟ್ಟ ಹೆಚ್ಚುವುದರ ಜೊತೆಗೆ ಪೋಷಕರ ಮೇಲಿನ ಆರ್ಥಿಕ ಹೊರೆ ಕಡಿಮೆಯಾಗಲಿದೆ ಎಂಬ ಅಭಿಪ್ರಾಯ ಸಾರ್ವಜನಿಕ ವಲಯದಲ್ಲಿ ವ್ಯಕ್ತವಾಗುತ್ತಿದೆ.

> ಖಾಸಗಿ ಶಿಕ್ಷಣ ಸಂಸ್ಥೆಗಳು ಯಾವುದೇ ರೀತಿ ಸಾರ್ವಜನಿಕರಿಗೆ ತೊಂದರೆ ಕೊಟ್ಟಂಗ ದೂರುಗಳು ಬಂದರೆ ಕ್ರಮ ವಹಿಸಬೇಕಾಗುತ್ತದೆ. ಈಗಾಗಲೇ ಎಲ್ಲಾ ಖಾಸಿಗೆ ಶಿಕ್ಷಣ ಸಂಸ್ಥೆಗಳಿಗೆ ಶುಲ್ಕದ ದರ ಪಟ್ಟಿಯನ್ನು ಹಾಕಬೇಕೆಂದು ಜಾರಿ ಮಾಡಿದ್ದೇವೆ ಮೂಲಭೂತ ಸೌಕರ್ಯಗಳ ಕೊರತೆ ಹಾಗೂ ವಿವಿಧ ಹೆಸರುಗಳ ಮೇಲೆ ಹೆಚ್ಚುವರಿ ಹಣ ಸಂಗ್ರಹಿಸಲಾಗುತ್ತದೆ ಎಂದು ಆರೋಪಗಳ ಕೇಳಿ ಬಂದ ಸಂಸ್ಥೆಗಳ ಮೇಲೆ ನೋಟಿಸ್ ಅನ್ನು ಜಾರಿ ಮಾಡಿದ್ದೇವೆ ಪೋಷಕರಿಗೆ ಇನ್ನು ಹೆಚ್ಚಿನ ಸಮಸ್ಯೆಗಳು ತೊಂದರೆ ಉಂಟು ಮಾಡಿದರೆ ಶಿಕ್ಷಣ ಇಲಾಖೆ ಅಡಿಯಲ್ಲಿ ಕ್ರಮ ವಹಿಸಬೇಕಾಗುತ್ತದೆ
>
> ತಿಪ್ಪೇಸ್ವಾಮಿ, ಶಿಕ್ಷಣ ಇಲಾಖೆಯ ಉಪ ನಿರ್ದೇಶಕರು

> ಅಧಿಕ ಶುಲ್ಕ ವಸೂಲು ಹಾಗೂ ಮೂಲಭೂತ ಸೌಕರ್ಯಗಳ ಕೊರತೆ ನಮ್ಮ ಗಮನಕ್ಕೆ ಬಂದರೆ ಎಲ್ಲಾ ಶಿಕ್ಷಣ ಸಂಸ್ಥೆ ಅವರಿಗೆ ಸಂದೇಶ ನೀಡುತ್ತೇವೆ, ಶಿಕ್ಷಣ ಇಲಾಖೆಯಿಂದ ಅಧಿಕ ಶುಲ್ಕದ ಜೊತೆಗೆ ಮೂಲಭೂತ ಸೌಕರ್ಯಗಳ ಕೊರತೆ ಬಗ್ಗೆ ನಮಗೆ ನೋಟಿಸ್ ಅನ್ನು ಜಾರಿ ಮಾಡಿದರೆ ನಾವು ಎಲ್ಲಾ ಶಾಲೆಗಳಿಗೆ ಕಟ್ಟುನಿಟ್ಟಿನ ಕ್ರಮಗಳನ್ನು ಕೈಗೊಳ್ಳುತ್ತವೆ
>
> ಮರಿಸ್ವಾಮಿ ರೆಡ್ಡಿ ,ಖಾಸಗಿ ಶಿಕ್ಷಣ ಸಂಸ್ಥೆಯ ಸಂಘದ ಅಧ್ಯಕ್ಷರು

**ಮುಖ್ಯ ಅಂಶಗಳು:**

ಖಾಸಗಿ ಶಿಕ್ಷಣ ಸಂಸ್ಥೆಗಳ ವಿರುದ್ಧ ಅಧಿಕ ಶುಲ್ಕ ವಸೂಲಿ ಆರೋಪ.ಮೂಲಭೂತ ಸೌಕರ್ಯಗಳ ಕೊರತೆಯಿಂದ ಪೋಷಕರ ಅಸಮಾಧಾನ.

ಶಿಕ್ಷಣ ಇಲಾಖೆ ವತಿಯಿಂದ ತಪಾಸಣೆ ನಡೆಸುವಂತೆ ಸಾರ್ವಜನಿಕರ ಆಗ್ರಹ.

ನಿಯಮ ಉಲ್ಲಂಘಿಸುವ ಸಂಸ್ಥೆಗಳ ವಿರುದ್ಧ ಕ್ರಮಕ್ಕೆ ಒತ್ತಾಯ.

ವಿದ್ಯಾರ್ಥಿಗಳ ಹಿತದೃಷ್ಟಿಯಿಂದ ಸಮಗ್ರ ಪರಿಶೀಲನೆ ಅಗತ್ಯ ಎಂದು ಸಾರ್ವಜನಿಕರ ಅಭಿಪ್ರಾಯ.

## ವಿದ್ಯಾರ್ಥಿಗಳು ಶೈಕ್ಷಣಿಕವಾಗಿ ಪ್ರಗತಿ ಹೊಂದಲು ಕರೆ




• ಮಲ್ಲಮ್ಮ ನುಡಿ ವಾರ್ತೆ ಬಳ್ಳಾರಿ

ವಿದ್ಯಾರ್ಥಿ ಜೀವನ ಬಂಗಾರದ ದಿನಗಳ ಜೀವನ, ನೀವು ನಿಮ್ಮ ಪದವಿ ಮುಗಿಸಿಕೊಂಡು ಇನ್ನೂ ಉನ್ನತ ವಿದ್ಯಾಭ್ಯಾಸ ಮಾಡಿ ಒಳ್ಳೆಯ ಉದ್ಯೋಗ ಪಡೆದು ನಿಮ್ಮ ತಾಯಿ ತಂದೆಗಳಿಗೆ, ವಿದ್ಯೆ ಕಲಿಸಿದ ಸಂಸ್ಥೆಗೆ ಹೆಸರು ತರುವಂತಹ ಈ ದೇಶದ ಸತ್ಪ್ರಜೆಗಳಾಗಿ ಬಾಳಿರಿ ಎಂದು ಬಳ್ಳಾರಿ ಮಹಾನಗರ ಪಾಲಿಕೆಯ ಪೂಜ್ಯ ಮಹಾಪೌರರಾದ ಪಿ ಗಾದೆಪ್ಪ ಅವರು ಅಭಿಪ್ರಾಯ ಪಟ್ಟರು. ಶನಿವಾರ ನಗರದ ಜೋಳದರಾಶಿ ದೊಡ್ಡನಗೌಡ ರಂಗ ಮಂದಿರದಲ್ಲಿ ಆಯೋಜಿಸಲಾಗಿದ್ದ ಲಾಡ್ಸ್ ವಿದ್ಯಾಸಂಸ್ಥೆಯ ಇಂಡೋ–ಅಮೆರಿಕನ್ ಪದವಿ ಕಾಲೇಜು ವಿದ್ಯಾರ್ಥಿಗಳ ಬೀಳ್ಕೊಡಿಗೆ ಸಮಾರಂಭವನ್ನು ಉದ್ಘಾಟಿಸಿ ಮಾತನಾಡಿದರು.

ಆರಂಭದಲ್ಲಿ ಲಾಡ್ಸ್ ವಿದ್ಯಾಸಂಸ್ಥೆಯ ಸಂಸ್ಥಾಪಕ ಅಧ್ಯಕ್ಷರಾದ ಪಿ ಎಚ್ ನಾಯ್ಡು ಅವರು ಪ್ರಾಸ್ತಾವಿಕ ನುಡಿಗಳನ್ನು ಆಡುತ್ತಾ ವಿದ್ಯಾರ್ಥಿಗಳು ಇಂದಿನ ಸ್ಪರ್ಧಾತ್ಮಕ ಹಾಗೂ ತಂತ್ರಜ್ಞಾನದ ಯುಗದಲ್ಲಿ ಇಂದು ಎಐ (ಕೃತಕ ಬುದ್ಧಿಮತ್ತೆ) ಅವಶ್ಯಕತೆ ತುಂಬಾ ಇದ್ದು ಇದರ ಜ್ಞಾನವನ್ನು ವಿದ್ಯಾರ್ಥಿಗಳು ತಿಳಿದುಕೊಂಡು ಇಂದಿನ ಎಐ ತಂತ್ರಜ್ಞಾನಕ್ಕೆ ಹೊಂದಿಕೊಳ್ಳಬೇಕು ಎಂದು ಕರೆಕೊಟ್ಟು ಮುಂದಿನ ದಿನಗಳಲ್ಲಿ ನಿಮ್ಮ ಭವಿಷ್ಯ ಸುಖಮಯವಾಗಿರಲಿ ಎಂದು ಆಶಿಸಿದರು.

ಕಾರ್ಯಕ್ರಮದಲ್ಲಿ ಭಾಗಿಯಾಗಿದ್ದ ಬಳ್ಳಾರಿಯ ಹೆಚ್ಚುವರಿ ಪೊಲೀಸ್ ವರಿಷ್ಠಾಧಿಕಾರಿಗಳಾದ ಶ್ರೀ ಎನ್ ನವೀನ ಕುಮಾರ ಅವರು ಮಾತನಾಡುತ್ತಾ ವಿದ್ಯಾರ್ಥಿಗಳು ಕೇವಲ ಪದವಿಗಳನ್ನು ಪಡೆದು ಸಾಮಾನ್ಯ ಉದ್ಯೋಗಗಳನ್ನು ಮಾಡುವುದರ ಬದಲು IAS,IPS,IFS ಮುಂತಾದ ಸ್ಪರ್ಧಾತ್ಮಕ ಜಗತ್ತಿನ ಉನ್ನತ ಹುದ್ದೆಗಳನ್ನು ಅಲಂಕರಿಸಬೇಕೆಂದು ಕಿವಿ ಮಾತು ಹೇಳಿದರು.

ಸದರಿ ಪದವಿ ಕಾಲೇಜಿನ ಪ್ರಾಚಾರ್ಯರಾದ ಶ್ರೀ ಶೇಕ್ ಸಲೀಮ್ ಬಾಷಾ ಅವರು ಮಾತನಾಡುತ್ತಾ ವಿದ್ಯಾರ್ಥಿಗಳ ಜೊತೆಗಿನ ಸವಿನೆನಪುಗಳನ್ನು ಮೆಲಕು ಹಾಕಿದರು ಮತ್ತು ಶುಭವನ್ನು ಕೋರಿದರು.

ವೇದಿಕೆಯಲ್ಲಿ ಕಾಲೇಜಿನ ಉಪ–ಪ್ರಾಚಾರ್ಯರಾದ ಸುಧೀರ ಕುಮಾರ ಕೆ ಪಿ ಹಾಗೂ ಇಂಡೋ–ಅಮೆರಿಕನ್ ಪದವಿ ಪೂರ್ವ ಕಾಲೇಜಿನ ಪ್ರಾಚಾರ್ಯರಾದ ರಾಜೇಶ ಬಿ.ವಿ ಆಡಳಿತಾಧಿಕಾರಿ ಪಿ ಉದಯ ಭಾಸ್ಕರ ಮತ್ತು ಪಿ ಆರ್ ಓ ರಾಜ ವಿ ಅವರು ಉಪಸ್ಥಿತರಿದ್ದರು. ಪ್ರಾರ್ಥನೆಯೊಂದಿಗೆ ಕಾರ್ಯಕ್ರಮವನ್ನು ಆರಂಭಿಸಲಾಯಿತು.

ಕಾರ್ಯಕ್ರಮದ ನಿರೂಪಣೆ ಹಾಗೂ ವಂದನಾರ್ಪಣೆಯನ್ನು ಬಸವರಾಜ ಅಮಾತಿ ಕನ್ನಡ ಉಪನ್ಯಾಸಕರು ನೆರವೇರಿಸಿದರು, ಪದವಿ ಕಾಲೇಜಿನ ಬೋಧಕ ಮತ್ತು ಬೋಧಕೇತರ ಸಿಬ್ಬಂಧಿ ಉಪಸ್ಥಿತರಿದ್ದರು. ನಂತರ ಕಾಲೇಜಿನ ವಿದ್ಯಾರ್ಥಿಗಳಿಂದ ಸಾಂಸ್ಕೃತಿಕ ಕಾರ್ಯಕ್ರಮಗಳು ಅದ್ದೂರಿಯಾಗಿ ಜರುಗಿದವು.

## ನಾಟಕಗಳು ಕಾಲಘಟ್ಟದ ಸಾಮಾಜಿಕ ಸ್ಥಿತಿಯ ಕನ್ನಡಿ

• ಮಲ್ಲಮ್ಮ ನುಡಿ ವಾರ್ತೆ ಬಳ್ಳಾರಿ



ನಾಟಕಗಳು ಆಯಾ ಕಾಲಘಟ್ಟದ ಸಾಮಾಜಿಕ ಪರಿಸ್ಥಿತಿಯ ಕನ್ನಡಿ ಹಿಡಿಯುವ ಕೆಲಸ ಮಾಡುತ್ತಿದ್ದು ವರ್ತಮಾನದಲ್ಲಿ ಪ್ರಭಾವ ಬೀರುತ್ತವೆ ಎಂದು ವಿಧಾನಪರಿಷತ್ ಸದಸ್ಯ ಸಿ.ಟಿ.ರವಿ ತಿಳಿಸಿದರು. ತಾಲೂಕಿನ ಕಪ್ಪಗಲ್ಲು ಗ್ರಾಮದಲ್ಲಿ ರಂಗತೋರಣ ಸಾಂಸ್ಕೃತಿಕ ಸಂಘಟನೆ ಹಮ್ಮಿಕೊಂಡಿದ್ದ ಕಪ್ಪಗಲ್ಲು ನಾಟಕೋತ್ಸವದಲ್ಲಿ ಹಿರಿಯ ರಂಗಭೂಮಿ ಕಲಾವಿದರಾದ ಆದವಾನಿ ವೀಣಾ ಹಾಗೂ ಶ್ರೀಧರ ಹೆಗಡೆ ಅವರಿಗೆ ರಾಜ್ಯಮಟ್ಟದ "ಸಾಂಸ್ಕೃತಿಕ ಸಾರ್ವಭೌಮ ಜೋಳದರಾಶಿ ದೊಡ್ಡನಗೌಡ ರಂಗತೋರಣ ಪುರಸ್ಕಾರ" ಪ್ರದಾನ ಮಾಡಿ ಅವರು ಮಾತನಾಡಿದರು.

ಮಹಾತ್ಮಗಾಂಧೀಜಿಯವರ ಮೇಲೆ ಹರಿಶ್ಚಂದ್ರ ನಾಟಕ ಪ್ರಭಾವ ಬೀರಿತ್ತು. ವ್ಯಕ್ತಿ ಅಥವಾ ಜನಸಮುದಾಯದ ಮೇಲೆ ಪ್ರಭಾವ ಬೀರುವ ಶಕ್ತಿ ರಂಗಭೂಮಿಗಿದೆ. ನಿರಂತರ ನಾಟಕೋತ್ಸವಗಳ ಮೂಲಕ ಜನರ ಮನಸ್ಸನ್ನು ಅರಳಿಸುವ ಕೆಲಸ ಮಾಡುತ್ತಿರುವ ರಂಗತೋರಣ ಕಾರ್ಯ ಶ್ಲಾಘನೀಯ. ಗ್ರಾಮೀಣ ಪರಿಸರದಲ್ಲಿ ರಂಗಚಟುವಟಿಕೆಗಳು ನಿರಂತರವಾಗಿ ನಡೆಯುವಂತಾಗಬೇಕು. ಆಗ ಮಾತ್ರ ಸಾಂಸ್ಕೃತಿಕ ವಾತಾವರಣವನ್ನು ಎಲ್ಲೆಡೆ ಜೀವಂತವಾಗಿಡಲು ಸಾಧ್ಯವಾಗಲಿದೆ ಎಂದರು. ಸಮಾಜದ ಅಭಿವೃದ್ಧಿಯನ್ನು ಕೇವಲ ಆರ್ಥಿಕ ಮಾನದಂಡಗಳಿಂದ ಅಳೆಯಲು ಸಾಧ್ಯವಿಲ್ಲ. ಹಣ, ಆಸ್ತಿ, ಅಧಿಕಾರ ಮತ್ತು ಭೌತಿಕ ಸೌಲಭ್ಯಗಳು ಕಾಲಕ್ರಮೇಣ ಕಳೆದುಹೋಗಬಹುದು. ಆರ್ಥಿಕ ಶ್ರೀಮಂತಿಕೆ ಏರಿಳಿತಗಳಿಗೆ ಒಳಗಾಗುವುದು ಸಹಜ. ಆದರೆ ಒಂದು ಸಮಾಜದ ನಿಜವಾದ ಗುರುತು ಅದರ ಸಂಸ್ಕೃತಿ, ಪರಂಪರೆ, ಕಲೆ, ಸಾಹಿತ್ಯ ಮತ್ತು ಮೌಲ್ಯಗಳಲ್ಲಿ ಅಡಗಿದೆ. ಇವುಗಳೇ ಆ ಸಮಾಜದ ಸಾಂಸ್ಕೃತಿಕ ಶ್ರೀಮಂತಿಕೆಯನ್ನು ಪ್ರತಿಬಿಂಬಿಸುತ್ತವೆ. ಈ ಸಾಂಸ್ಕೃತಿಕ ಸಂಪತ್ತು ಪೀಳಿಗೆಯಿಂದ ಪೀಳಿಗೆಗೆ ಸಾಗುತ್ತಾ ಸಮಾಜವನ್ನು ಜೀವಂತವಾಗಿರಿಸುತ್ತದೆ ಎಂದು ತಿಳಿಸಿದರು.

ಜೀವನವೇ ಒಂದು ನಾಟಕ ರಂಗ. ಅವನು ಕರೆದ ಕೂಡಲೇ ಎಲ್ಲವನ್ನೂ ಬಿಟ್ಟು ಹೋಗಿ ಬಿಡಬೇಕಂತೆ. ಆದರೆ, ಈ ಜೀವನ ಎಂಬ ನಾಟಕ ರಂಗದಲ್ಲಿ ನೈತಿಕ ಮೌಲ್ಯಗಳನ್ನು ಉಳಿಸಿಕೊಂಡು ಉತ್ತಮ ಪಾತ್ರಧಾರಿಗಳಾದರೆ ಮಾತ್ರ ಹೆಸರು ಶಾಶ್ವತವಾಗಿ ಉಳಿಯುತ್ತದೆ. ಹಣ, ಆಸ್ತಿ, ಅಧಿಕಾರ ಮತ್ತು ಸ್ಥಾನಮಾನಗಳು ಶಾಶ್ವತವಲ್ಲ. ಆದರೆ ಸಮಾಜದ ಒಳಿತಿಗಾಗಿ ಬದುಕಿದವರು, ಮಾನವೀಯ ಮೌಲ್ಯಗಳನ್ನು ಉಳಿಸಿದವರು ಮತ್ತು ತಮ್ಮ ಕರ್ತವ್ಯವನ್ನು ಪ್ರಾಮಾಣಿಕವಾಗಿ ನಿರ್ವಹಿಸಿದವರು ಜನರ ಹೃದಯದಲ್ಲಿ ಸದಾಕಾಲ ಜೀವಂತವಾಗಿರುತ್ತಾರೆ ಎಂದು ಹೇಳಿದರು.

ಆಂಧ್ರಪ್ರದೇಶದ ಉರವಕೊಂಡ ಮಠದ ಡಾ.ಕರಿಬಸವ ರಾಜೇಂದ್ರ ಮಹಾಸ್ವಾಮಿಗಳು ಸಾನ್ನಿಧ್ಯ ವಹಿಸಿ ಮಾತನಾಡಿದರು. ಪ್ರಾಸ್ತಾವಿಕ ಮಾತನಾಡಿದ ರಂಗತೋರಣ ಸಂಸ್ಥೆಯ ಅಧ್ಯಕ್ಷ ಪ್ರೊ.ಭೀಮಸೇನ ಅವರು ಮೂರು ದಿನಗಳ ನಾಟಕೋತ್ಸವದ ಯಶಸ್ವಿಗೆ ಶ್ರಮಿಸಿದ ಗ್ರಾಮಸ್ಥರ ಸಹಕಾರವನ್ನು ಸ್ಮರಿಸಿದರಲ್ಲದೆ, ನಾಟಕ ಬರೀ ಮನರಂಜನೆಯಷ್ಟೇ ಅಲ್ಲ; ಮನೋವಿಕಾಸವೂ ಹೌದ. ನಾಟಕದಲ್ಲಿ ಬರುವ ನೀತಿಗಳನ್ನು ಬದುಕಿನಲ್ಲಿ ಅಳವಡಿಸಿಕೊಂಡಲ್ಲಿ ಮಾತ್ರ ನಾಟಕೋತ್ಸವ ಶ್ರಮ ಸಾರ್ಥಕವಾಗುತ್ತದೆ ಎಂದು ಹೇಳಿದರು. ಬಳಿಕ ರಾಜ್ಯಮಟ್ಟದ ಸಾಂಸ್ಕೃತಿಕ ಸಾರ್ವಭೌಮ ಜೋಳದರಾಶಿ ದೊಡ್ಡನಗೌಡ ರಂಗತೋರಣ ಪುರಸ್ಕೃತರ ಸಾಧನೆಯನ್ನು ಪರಿಚಯಿಸಿದರು. ಲೆಕ್ಕ ಪರಿಶೋಧಕ ಎರಿಸ್ವಾಮಿ ಚಿಲ್ಕರಾಯಿ, ಎಪಿಎಂಸಿ

ಉಪಾಧ್ಯಕ್ಷ ರಾಮಣ್ಣ, ಬೆಂಗಳೂರಿನ ಸಾಮಾಜಿಕ ಕಾರ್ಯಕರ್ತ ವಾದಿರಾಜ ಉಪಸ್ಥಿತರಿದ್ದರು. ರಂಗತೋರಣ ಕಾರ್ಯದರ್ಶಿ ಪ್ರಭುದೇವ ಕಪ್ಪಗಲ್ಲು ಹಾಗೂ ಜೋಳದರಾಶಿ ದೊಡ್ಡನಗೌಡ ಪ್ರತಿಷ್ಠಾನದ ಅಧ್ಯಕ್ಷ ಕೆ.ಪೊಂಪನಗೌಡ ಕಾರ್ಯಕ್ರಮ ನಿರ್ವಹಿಸಿದರು. ನಾಟಕೋತ್ಸವದ ಯಶಸ್ಸಿಗಾಗಿ ಶ್ರಮಿಸಿದ ಮೆಹತಾಬ್, ಚಂದ್ರಶೇಖರ ಆಚಾರ್, ಅಡವಿಸ್ವಾಮಿ, ಅರವಿಂದಯೋಗಿ, ಅನಿಲ್ ಅಂಗಡಿ, ಗಿರೀಶ್ ಆಚಾರ್ ಮತ್ತಿತರರಿದ್ದರು. ಕೊನೆಯಲ್ಲಿ ಜೇವರ್ಗಿ ರಾಜಣ್ಣ ರಚನೆ ಹಾಗೂ ನಿರ್ದೇಶನದ "ರೈತ ಮನೆತನ" ನಾಟಕ ಪ್ರದರ್ಶನಗೊಂಡಿತು.

## ಎಂಪಿ ತುಕಾರಾಂ ವಿರುದ್ಧ ಬಳ್ಳಾರಿಯಲ್ಲಿ ಬಿಜೆಪಿ ಪ್ರತಿಭಟನೆ



• ಮಲ್ಲಮ್ಮ ನುಡಿ ವಾರ್ತೆ ಬಳ್ಳಾರಿ

:ಲೋಕಸಭಾ ಸದಸ್ಯ ಈ. ತುಕಾರಾಂ ವಿರುದ್ಧ ಜಿಲ್ಲೆಯ ಬಿಜೆಪಿ ನಾಯಕರು ಸಿಡಿದೆದ್ದು ನಗರದ ಗಡಗಿ ಚೆನ್ನಪ್ಪ ವೃತ್ತದಲ್ಲಿ ಇಂದು ಮಾನವ ಸರಪಳಿ ರಚಿಸಿ ತುಕಾರಾಂ ಅವರ ಪ್ರತಿಕೃತಿ ಧಹಿಸಿ ಅಕ್ರೋಶ ವ್ಯಕ್ತಪಡಿಸದರು.ರಾಷ್ಟ್ರೀಯ ಹೆದ್ದಾರಿಯ ಕಾಮಗಾರಿ ಕಳಪೆ ಆಗಿದೆಂದು ಡಣಾಪುರ ಬಳಿ ವ್ಯಕ್ತಿಯೋರ್ವ ವೀಡಿಯೋ ಮಾಡಿ ಪ್ರಶ್ನೆ ಮಾಡಿದ್ದಕ್ಕಾಗಿ ಆತನಿಗೆ ಅಶ್ಲೀಲ ಪದ ಬಳಕೆ ಮಾಡಿ ಬೈದೊರುವುದನ್ನು ಖಂಡಿಸಿ ಈ ಪ್ರತಿಭಟನೆ ನಡೆಸಲಾಯ್ತು.ಕಳಪೆ ಕಾಮಗಾರಿ ಬಗ್ಗೆ ಪ್ರಶ್ನೆ ಮಾಡಿ ವೀಡಿಯೋ ಮಾಡಿದ್ದ ಯುವಕನ ಬಗ್ಗೆ ಕಳ್ಳಮುಂಡೆ ಮಕ್ಕಳು ಏನೇನೂ ಮಾಡ್ತಾರೆ, ಎಚ್ಚರಿಕೆಯಿಂದ ಕೆಲಸ ಮಾಡಬೇಕು ಎಂದಿದ್ದರು. ಅಲ್ಲದೇ ವಿಡಿಯೋ ಮಾಡಿದ ಯುವಕನನ್ನು ಕರೆಸಿ ಬೈದಿದ್ದರಂತೆ ತುಕಾರಾಂ ಅವರು.ಅದಕ್ಕಾಗಿ ತುಕಾರಾಂ ವಿರುದ್ಧ ಘೋಷಣೆಕೂಗಿ ಸಂಸದ ಸ್ಥಾನಕ್ಕೆ ರಾಜೀನಾಮೆ ನೀಡುವಂತೆ ಮತ್ತು ಅವಾಚ್ಯ ಶಬ್ದ ಬಳಸಿದ ಅವರ ಮೇಲೆ ಕಾನೂನು ಕ್ರಮ ತೆಗೆದುಕೊಳ್ಳುವಂತೆ ಆಗ್ರಹೊಸಲಾಯ್ತು.ರಾಜ್ಯ ಬಿಜೆಪಿ ಕಾರ್ಯದರ್ಶಿ ಕೆ.ಎಸ್.ದಿವಾಕರ್,ಜಿಲ್ಲಾ ಅಧ್ಯಕ್ಷ ಅನಿಲ್ ನಾಯ್ಡು, ರೈತ ಮೋರ್ಚಾ ರಾಜ್ಯ ಉಪಾಧ್ಯಕ್ಷ ಎಸ್. ಗುರುಲಿಂಗನಗೌಡ, ಡಾ.ಅರುಣಾ ಕಾಮಿನೇನಿ ಮೊದಲಾದವರು ಪಾಲ್ಗೊಂಡಿದ್ದರು.




ಕಲಬುರಗಿ: ನಗರದ ಹೊರವಲಯದ ಕಪನೂರ ಸಿದ್ಧಾರೂಡ ಕಾಲೋನಿಯ ಸರಕಾರಿ ಕಿರಿಯ ಪ್ರಾಥಮಿಕ ಶಾಲೆಯಲ್ಲಿ ವಿಶೇಷ ದಾಖಲಾತಿ ಆಂದೋಲನ ಕಾರ್ಯಕ್ರಮ ಹಮ್ಮಿಕೊಳ್ಳಲಾಯಿತು.ಈ ಸಂದರ್ಭದಲ್ಲಿ ಶಾಲೆಯ ಪ್ರಭಾರಿ ಮುಖ್ಯ ಗುರುಗಳಾದ ಮೌನೇಶ ನಿಂಬಾಳ, ಸಹ ಶಿಕ್ಷಕಿಯರಾದ ಶ್ರೀಮತಿ ವಿಜಯಲಕ್ಷ್ಮೀ, ಕು. ಭಾಗ್ಯಶ್ರೀ,ಮತ್ತು ವಿದ್ಯಾರ್ಥಿಗಳ ಪಾಲಕರು, ಪೋಷಕರು ಹಾಗೂ ಎಸ್.ಡಿ.ಎಂ.ಸಿ ಅಧ್ಯಕ್ಷರು, ಸದಸ್ಯರು ಹಾಗೂ ಶಿಕ್ಷಣ ಪ್ರೇಮಿಗಳು ಮತ್ತು ಬಡಾವಣೆ ನಿವಾಸಿಗಳು ಕಾರ್ಯಕ್ರಮದಲ್ಲಿ ಭಾಗವಹಿಸಿದರು.

## ಪಂಚ ಗ್ಯಾರಂಟಿ ಯೋಜನೆಗಳ ಪ್ರಗತಿ ಪರಿಶೀಲನೆ ಸಭೆ

• ಮಲ್ಲಮ್ಮ ನುಡಿ ವಾರ್ತೆ ಹಗರಿಬೊಮ್ಮನಹಳ್ಳಿ



ಇಂದು ಹಗರಿಬೊಮ್ಮನಹಳ್ಳಿ ಯ ತಾಲೂಕು ಪಂಚಾಯಿತಿ ಯ ಮಹಾತ್ಮಗಾಂಧಿ ಸಭಾಂಗಣದಲ್ಲಿ ರಾಜ್ಯ ಸರ್ಕಾರದ ಜನಪ್ರಿಯ ಯೋಜನೆಗಳಾದ ಪಂಚ ಗ್ಯಾರಂಟಿ ಯೋಜನೆಗಳ ಪ್ರಗತಿ ಪರಿಶೀಲನೆ ಸಭೆ ತಾಲೂಕು ಗ್ಯಾರಂಟಿ ಸಮಿತಿ ಅಧ್ಯಕ್ಷರಾದ ಸೊನ್ನದ ಗುರುಬಸವರಾಜ್ ಅವರ ಅದ್ಯಕ್ಷತೆಯಲ್ಲಿ ನಡೆಯಿತು. ಸಭೆಯಲ್ಲಿ ಮಹಿಳಾ ಮಕ್ಕಳ ಕಲ್ಯಾಣ ಇಲಾಖೆ, ಸಾರಿಗೆ ಇಲಾಖೆ, ಆಹಾರ ಇಲಾಖೆ, ಕೆ ಇ ಬಿ ಇಲಾಖೆ, ಉದ್ಯೋಗ ಅಧಿಕಾರಿಗಳು ಸೇರಿದಂತೆ ತಾಲೂಕು ಮಟ್ಟದ ಅಧಿಕಾರಿಗಳು ಭಾಗವಹಿಸಿ ತಮ್ಮ ಇಲಾಖೆಗಳ ಪ್ರಗತಿಯ ವರದಿಯನ್ನು ಸಭೆಯಲ್ಲಿ ಮಂಡಿಸಿದರು. ಹಗರಿಬೊಮ್ಮನಹಳ್ಳಿ ತಾಲೂಕಿನಲ್ಲಿ ಐದು ಯೋಜನೆಗಳ ಸೌಲಭ್ಯಗಳು ಅರ್ಹರಿಗೆ ವ್ಯವಸ್ಥಿತವಾಗಿ ತಲುಪುತಿದ್ದು ಲೋಪದೋಷಗಳು ಇಲ್ಲದಂತೆ ಮುಂದಿನ ದಿನಗಳಲ್ಲಿ ಕಾರ್ಯನಿರ್ವಹಿಸಬೇಕೆಂದು ಅಧಿಕಾರಿಗಳಿಗೆ ಅಧ್ಯಕ್ಷರು ತಾಕೀತು ಮಾಡಿದರು.ಯುವನಿಧಿ ಯೋಜನೆಯಲ್ಲಿ ನೋಂದಣಿ ಮಾಡಿಕೊಂಡ ಫಲಾನುಭವಿಗಳಿಗೆ ಯುವನಿಧಿ ಪ್ಲಸ್ ಕಾರ್ಯಕ್ರಮದಡಿಯಲ್ಲಿ ವಿಶೇಷ ಕೌಶಲ್ಯ ತರಬೇತಿ ನೀಡಿ, ವಿವಿಧ ಕಂಪನಿ, ಫ್ಯಾಕ್ಟರಿ, ಸಂಸ್ಥೆ ಗಳಲ್ಲಿ ಟೈ ಅಪ್ ಮಾಡಿಕೊಂಡು ಉದ್ಯೋಗದ ಭರವಸೆ ನೀಡುವ ಕಾರ್ಯಕ್ರಮ ದ ಸಮಾವೇಶ ವನ್ನು ಹಗರಿಬೊಮ್ಮನಹಳ್ಳಿ ಡಿಗ್ರಿ ಕಾಲೇಜ್ ನಲ್ಲಿ ಮಾಡಲು ಗ್ಯಾರಂಟಿ ಸಮಿತಿ ಮತ್ತು ಉದ್ಯೋಗಧಿಕಾರಿಗಳು ಪ್ರಯತ್ನಿಸಿದರೆ, ಈ ಕ್ಷೇತ್ರದ ಶಾಸಕರು ಅದಕ್ಕೆ ಅವಕಾಶ ಕೊಡದಂತೆ ಕಾಲೇಜ್ ಪ್ರಿನ್ಸಿಪಾಲ ಮುಖಾಂತರ ತಡೆಯುತ್ತಿರುವುದು ಈ ಭಾಗದ ವಿದ್ಯಾರ್ಥಿಗಳು ಹಾಗೂ ಕೆಲಸ ಇಲ್ಲದ ಯುವಕರಿಗೆ ಮಾಡುತ್ತಿರುವ ಘೋರ ಅನ್ಯಾಯವಾಗಿದೆ. ಮುಂದಿನ ದಿನಗಳಲ್ಲಿ ಡಿ ಸಿ ಹಾಗೂ ಸಿ ಇ ಓ ಮುಖಾಂತರ ಅನುಮತಿ ಪಡೆದು ಕಾರ್ಯಕ್ರಮ ಮಾಡುತ್ತೇವೆ ಎಂದು ಅಧ್ಯಕ್ಷರು ಸಭೆಗೆ ಮಾಹಿತಿ ನೀಡಿದರು. ಸಭೆಯಲ್ಲಿ ಜಿಲ್ಲಾ ಗ್ಯಾರಂಟಿ ಪ್ರಾಧಿಕಾರದ ಉಪಾಧ್ಯಕ್ಷರಾದ ಜಂದಿಸಾಹೇಬ್, ಜಿಲ್ಲಾ ಗ್ಯಾರಂಟಿ ಪ್ರಾಧಿಕಾರದ ಸದಸ್ಯರಾದ ಪರಶುರಾಮ್ ಹೆಗ್ಡಳ್ ತಾಲೂಕು ಸದಸ್ಯರಾದ ರಾಘು ಉಲವತ್ತಿ, ಮೇಟಿ ಮಂಜುನಾಥ, ತಂಬ್ರಳ್ಳಿ ಗಿರೀಶ್, ವೆಂಕಟೇಶ್ ನಾಯ್ಕ್, ಸಂತೋಷ, ಸರ್ದಾರ್ ರಾಮಣ್ಣ, ಪ್ರಕಾಶ್ ಉಪ್ಪಾರ್, ಸದ್ದಾಂ,ದೊಡ್ಡಬಸಪ್ಪ,ಮಹಿಳಾ ಸದಸ್ಯರಾದ ನಾಗಮ್ಮ ತಾಲೂಕು ಪಂಚಾಯಿತಿ ಕಾರ್ಯನಿರ್ವಾಹಕ ಅಧಿಕಾರಿ ಹಾಗೂ ಗ್ಯಾರಂಟಿ ಸಮಿತಿ ಕಾರ್ಯದರ್ಶಿಗಳಾದ ಪಾಲಯ್ಯನಕೋಟೆ ವಿಶ್ವನಾಥ್ ಮತ್ತು ಯೋಜನಾ ಅಧಿಕಾರಿ ನಾಗರಾಜ್ ನಾಯ್ಕ್ ತಾಲೂಕು ಪಂಚಾಯಿತಿ ಸಿಬ್ಬಂದಿ ಲಕ್ಷ್ಮಿ ಮುಂತಾದವರಿದ್ದರು.

## ಹರ್ ಘರ್ ಏಕ್ ಪೇಡ್ ಅಭಿಯಾನಕ್ಕೆ ಬೆಂಬಲ ವಾರ್ಡ್ ನಂ. 9ರಲ್ಲಿ 250 ಸಸಿಗಳ ವಿತರಣೆ

• ಮಲ್ಲಮ್ಮ ನುಡಿ ವಾರ್ತೆ ಬಳ್ಳಾರಿ



ಪ್ರಧಾನಿ ನರೇಂದ್ರ ಮೋದಿ ಅವರ ಸಂಕಲ್ಪದ "ಹರ್ ಘರ್ ಏಕ್ ಪೇಡ್" (ಪ್ರತಿ ಮನೆಗೆ ಒಂದು ಗಿಡ) ಅಭಿಯಾನಕ್ಕೆ ಬೆಂಬಲ ಸೂಚಿಸುವ ನಿಟ್ಟಿನಲ್ಲಿ ಬಳ್ಳಾರಿ ನಗರದ ವಾರ್ಡ್ ನಂ. 9ರಲ್ಲಿ ಮಂಗಳಮುಖಿ ಚಾಂದಿನಿ ಅವರ ನೇತೃತ್ವದಲ್ಲಿ 250 ಸಸಿಗಳ ವಿತರಣೆ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಯಿತು.ರೂಪನಗುಡಿ ರಸ್ತೆಯಲ್ಲಿರುವ ಹುಲಿಗಮ್ಮ ದೇವಸ್ಥಾನ ಆವರಣದಲ್ಲಿ ಸಸಿ ನೆಡುವ ಮೂಲಕ ಕಾರ್ಯಕ್ರಮಕ್ಕೆ ಚಾಲನೆ ನೀಡಲಾಯಿತು. ಬಳಿಕ ಸುದ್ದಿಗಾರರೊಂದಿಗೆ ಮಾತನಾಡಿದ ಬಳ್ಳಾರಿ ಬಿಜೆಪಿ ಮಹಿಳಾ ಮೋರ್ಚಾ ಅಧ್ಯಕ್ಷೆ ಹಂಪಿ ರಾಮನ, ಪ್ರಧಾನಿ ನರೇಂದ್ರ ಮೋದಿ ಅವರ ಪರಿಸರ ಸಂರಕ್ಷಣೆಯ ಮಹತ್ವಾಕಾಂಕ್ಷಿ ಯೋಜನೆಯಾದ "ಹರ್ ಘರ್ ಏಕ್ ಪೇಡ್" ಅಭಿಯಾನವನ್ನು ಸ್ಮರಿಸಿಕೊಂಡು ಈ ಸಸಿ ವಿತರಣೆ ಕಾರ್ಯಕ್ರಮವನ್ನು ಆಯೋಜಿಸಲಾಗಿದೆ ಎಂದು ತಿಳಿಸಿದರು.ನಂತರ ಮಾತನಾಡಿದ ಕಾರ್ಯಕ್ರಮದ ಆಯೋಜಕಿ ಚಾಂದಿನಿ, ಬಳ್ಳಾರಿಯಲ್ಲಿ ದಿನದಿಂದ ದಿನಕ್ಕೆ ಹೆಚ್ಚುತ್ತಿರುವ ಬೇಸಿಗೆಯ ತಾಪಮಾನವನ್ನು ನಿಯಂತ್ರಿಸಲು ಪ್ರತಿಯೊಬ್ಬರೂ ತಮ್ಮ ಮನೆ ಮತ್ತು ಸುತ್ತಮುತ್ತ ಕನಿಷ್ಠ ಒಂದು ಸಸಿಯನ್ನಾದರೂ ನೆಟ್ಟು ಪೋಷಿಸಬೇಕು ಎಂದು ಸಾರ್ವಜನಿಕರಿಗೆ ಕರೆ ನೀಡಿದರು. "ಮೋದಿಜಿ ಅವರ ಸಂಕಲ್ಪವೇ ನಮ್ಮ ಸ್ಫೂರ್ತಿ. 'ಹರ್ ಘರ್ ಏಕ್ ಪೇಡ್' ಎಂಬ ಅಭಿಯಾನವನ್ನು ಪ್ರತಿಯೊಬ್ಬರೂ ತಮ್ಮ ವೈಯಕ್ತಿಕ ಸಂಕಲ್ಪವನ್ನಾಗಿ ಸ್ವೀಕರಿಸಬೇಕು. ಒಂದು ಕುಟುಂಬದಲ್ಲಿ ಎಷ್ಟು ಸದಸ್ಯರಿದ್ದಾರೋ ಅಷ್ಟೂ ಸಸಿಗಳನ್ನು ನೆಟ್ಟು ಪರಿಸರ ಸಂರಕ್ಷಣೆಗೆ ಕೈಜೋಡಿಸಬೇಕು" ಎಂದು ಅವರು ಹೇಳಿದರು.ಕಾರ್ಯಕ್ರಮದಲ್ಲಿ ಬಳ್ಳಾರಿ ಬಿಜೆಪಿ ಜಿಲ್ಲಾಧ್ಯಕ್ಷ ಅನಿಲ್ ಕುಮಾರ್ ಮೋಕಾ ಮುಖ್ಯ ಅತಿಥಿಯಾಗಿ ಭಾಗವಹಿಸಿ ಸಸಿ ನೆಡುವ ಮೂಲಕ ಅಭಿಯಾನಕ್ಕೆ ಬೆಂಬಲ ವ್ಯಕ್ತಪಡಿಸಿದರು.ಈ ಸಂದರ್ಭದಲ್ಲಿ ಹಂಪಿ ರಾಮನ, ಚಾಂದಿನಿ, ಭಾರತಿ, ಪುಷ್ಪಲತಾ, ಶಿವಗಂಗಾ, ಕೃಷ್ಣವೇಣಿ, ಬಂಗಾರವೇಣಿ, ನಾಗರತ್ನ, ಗೀತಾ, ಜಲಜಾ, ಮಧು, ಪಾವನಿ, ರಾಜಿ, ದುರ್ಗಮ್ಮ, ಶಶಿ, ರಮ್ಯಾ, ಮಮತಾ, ಪವನ್, ದುರ್ಗೇಶ್, ಚಿಕನ್ ಧಧು ಸೇರಿದಂತೆ ಹಲವರು ಉಪಸ್ಥಿತರಿದ್ದರು.

# ಕನ್ನಡದ ಅಸ್ಮಿತೆಗಾಗಿ ಹಳಗನ್ನಡ ಅಧ್ಯಯನ ಅಗತ್ಯ

• ಮಲ್ಲಮ್ಮ ನುಡಿ ವಾರ್ತೆ ಬಾಗಲಕೋಟೆ

ಕನ್ನಡದ ಅಸ್ಮಿತೆ ಮತ್ತು ಸಾಂಸ್ಕೃತಿಕ ಪರಂಪರೆಯನ್ನು ಉಳಿಸಿಕೊಳ್ಳಬೇಕಾದರೆ ಹಳಗನ್ನಡ ಅಧ್ಯಯನಕ್ಕೆ ಹೆಚ್ಚಿನ ಮಹತ್ವ ನೀಡಬೇಕು. ನಮ್ಮ ನಿರ್ಲಕ್ಷ್ಯದಿಂದ ಹಳಗನ್ನಡ ಅಳಿವಿನ ಅಂಚಿನಲ್ಲಿದ್ದು, ಅದನ್ನು ಸಂರಕ್ಷಿಸುವ ಜವಾಬ್ದಾರಿ ಕನ್ನಡಿಗರ ಮೇಲಿದೆ ಎಂದು ಹಿರಿಯ ಸಾಹಿತಿ ಡಾ.ವೈ.ಎಂ. ಯಾಕೊಳ್ಳಿ ಹೇಳಿದರು.

ನವನಗರದ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನ ವಿಶ್ವಮಾನವ ಸಭಾಭವನದಲ್ಲಿ ಬಾಗಲಕೋಟೆ ವಿಶ್ವವಿದ್ಯಾಲಯ ವ್ಯಾಪ್ತಿಯ ಪದವಿ ಕಾಲೇಜುಗಳ ಕನ್ನಡ ಅಧ್ಯಾಪಕರ ಯುಜಿಸಿಯೇತರ ಸಂಘ ಹಾಗೂ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನ ಕನ್ನಡ ವಿಭಾಗದ ಸಂಯುಕ್ತ ಆಶ್ರಯದಲ್ಲಿ ಆಯೋಜಿಸಿದ್ದ "ಕನ್ನಡ ಸಾಹಿತ್ಯ ಅನುಸಂಧಾನ" ವಿಶೇಷ ಉಪನ್ಯಾಸ ಕಾರ್ಯಕ್ರಮವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಕನ್ನಡವನ್ನು ಸರಿಯಾಗಿ ಓದುವ ಹಾಗೂ ಹಳಗನ್ನಡವನ್ನು ಅರ್ಥೈಸುವ ಸಾಮರ್ಥ್ಯ ಬೆಳೆಸುವ ಕಾರ್ಯಗಳು ಕಡಿಮೆಯಾಗುತ್ತಿವೆ. ಸಾವಿರಾರು ವರ್ಷಗಳ ಇತಿಹಾಸ ಹೊಂದಿರುವ ಹಳಗನ್ನಡ ಇಂದು ಪುಸ್ತಕಗಳಲ್ಲಿ ಉಳಿದಿದ್ದು, ಹಳಗನ್ನಡದ ಬಗ್ಗೆ ನಿರ್ಲಕ್ಷ್ಯ ಮುಂದುವರಿದರೆ ಸಂಸ್ಕೃತದಂತೆ ಇದೂ ಮೃತಭಾಷೆಯಾಗುವ ಅಪಾಯವಿದೆ ಎಂದು ಕಳವಳ ವ್ಯಕ್ತಪಡಿಸಿದರು.




ಸುಮಾರು 400 ಕ್ಕೂ ಹೆಚ್ಚು ಹಳಗನ್ನಡ ಕಾವ್ಯಗಳು ಲಭ್ಯವಿದ್ದು, ಕನ್ನಡ ಸಾಹಿತ್ಯ ಲೋಕದಲ್ಲಿ ನಡೆದ ಮಹತ್ವದ ಪ್ರಯೋಗಗಳ ಅರಿವು ಇಂದಿನ ಹೊಸ ತಲೆಮಾರಿಗೆ ಅಗತ್ಯವಾಗಿದೆ. ಸಾಮಾಜಿಕ ಜಾಲತಾಣಗಳನ್ನು ಸಾಹಿತ್ಯದ ಪ್ರಸಾರ ಮತ್ತು ಕನ್ನಡದ ಬೆಳವಣಿಗೆಗೆ ಬಳಸಿಕೊಳ್ಳುವ ಮೂಲಕ ಭಾಷೆಯನ್ನು ಉಳಿಸಿ ಬೆಳೆಸುವ ಕೆಲಸ ಆಗಬೇಕು ಎಂದು ಹೇಳಿದರು. ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಪ್ರಾಂಶುಪಾಲ ಡಾ. ಅರುಣಕುಮಾರ ಗಾಳಿ ಮಾತನಾಡಿ, ಹಳಗನ್ನಡ ಕನ್ನಡಿಗರ ಭಾಷಾ ಅಸ್ಮಿತೆಯ ಪ್ರತೀಕವಾಗಿದೆ. ಇಂದಿನ ಮಕ್ಕಳಿಗೆ ಕನ್ನಡ ಭಾಷೆಯ ಜೊತೆಗೆ ಹಳಗನ್ನಡದ ಅರಿವು ಕೂಡ ಅಗತ್ಯವಾಗಿದ್ದು, ಕುಮಾರವ್ಯಾಸನ ಪದ್ಯವನ್ನು ಹೇಳುವ ಮೂಲಕ ಅದರ ಅಧ್ಯಯನ ನಮ್ಮಿಂದಲೇ ಆರಂಭವಾಗಬೇಕು ಎಂದು ಹೇಳಿದರು.

ಇದೇ ಸಂದರ್ಭದಲ್ಲಿ ನೂತನವಾಗಿ ಆರಂಭಗೊಂಡಿರುವ ಬಾಗಲಕೋಟೆ ವಿಶ್ವವಿದ್ಯಾಲಯ ವ್ಯಾಪ್ತಿಯ ಪದವಿ ಕಾಲೇಜುಗಳ ಕನ್ನಡ ಅಧ್ಯಾಪಕರ ಸಂಘಕ್ಕೆ ಎಲ್ಲ ರೀತಿಯ ಸಹಕಾರ ನೀಡುವುದಾಗಿ ಅವರು ಭರವಸೆ ನೀಡಿದರು. ಆಶಯ ನುಡಿಯನ್ನಾಡಿದ ಬಾಗಾಲಕೋಟ ವಿ.ವಿ ವ್ಯಾಪ್ತಿಯ ಪದವಿ ಕಾಲೇಜುಗಳ ಕನ್ನಡ ಅಧ್ಯಾಪಕರ ಯುಜಿಸಿಯೇತರ ಸಂಘದ ನೂತನ ಅಧ್ಯಕ್ಷ ಡಾ.ಚಂದ್ರಶೇಖರ ಕಾಳನ್ನವರ, ಇಂದಿನ ಪದವಿ ವಿದ್ಯಾರ್ಥಿಗಳಿಗೆ ಹಳಗನ್ನಡ, ನಡುಗನ್ನಡ, ಹೊಸಗನ್ನಡ ಕಾಲಘಟ್ಟದ ಸಾಹಿತ್ಯ ಕೃತಿಗಳ ಮೌಲ್ಯಗಳನ್ನು ಪರಿಚಯಿಸುವ ಸದುದ್ದೇಶ ಹೊಂದಿದೆ ಎಂದರು.

ಕನ್ನಡ ವಿಷಯದ ಮೌಲ್ಯಮಾಪನ ಕೇಂದ್ರದ ಚೇರಮನ್ ಡಾ.ಎ.ಎಂ.ಸತ್ಯನಾಯಕ, ಕನ್ನಡ ವಿಭಾಗ ಮುಖ್ಯಸ್ಥ ಪರಸಪ್ಪ ತಳವಾರ, ಬಾಗಲಕೋಟೆ ವಿಶ್ವವಿದ್ಯಾಲಯ ಮೌಲ್ಯಮಾಪನ ಕೇಂದ್ರ ಸಂಚಾಲಕ ಡಾ.ಸಂಪತ್ತ ಲಮಾಣಿ, ಡಾ.ಬಸವರಾಜ ಬೀಳಗಿ, ಪ್ರಧಾನ ಕಾರ್ಯದರ್ಶಿ ಎಸ್.ಸಿ.ಗದ್ಯಾಳ ವೇದಿಕೆ ಮೇಲೆ ಉಪಸ್ಥಿತರಿದ್ದರು. ಶ್ರೀಕಾಂತ ಕೆಂಧೂಳಿ ಪ್ರಾರ್ಥಿಸಿದರು. ಪ್ರಧಾನ ಕಾರ್ಯದರ್ಶಿ ಎಸ್.ಸಿ.ಗದ್ಯಾಳ ಸ್ವಾಗತಿಸಿದರು. ಕೋಶಾಧ್ಯಕ್ಷ ಡಾ.ಬಸವರಾಜ ಖೋತ ಅತಿಥಿಗಳ ಪರಿಚಯಿಸಿದರು. ಡಾ.ಪುಂಡಲೀಕ ಹುನ್ನಳ್ಳಿ ನಿರೂಪಿಸಿದರು. ಡಾ.ಶಂಕರ ಕೋಳಿ ವಂದಿಸಿದರು. ಎಲ್ಲಾ ಅಧ್ಯಾಪಕರಿಗೆ ಪ್ರಮಾಣ ಪತ್ರ ವಿತರಿಸಲಾಯಿತು.

# ಪೊಲೀಸ್ ಗೂಂಡಾಗಿರಿ ನಿಲ್ಲಲಿ, ತಪ್ಪಿತಸ್ಥ ಪಿಎಸ್‌ಐ ಅಮಾನತುಗೊಳಿಸಿ: ಆಗ್ರಹ

• ಮಲ್ಲಮ್ಮ ನುಡಿ ವಾರ್ತೆ ಕೊಪ್ಪಳ

ಜಿಲ್ಲೆಯ ಅಳವಂಡಿ ಪೊಲೀಸ್ ಠಾಣೆಯಲ್ಲಿ ಕಾನೂನು ವಿದ್ಯಾರ್ಥಿಗಳ ಮೇಲೆ ಹಲ್ಲೆ ನಡೆಸಿರುವ ಆರೋಪ ಕೇಳಿಬಂದಿದ್ದು, ಘಟನೆಯನ್ನು ಖಂಡಿಸಿ ಸಂಬಂಧಪಟ್ಟ ಪೊಲೀಸ್ ಅಧಿಕಾರಿಗಳ ವಿರುದ್ಧ ಸೂಕ್ತ ಕ್ರಮ ಕೈಗೊಳ್ಳುವಂತೆ ಆಗ್ರಹಿಸಿ ಕಾನೂನು ವಿದ್ಯಾರ್ಥಿಗಳ ನಿಯೋಗದಿಂದ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ (ಎಸ್‌ಪಿ) ಅವರಿಗೆ ಮನವಿ ಸಲ್ಲಿಸಲಾಯಿತು.

ಅಳವಂಡಿ ಪೊಲೀಸ್ ಠಾಣೆ ವ್ಯಾಪ್ತಿಯ ಬೋಚನಹಳ್ಳಿ ಗ್ರಾಮದಲ್ಲಿ ನಡೆದ ಸಿವಿಲ್ ವ್ಯಾಜ್ಯಕ್ಕೆ ಸಂಬಂಧಿಸಿದಂತೆ ಪೊಲೀಸರು ಮಧ್ಯಪ್ರವೇಶಿಸಿದ್ದು, ಜೂನ್ 14ರಂದು ರಾತ್ರಿ ಸುಮಾರು 8 ಗಂಟೆಗೆ ಮರಿತಿಮ್ಮಪ್ಪ ಎಂಬ ಯುವಕನನ್ನು ಠಾಣೆಗೆ ಕ-ರೆದುಕೊಂಡು ಹೋಗಿ ಹಲ್ಲೆ ನಡೆಸಿದ್ದಾರೆ ಎಂದು ಆರೋಪಿಸಲಾಗಿದೆ.



ಈ ವಿಷಯ ತಿಳಿದ ಮರಿತಿಮ್ಮಪ್ಪನ ಸ್ನೇಹಿತರಾದ ಕಾನೂನು ವಿದ್ಯಾರ್ಥಿಗಳಾದ ಯಲ್ಲಪ್ಪ ಮೇಟಿ ಹಾಗೂ ಬಸವರಾಜ್ ಠಾಣೆಗೆ ತೆರಳಿ ಯುವಕನನ್ನು ವಶಕ್ಕೆ ಪಡೆದಿರುವ ಕಾರಣವನ್ನು ಪ್ರಶ್ನಿಸಿದ್ದಾರೆ. ಈ ವೇಳೆ ಠಾಣೆಯೊಳಗೆ ಯುವಕನ ಮೇಲೆ ಹಲ್ಲೆ ನಡೆಯುತ್ತಿರುವುದನ್ನು ಮೊಬೈಲ್‌ನಲ್ಲಿ ಚಿತ್ರೀಕರಿಸಲು ಮುಂದಾದಾಗ ಪಿಎಸ್‌ಐ ಮೊಬೈಲ್ ಕಸಿದುಕೊಂಡು ಅಂಗವಿಕಲ ವಿದ್ಯಾರ್ಥಿ ಯಲ್ಲಪ್ಪ ಮೇಟಿ ಅವರ ಮೇಲೆ ಹಲ್ಲೆ ನಡೆಸಿದ್ದಾರೆ ಎಂದು ದೂರಲಾಗಿದೆ.

ಇದನ್ನು ತಡೆಯಲು ಮುಂದಾದ ಬಸವರಾಜ್ ಅವರ ಮೇಲೂ ಪಿಎಸ್‌ಐ ಹಾಗೂ ಇಬ್ಬರು ಪೊಲೀಸ್ ಪೇದೆಗಳು ಹಲ್ಲೆ ನಡೆಸಿದ್ದಾರೆ ಎಂದು ವಿದ್ಯಾರ್ಥಿಗಳು ಎಸ್‌ಪಿಗೆ ಸಲ್ಲಿಸಿರುವ ಮನವಿಯಲ್ಲಿ ಆರೋಪಿಸಿದ್ದಾರೆ.

ಘಟನೆಯನ್ನು ಖಂಡಿಸಿರುವ ಕರ್ನಾಟಕ ವಿದ್ಯಾರ್ಥಿ ಸಂಘಟನೆಯ ಮುಖಂಡ ಉಮೇಶ್ ಬಡಗಿ, "ಜನರ ರಕ್ಷಕರಾಗಿರಬೇಕಾದ ಪೊಲೀಸರು ಭಕ್ಷಕರಂತೆ ವರ್ತಿಸುತ್ತಿರುವುದು ಖಂಡನೀಯ. ಇದು ಮಾನವ ಹಕ್ಕುಗಳ ಉಲ್ಲಂಘನೆಯಾಗಿದ್ದು, ಸಂಬಂಧಪಟ್ಟ ಪಿಎಸ್‌ಐ ಹಾಗೂ ಸಿಬ್ಬಂದಿಯನ್ನು ತಕ್ಷಣ ಅಮಾನತುಗೊಳಿಸಿ ಕಾನೂನು ಕ್ರಮ ಜರುಗಿಸಬೇಕು. ಬಾಧಿತ ವಿದ್ಯಾರ್ಥಿಗಳಿಗೆ ಸೂಕ್ತ ಪರಿಹಾರ ಹಾಗೂ ಭದ್ರತೆ ಒದಗಿಸಬೇಕು. ಇಲ್ಲವಾದಲ್ಲಿ ಜಿಲ್ಲಾದ್ಯಂತ ಹೋರಾಟ ಹಮ್ಮಿಕೊಳ್ಳಲಾಗುವುದು" ಎಂದು ಎಚ್ಚರಿಕೆ ನೀಡಿದ್ದಾರೆ.

# ಉಚಿತ ಬಸ್ ಪಾಸ್ ವಿತರಿಸಿದ ಶಾಸಕ ಉಮೇಶ ಮೇಟಿ

• ಮಲ್ಲಮ್ಮ ನುಡಿ ವಾರ್ತೆ ಬಾಗಲಕೋಟೆ

ರಾಜ್ಯ ಸರಕಾರ ಜಾರಿಗೆ ತಂದಿರುವ ಉಚಿತ ಬಸ್‌ಪಾಸ್ ಯೋಜನೆಯಡಿ ಶಾಸಕ ಉಮೇಶ ಮೇಟಿ ಸೋಮವಾರ ವಿದ್ಯಾರ್ಥಿಗಳಿಗೆ ಉಚಿತ ಬಸ್‌ಪಾಸ್ ವಿತರಿಸಿದರು.

ಬಾಗಲಕೋಟೆ ಹಳೆ ಬಸ್ ನಿಲ್ದಾಣದಲ್ಲಿ ವಾಯವ್ಯ ಕರ್ನಾಟಕ ರಸ್ತೆ ಸಾರಿಗೆ ಸಂಸ್ಥೆ ವತಿಯಿಂದ ಹಮ್ಮಿಕೊಂಡ ಉಚಿತ ಬಸ್‌ಪಾಸ್ ವಿತರಣಾ ಕಾರ್ಯಕ್ರಮದಲ್ಲಿ ವಿದ್ಯಾರ್ಥಿಗಳಿಗೆ ಸಾಂಕೇತಿಕವಾಗಿ ಬಸ್ ಪಾಸ್ ವಿತರಿಸಿ ಮಾತನಾಡಿದ ಶಾಸಕರು, ವಿದ್ಯಾರ್ಥಿಗಳು ದೇಶದ ಭವಿಷ್ಯವಾಗಿದ್ದು, ಗ್ರಾಮೀಣ ಭಾಗದ ವಿದ್ಯಾರ್ಥಿಗಳು ಶಿಕ್ಷಣ ಪಡೆಯಲು ಸಾರಿಗೆ ವೆಚ್ಚ ದೊಡ್ಡ ಸವಾಲಾಗಿದ್ದು, ಉಚಿತ ಬಸ್ ಪಾಸ್ ಯೋಜನೆಯಿಂದ ವಿದ್ಯಾರ್ಥಿಗಳ ಶೈಕ್ಷಣಿಕ ಪ್ರಗತಿಗೆ ಸಹಕಾರಿಯಾಗಲಿದೆ ಎಂದು ತಿಳಿಸಿದರು.



ಶಿಕ್ಷಣವೇ ಸಮಾಜದ ಅಭಿವೃದ್ಧಿಗೆ ಅಡಿಪಾಯವಾಗಿದ್ದು, ಪ್ರತಿಯೊಬ್ಬ ವಿದ್ಯಾರ್ಥಿಯೂ ಈ ಸೌಲಭ್ಯವನ್ನು ಸದುಪಯೋಗ ಪಡಿಸಿಕೊಂಡು ಉತ್ತಮ ಶಿಕ್ಷಣ ಪಡೆಯಬೇಕು. ಪೋಷಕರು ಸಹ ತಮ್ಮ ಮಕ್ಕಳ ವಿದ್ಯಾಭ್ಯಾಸಕ್ಕೆ ಹೆಚ್ಚಿನ ಪ್ರೋತ್ಸಾಹ ನೀಡಬೇಕು. ರಾಜ್ಯ ಸರಕಾರ ಶಿಕ್ಷಣ, ಯುವಜನತೆ ಮತ್ತು ಮಹಿಳೆಯರ ಸಬಲೀಕರಣಕ್ಕೆ ವಿಶೇಷ ಆದ್ಯತೆ ನೀಡುತ್ತಿದೆ. ವಿದ್ಯಾರ್ಥಿಗಳ ಕಲಿಕೆಯ ಹಾದಿಯನ್ನು ಸುಗಮಗೊಳಿಸಲು ಇಂತಹ ಯೋಜನೆಗಳು ನಿರಂತರವಾಗಿ ಜಾರಿಯಾಗುತ್ತಿವೆ. ಪ್ರತಿಯೊಬ್ಬ ವಿದ್ಯಾರ್ಥಿಯೂ ಉನ್ನತ ಶಿಕ್ಷಣ ಪಡೆದು ಸಮಾಜಕ್ಕೆ ಮಾದರಿಯಾಗಬೇಕು ಎಂದರು.

ಜಿಲ್ಲಾ ಗ್ಯಾರಂಟಿ ಯೋಜನೆ ಅನುಷ್ಠಾನ ಸಮಿತಿಯ ಅಧ್ಯಕ್ಷ ಅನಿಲಕುಮಾರ ದಡ್ಡಿ ಮಾತನಾಡಿ, ಆರ್ಥಿಕವಾಗಿ ಹಿಂದುಳಿದ ಕುಟಂಬಗಳ ವಿದ್ಯಾರ್ಥಿಗಳಿಗೆ ಈ ಯೋಜನೆ ನೆರವಾಗಲಿದೆ. ಶಿಕ್ಷಣವೇ ಸಮಾಜದ ಅಭಿವೃದ್ಧಿಗೆ ಮೂಲ ಆಧಾರವಾಗಿದ್ದು, ವಿದ್ಯಾರ್ಥಿಗಳು ಲಭ್ಯವಿರುವ ಸರ್ಕಾರದ ಸೌಲಭ್ಯವನ್ನು ಸದುಪಯೋಗ ಪಡಿಸಿಕೊಳ್ಳಬೇಕು ಎಂದು ಕರೆ ನೀಡಿದರು.

ಈಗಾಗಲೇ ಹಣ ಪಾವತಿಸಿ ಬಸ್ ಪಾಸ್ ಪಡೆದವರಿಗೆ ವಿದ್ಯಾರ್ಥಿಗಳ ಖಾತೆಗೆ ಮರಳಿ ಜಮೆ ಮಾಡಲಾಗುತ್ತಿದೆ. ಹೊಸದಾಗಿ ಅರ್ಜಿ ಸಲ್ಲಿಸುವವರು ಆನ್‌ಲೈನ್ ಮೂಲಕ ಅರ್ಜಿ ಹಾಕಿ ಉಚಿತ ಬಸ್‌ಪಾಸ್ ಪಡೆದುಕೊಳ್ಳಲು ತಿಳಿಸಿದರು.

ಕಾರ್ಯಕ್ರಮದಲ್ಲಿ ಬುಡಾ ಅಧ್ಯಕ್ಷ ಅಬ್ದುಲ್‌ರಜಾಕ ಬೇನೂರ, ತಹಶೀಲ್ದಾರ ವಾಸುದೇವ ಸ್ವಾಮಿ, ವಾ.ಕ.ರ.ಸಾ,ಸಂಸ್ಥೆಯ ವಿಭಾಗೀಯ ನಿಯಂತ್ರಣಾಧಿಕಾರಿ ಎನ್.ಟಿ.ಪಾಟೀಲ, ಗ್ರೇಡ್–2 ತಹಶೀಲ್ದಾರ ಬಿರಾದಾರ, ತಾಲೂಕಾ ಮಟ್ಟದ ಗ್ಯಾರಂಟಿ ಯೋಜನೆ ಅನುಷ್ಠಾನ ಸಮಿತಿಯ ಅಧ್ಯಕ್ಷ ಎಸ್.ಎಂ.ರಾಂಪುರ, ಸದಸ್ಯ ಶ್ರವಣ ಖಾತೇದಾರ, ಬಾಗಲಕೋಟೆ ಡಿಪೋ ಮ್ಯಾನೇಜರ ಚವ್ಹಾಣ, ನಾಗರಾಜ ಹದ್ಲಿ, ರಾಜು ಮನ್ನಿಕೇರಿ, ದ್ಯಾಮಣ್ಣ ಗಾಳಿ ಹಾಗೂ ಇತರರು ಉಪಸ್ಥಿತರಿದ್ದರು.

# ಮತದಾರರ ಪಟ್ಟಿಯ ವಿಶೇಷ ಪರಿಷ್ಕರಣೆ: ಮುಖಂಡರ ಆಕ್ರೋಶ

• ಮಲ್ಲಮ್ಮ ನುಡಿ ವಾರ್ತೆ ಹಗರಿಬೊಮ್ಮನಹಳ್ಳಿ

ಕೇಂದ್ರ ಚುನಾವಣಾ ಆಯೋಗವು ಬಿಜೆಪಿ ಸರ್ಕಾರದ ನಿರ್ದೇಶನದಂತೆ ಜಾರಿಗೆ ತರಲು ಮುಂದಾಗಿರುವ ಮತದಾರರ ಪಟ್ಟಿಯ ತೀವ್ರ ವಿಶೇಷ ಪರಿಷ್ಕರಣೆ (ಎಸ್ ಐ ಆರ್) ಪ್ರಕ್ರಿಯೆಯಲ್ಲಿ ಇರುವ ಲೋಪದೋಷಗಳನ್ನು ಸರಿಪಡಿಸಿ, ದೇಶದ ಮೂಲ ನಿವಾಸಿಗಳ ಮತದಾನದ ಹಕ್ಕು ಯಾರಿಂದಲೂ ಕಸಿದುಕೊಳ್ಳದಂತೆ ಎಚ್ಚರಿಕೆ ವಹಿಸಬೇಕೆಂದು ಕಾಂಗ್ರೆಸ್ ಮುಖಂಡರು ಆಗ್ರಹಿಸಿದರು.

ಪಟ್ಟಣದ ಶಾಸಕರ ಜನಸಂಪರ್ಕ ಕಚೇರಿಯಲ್ಲಿ ನಡೆದ ಸಭೆಯಲ್ಲಿ ಮಾತನಾಡಿದ ನಿಕಟ ಪೂರ್ವ ಕೆಎಂಎಫ್ ಅಧ್ಯಕ್ಷರು ಹಾಗೂ ಮಾಜಿ ಶಾಸಕರಾದ ಶ್ರೀ ಎಸ್. ಭೀಮಾನಾಯ್ಕ್, "ಎ□□□ ಆರ್ ಎಂಬುದು ಅಸಂವಿಧಾನಿಕ, ಅವೈಜ್ಞಾನಿಕ, ದೋಷಪೂರಿತ ಹಾಗೂ ದುರುದ್ದೇಶಪೂರಿತ ಮತದಾರರ ಪಟ್ಟಿಯ ಪರಿಷ್ಕರಣಾ ಪ್ರಕ್ರಿಯೆಯಾಗಿದೆ. ದೇಶದ ಪ್ರಜಾಪ್ರಭುತ್ವ ವ್ಯವಸ್ಥೆಯ ಮೂಲವಾದ ಮತದಾನದ ಹಕ್ಕಿನ ಮೇಲೆ ಇದು ಗಂಭೀರ ಪರಿಣಾಮ ಬೀರುವ ಸಾಧ್ಯತೆಯಿದೆ. ಹೀಗಾಗಿ ಈ ಪ್ರಕ್ರಿಯೆಯನ್ನು ಕೂಡಲೇ ಸ್ಥಗಿತಗೊಳಿಸಿ, ಜನಸಾಮಾನ್ಯರ ಅಭಿಪ್ರಾಯ ಪಡೆದು ಪಾರದರ್ಶಕ ಕ್ರಮ ಕೈಗೊಳ್ಳಬೇಕು" ಎಂದು ಒತ್ತಾಯಿಸಿದರು.

ಬ್ಲಾಕ್ ಕಾಂಗ್ರೆಸ್ ತಾಲೂಕು ಅಧ್ಯಕ್ಷ ಕೋರಿ ಗೋಣಿಬಸಪ್ಪ ಮಾತನಾಡಿ, "ಜನಪ್ರಿಯತೆಯನ್ನು ಕಳೆದುಕೊಳ್ಳುತ್ತಿರುವ ಬಿಜೆಪಿ ಅಧಿಕಾರವನ್ನು ಉಳಿಸಿಕೊಳ್ಳಲು ಮತ್ತು ವಿರೋಧ ಪಕ್ಷಗಳನ್ನು ರಾಜಕೀಯವಾಗಿ ದುರ್ಬಲಗೊಳಿಸಲು ವಿವಿಧ ಕುತಂತ್ರಗಳನ್ನು ರೂಪಿಸುತ್ತಿದೆ. ಎಸ್ ಐ ಆರ್ ಪ್ರಕ್ರಿಯೆಯು ಆ ಷಡ್ಯಂತ್ರದ ಒಂದು ಪ್ರಮುಖ ಭಾಗವಾಗಿದೆ. ಮತದಾರರ ಹಕ್ಕುಗಳಿಗೆ ಧಕ್ಕೆ



ತರುವ ಯಾವುದೇ ಕ್ರಮವನ್ನು ಕಾಂಗ್ರೆಸ್ ಪಕ್ಷ ಸಹಿಸುವುದಿಲ್ಲ" ಎಂದು ಆರೋಪಿಸಿದರು.

ಐ.ದಾರುಕೇಶ್, ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷರು, ಕೊಟ್ಟೂರು ಹಾಗೂ ಬಿಡಿಸಿಸಿ ಉಪಾಧ್ಯಕ್ಷರು ಮಾತನಾಡಿ, "ಭಾರತದ ಸಂವಿಧಾನವು ಪ್ರತಿಯೊಬ್ಬ ಅರ್ಹ ನಾಗರಿಕನಿಗೂ ಮತದಾನದ ಹಕ್ಕನ್ನು ನೀಡಿದೆ. ಆದರೆ ಎಸ್ ಐ ಆರ್ ಪ್ರಕ್ರಿಯೆಯ ನೆಪದಲ್ಲಿ ಲಕ್ಷಾಂತರ ಮತದಾರರ ಹೆಸರನ್ನು ಪಟ್ಟಿಯಿಂದ ತೆಗೆದುಹಾಕುವ ಸಾಧ್ಯತೆ ಇದೆ. ಚುನಾವಣಾ ಆಯೋಗವು ರಾಜಕೀಯ ಒತ್ತಡಕ್ಕೆ ಮಣಿಯದೆ ನಿಷ್ಪಕ್ಷಪಾತವಾಗಿ ಕಾರ್ಯನಿರ್ವಹಿಸಬೇಕು" ಎಂದು ಹೇಳಿದರು.

ಕೆಪಿಸಿಸಿ ಸದಸ್ಯರು ಹಾಗೂ ವಿಜಯನಗರ ಜಿಲ್ಲಾ ಗ್ಯಾರಂಟಿ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷರಾದ ಕುರಿ ಶಿವಮೂರ್ತಿ ಮಾತನಾಡಿ, "ಪ್ರಜಾಪ್ರಭುತ್ವದಲ್ಲಿ ಮತದಾರನೇ ಸಾರ್ವಭೌಮ. ಮತದಾರರ ಹಕ್ಕುಗಳನ್ನು ಸಂರಕ್ಷಿಸುವುದು ಪ್ರತಿಯೊಂದು ಸಂಸ್ಥೆಯ ಜವಾಬ್ದಾರಿಯಾಗಿದೆ. ಎಸ್ ಐ ಆರ್ ಪ್ರಕ್ರಿಯೆಯಲ್ಲಿರುವ ಗೊಂದಲಗಳು ಮತ್ತು ತಾಂತ್ರಿಕ ದೋಷಗಳಿಂದ ಬಡವರು, ಕಾರ್ಮಿಕರು, ಹಿಂದುಳಿದ ವರ್ಗಗಳು ಹಾಗೂ ಗ್ರಾಮೀಣ ಭಾಗದ ಜನರು ಹೆಚ್ಚು ತೊಂದರೆ ಅನುಭವಿಸುವ ಸಾಧ್ಯತೆ ಇದೆ. ಹೀಗಾಗಿ ಜನರಲ್ಲಿ ಜಾಗೃತಿ ಮೂಡಿಸುವ ಕಾರ್ಯವನ್ನು ಕಾಂಗ್ರೆಸ್ ಪಕ್ಷ ಕೈಗೊಂಡಿದೆ" ಎಂದರು.

ತಾಲೂಕು ಪ್ರಚಾರ ಸಮಿತಿ ಅಧ್ಯಕ್ಷ ನಂದಿಬಂಡಿ ಉಪ್ಪಾರ ಸೋಮಪ್ಪ ಪ್ರಾಸ್ತಾವಿಕವಾಗಿ ಮಾತನಾಡಿ, "ಮತದಾರರ ಪಟ್ಟಿಯ ಪರಿಷ್ಕರಣೆ ಕುರಿತು ಜನರಿಗೆ ಸರಿಯಾದ ಮಾಹಿತಿ ನೀಡುವುದು ಅಗತ್ಯವಾಗಿದೆ. ಅನೇಕ ಜನರು ಪ್ರಕ್ರಿಯೆಯ ಬಗ್ಗೆ ಅರಿವು ಇಲ್ಲದೇ ತಮ್ಮ ಮತದಾನದ ಹಕ್ಕು ಕಳೆದುಕೊಳ್ಳುವ ಅಪಾಯವಿದೆ. ಆದ್ದರಿಂದ ಪ್ರತಿಯೊಬ್ಬ ಮತದಾರರೂ ತಮ್ಮ ಹೆಸರು ಪಟ್ಟಿಯಲ್ಲಿ ಇದೆಯೇ ಎಂಬುದನ್ನು ಪರಿಶೀಲಿಸಿಕೊಳ್ಳಬೇಕು" ಎಂದು ಕರೆ ನೀಡಿದರು.

~~ವಿಜಯನಗರ ಜಿಲ್ಲಾ ಕಾಂಗ್ರೆಸ್ ಮಹಿಳಾ ಅಧ್ಯಕ್ಷೆ ಶ್ರೀಮತಿ ಸಾಹಿರಬಾನು ಮಾತನಾಡಿ, "ಮಹಿಳೆಯರು, ಅಲ್ಪಸಂಖ್ಯಾತರು ಹಾಗೂ ಸಮಾಜದ ದುರ್ಬಲ ವರ್ಗಗಳ ಮತದಾನದ ಹಕ್ಕುಗಳಿಗೆ ಯಾವುದೇ ರೀತಿಯ ಧಕ್ಕೆ ಆಗದಂತೆ ಸರ್ಕಾರ ಮತ್ತು ಚುನಾವಣಾ ಆಯೋಗ ಎಚ್ಚರಿಕೆ ವಹಿಸಬೇಕು. ಪ್ರಜಾಪ್ರಭುತ್ವವನ್ನು ಉಳಿಸಬೇಕಾದರೆ ಪ್ರತಿಯೊಬ್ಬ ಮತದಾರನ ಹಕ್ಕು ರಕ್ಷಣೆಗೊಳ್ಳಬೇಕು" ಎಂದು ಹೇಳಿದರು.~~

ಈ ಸಂದರ್ಭದಲ್ಲಿ ಗೂಳಿ ಮಲ್ಲಿಕಾರ್ಜುನ (ಕೆಪಿಸಿಸಿ ಸದಸ್ಯರು, ಕೊಟ್ಟೂರು), ಹೆಗ್ಡಾಳ್ ರಾಮಣ್ಣ (ಮಾಜಿ ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷರು ಹಾಗೂ ಮಾಜಿ ಜಿಲ್ಲಾ ಪಂಚಾಯತ್ ಸದಸ್ಯರು), ಅಕ್ಕಿ ತೋಟೇಶ್ (ಮಾಜಿ ಜಿಲ್ಲಾ ಪಂಚಾಯತ್ ಸದಸ್ಯರು), ಶ್ರೀಮತಿ ಯಶೋದಾ (ಮಹಿಳಾ ಕಾಂಗ್ರೆಸ್ ಅಧ್ಯಕ್ಷರು, ಹಗರಿಬೊಮ್ಮನಹಳ್ಳಿ), ಜಿಲ್ಲಾ ಗ್ಯಾರಂಟಿ ಅನುಷ್ಠಾನ ಸಮಿತಿ ಸದಸ್ಯರು, ಪರಶುರಾಮ್ ಹೆಗ್ಡಾಳ್, ಪ್ರಗತಿಪರ ಸಂಘದ ಹನಸಿ ದೇವರಾಜ್, ಗ್ಯಾರಂಟಿ ಸಮಿತಿ ಅಧ್ಯಕ್ಷ ಗುರುಬಸವರಾಜ್, ಉಪ್ಪಾರ ಬಾಳಪ್ಪ ಸೇರಿದಂತೆ ಅನೇಕ ಮುಖಂಡರು ಹಾಗೂ ಕಾರ್ಯಕರ್ತರು ಉಪಸ್ಥಿತರಿದ್ದರು.

# ಬಾಲ ಕಾರ್ಮಿಕ ಪದ್ಧತಿ ನಿರ್ಮೂಲನೆಗೆ ಸಂಘಟಿತ ಪ್ರಯತ್ನ ಅಗತ್ಯ



**ಬಾಗಲಕೋಟೆ:** ಸಾಮಾಜಿಕ ಸಮಸ್ಯೆಯಾಗಿರುವ ಬಾಲಕಾರ್ಮಿಕ ಪದ್ಧತಿ ನಿರ್ಮೂಲನೆಗೆ ಸಂಘಟಿತ ಪ್ರಯತ್ನ ಅವಶ್ಯವಾಗಿದೆ. ಈ ದಿಶೆಯಲ್ಲಿ ಯುವ ಸಮುದಾಯ ಮಹತ್ವದ ಪಾತ್ರವನ್ನು ವಹಿಸಬೇಕು ಎಂದು ಪ್ರಾಚಾರ್ಯ ಶ್ರೀನಿವಾಸ ನರಗುಂದ ಹೇಳಿದರು.

ನಗರದ ವಿದ್ಯಾ ಪ್ರಸಾರಕ ಮಂಡಳದ ಎಸ್.ಆರ್. ನರಸಾಪೂರ ಕಲಾ ಹಾಗೂ ಎಂ.ಬಿ. ಶಿರೂರ ವಾಣಿಜ್ಯ ಮಹಾವಿದ್ಯಾಲಯದ ಎನ್‌ಎಸ್‌ಎಸ್ ಘಟಕ 1 ಮತ್ತು 2 ಆಯೋಜಿಸಿದ್ದ 'ವಿಶ್ವ ಬಾಲ ಕಾರ್ಮಿಕ ವಿರೋಧಿ ದಿನದ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

ಇಂತಹ ಹಲವು ಸಾಮಾಜಿಕ ಸಮಸ್ಯೆ ಮತ್ತು ಅವುಗಳ ಪರಿಣಾಮಗಳ ಬಗ್ಗೆ ಜನರಲ್ಲಿ ಜಾಗೃತಿಯನ್ನು ಮೂಡಿಸುವಲ್ಲಿ ಶಿಕ್ಷಣ ಸಂಸ್ಥೆಗಳು ಮಹತ್ವದ ಪಾತ್ರವನ್ನು ವಹಿಸುತ್ತವೆ.

ಮಕ್ಕಳು ದೇಶದ ಆಶಾಕಿರಣ. ಅವರಿಗೆ ಉತ್ತಮ ಶಿಕ್ಷಣ ನೀಡುವುದರ ಜೊತೆಗೆ, ಉತ್ತಮ ಪರಿಸರ, ಆರೋಗ್ಯ, ರಕ್ಷಣೆ ನೀಡಿದಲ್ಲಿ ಅವರ ಸರ್ವತೋಮುಖ ಅಭಿವೃದ್ಧಿ ಸಾಧ್ಯ. ಅದರಿಂದ ದೇಶದಲ್ಲಿ ಪ್ರಗತಿಯನ್ನು ಸಾಧಿಸಬಹುದು ಎಂದು ನರಗುಂದ ಹೇಳಿದರು.

ಎನ್.ಎಸ್.ಎಸ್ ಅಧಿಕಾರಿ ಎಸ್.ಎಂ.ಹಡಪದ ಪ್ರತಿಜ್ಞಾವಿಧಿ ಬೋಧಿಸಿದರು. ಡಾ.ಎಸ್.ಎಸ್.ಹಂಗರಗಿ, ಎಂ.ಕೆ.ಗುಡೂರ,ಎ.ಎ. ಗಂಲ್,ಬಿ.ಡಿ.ಮಾದರ, ಎ.ಎಲ್.ಬಿಲ್ಲಾರ ಪಾಲ್ಗೊಂಡಿದ್ದರು.

# ಶಿಕ್ಷಣದಿಂದ ಸಮಾಜದ ಪ್ರಗತಿ



**ಬಾಗಲಕೋಟೆ:** ಕೀಳರಿಮೆಯಿಂದ ಹೊರಬಂದು ಶಿಕ್ಷಣವನ್ನು ಪಡೆದು ಅಭಿವೃದ್ಧಿ ಹೊಂದಿದಲ್ಲಿ ಮಾತ್ರ ಸಮಾಜದ ಅಭಿವೃದ್ಧಿ ಸಾಧ್ಯ ಎಂದು ಶಾಸಕ ಉಮೇಶ ಮೇಟಿ ಹೇಳಿದರು.

ತಾಲೂಕಿನ ಶಿರೂರ ಗ್ರಾಮದಲ್ಲಿ ಆಯೋಜಿಸಿದ್ದ ಡಾ.ಬಾಬಾಸಾಹೇಬ ಅಂಬೇಡ್ಕರ್ ಅವರ 135ನೇ ಜಯಂತ್ಯೋತ್ಸವ ಹಾಗೂ ಅಂಬೇಡ್ಕರ್ ಅವರ ಅರವಿನ ಮನೆ ವಿಚಾರಗೋಷ್ಠಿ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದ ಅವರು, ಡಾ. ಅಂಬೇಡ್ಕರ್ ದೇಶಕ್ಕೆ ಅತ್ಯಮೂಲ್ಯವಾದ ಸಂವಿಧಾನ ನೀಡಿ ತುಳಿತಕ್ಕೊಳಗಾದ ದೀನ ದಲಿತರ ಬಾಳಿಗೆ ಆಶಾಕಿರಣವಾಗಿದ್ದಾರೆ ಎಂದರು.

ಶಿರೂರ ಗ್ರಾಮದ ಸಮಗ್ರ ಅಭಿವೃದ್ಧಿಗೆ ಪ್ರಾಮಾಣಿಕ ಪ್ರಯತ್ನ ಮಾಡುವುದಾಗಿ ಉಮೇಶ ಮೇಟಿ ಹೇಳಿದರು.

ಮುಖ್ಯ ಅತಿಥಿಗಳಾಗಿ ಮಾತನಾಡಿದ ಸತ್ಯಶೋಧಕ ಸಂಘದ ರಾಜ್ಯಾಧ್ಯಕ್ಷ ಪರಶುರಾಮ ಮಹಾರಾಜನವರ ಇಂದು ದಲಿತ, ಅಲ್ಪಸಂಖ್ಯಾತ, ಹಿಂದುಳಿದ ವರ್ಗದ ಜನಾಂಗದವರ ಬದುಕನ್ನು ಹಸನಾಗಿಸಲು ಡಾ. ಅಂಬೇಡ್ಕರ್ ರಚಿಸಿದ ಸಂವಿಧಾನ ಮೂಲ ಕಾರಣ ಎಂದು ಹೇಳಿದರಲ್ಲದೇ, ಯುವಕರು ಡಾ. ಬಾಬಾಸಾಹೇಬ್ ಅವರು ಕಂಡ ಕನಸನ್ನು ನನಸು ಮಾಡಬೇಕಾದರೆ ಶಿಕ್ಷಣದಿಂದ ಮಾತ್ರ ಸಾಧ್ಯ ಎಂದು ಹೇಳಿದರು.

ಅಧ್ಯಕ್ಷತೆ ವಹಿಸಿ ಮಾತನಾಡಿದ ಮಲ್ಲಿಕಾರ್ಜುನ ಚಲವಾದಿ ಶಿರೂರ ಗ್ರಾಮದಲ್ಲಿ ಸಮುದಾಯದವರ ಬೇಡಿಕೆಗಳನ್ನು ಈಡೇರಿಸುವಂತೆ ಮನವರಿಕೆ ಮಾಡಿ, ಸಮಾಜ ಬಾಂಧವರು ಸಭೆ ಸಮಾರಂಭವನ್ನು ಏರ್ಪಡಿಸಲು ಸುಸಜ್ಜಿತವಾದ ಒಂದು ಸುಸಜ್ಜಿತವಾದ ಕಟ್ಟಡವನ್ನು ನಿರ್ಮಿಸಿಕೊಡಬೇಕು ಎಂದು ಶಾಸಕರಲ್ಲಿ ಮನವಿ ಮಾಡಿಕೊಂಡರು.

ಸಮಾರಂಭದಲ್ಲಿ ಗ್ರಾಮದ ಕಾಂಗ್ರೆಸ್ ಮುಖಂಡರಾದ ಸುರೇಶ ರಾಜೂರ, ರಂಗಪ್ಪ ಮಳ್ಳಿ, ಸಿದ್ದಪ್ಪ ಗಾಳಿ, ರಾಮನಗೌಡ ಮಾಚಾ, ಹಣಮಂತ ಆಡಿನ, ಸಿದ್ದಪ್ಪ ಮೇಳಿ, ಶಿದ್ದಪ್ಪ ಚಲವಾದಿ (ಕಾಳಿ), ಶಿದ್ರಾಮಪ್ಪ ಚಲವಾದಿ, ಸಿದ್ದಪ್ಪ ಸನಗಿನ, ಮಲ್ಲಪ್ಪ ಆಡಿನ, ಗಾಳೆಪ್ಪ ಹಲಗಿ, ಯತೀಶ ಮೇಟಿ, ಶಿದ್ದಪ್ಪ ಹಂಡರಗಲ್ಲ ಮತ್ತಿತರರು ಉಪಸ್ಥಿತರಿದ್ದರು.

ಧರ್ಮಣ್ಣ ಚಲವಾದಿ ನಿರೂಪಿಸಿದರು. ನ್ಯಾಯವಾದಿ ವಿವೇಕಾನಂದ ಚಂದರಗಿ ಸ್ವಾಗತಿಸಿ, ವಂದಿಸಿದರು. ಇದೇ ಸಂದರ್ಭದಲ್ಲಿ ನೂತನ ಶಾಸಕ ಉಮೇಶ ಮೇಟಿ ಅವರನ್ನು ಚಲವಾದಿ ಸಮಾಜದ ಪರವಾಗಿ ಸನ್ಮಾನಿಸಿದರು.

# ಸಂಕಷ್ಟದಲ್ಲಿರುವ ಕುಟುಂಬಕ್ಕೆ ಸಾಂತ್ವನ



**ಔರಾದ್:** ತಾಲೂಕಿನ ಶೆಂಬೆಳ್ಳಿ ಗ್ರಾಮದ ವೈಜಿನಾಥ ಮೇತ್ರೆ ಅವರ ಕುಟುಂಬದಲ್ಲಿ ಸಂಭವಿಸಿದ ದುರ್ಘಟನೆಯ ಹಿನ್ನೆಲೆಯಲ್ಲಿ ಮಂಗಳವಾರ ನಿವೃತ್ತ ಮುಖ್ಯಮಂತ್ರಿಗಳ ಅಪರ ಕಾರ್ಯದರ್ಶಿ ಹಾಗೂ ಕಾಂಗ್ರೆಸ್ ಮುಖಂಡ ಡಾ. ಭೀಮಸೇನರಾವ ಶಿಂಧೆ ಅವರು ಕುಟುಂಬ ಸದಸ್ಯರನ್ನು ಭೇಟಿ ಮಾಡಿ ಸಾಂತ್ವನ ಹೇಳಿದರು.

ಜೀವನೋಪಾಯಕ್ಕಾಗಿ ಹೈದರಾಬಾದ್‌ನಲ್ಲಿ ನೆಲೆಸಿದ್ದ ವೈಜಿನಾಥ ಮೇತ್ರೆ ಅವರ ಪತ್ನಿ ಇಂದುಮತಿ ಹಾಗೂ ಐವರು ಮಕ್ಕಳು ಮಾವಿನ ಹಣ್ಣು ಸೇವಿಸಿದ ಬಳಿಕ ಅಸ್ವಸ್ಥಗೊಂಡು ಆಸ್ಪತ್ರೆಗೆ ದಾಖಲಾಗಿದ್ದರು. ಚಿಕಿತ್ಸೆ ಫಲಕಾರಿಯಾಗದೆ ಪುತ್ರಿಯರಾದ ಭವನೇಶ್ವರಿ ಮತ್ತು ಸುಧಾರಾಣಿ ಮೃತಪಟ್ಟಿದ್ದು, ಉಳಿದ ಮೂವರು ಬಾಲಕಿಯರು ಚೇತರಿಸಿಕೊಂಡಿದ್ದಾರೆ.

ಕುಟುಂಬದ ನಿವಾಸಕ್ಕೆ ಭೇಟಿ ನೀಡಿದ ಡಾ. ಶಿಂಧೆ ಅವರು ವೈಯಕ್ತಿಕವಾಗಿ 50 ಸಾವಿರ ಆರ್ಥಿಕ ನೆರವು ನೀಡಿದರು. ಜೊತೆಗೆ ಕುಟುಂಬದ ಯುವತಿಯೊಬ್ಬರಿಗೆ ಇಲಾಖೆಯಲ್ಲಿ ಹೊರಗುತ್ತಿಗೆ ಆಧಾರದ ಮೇಲೆ ಉದ್ಯೋಗ ಕಲ್ಪಿಸುವುದಾಗಿ ಹಾಗೂ ಸರ್ಕಾರದ ವತಿಯಿಂದ ಮನೆ ಮಂಜೂರು ಮಾಡಿಸುವುದಾಗಿ ಭರವಸೆ ನೀಡಿದರು.

"ಈ ಘಟನೆ ನನಗೆ ತುಂಬಾ ನೋವುಂಟು ಮಾಡಿದೆ. ಇಬ್ಬರು ಮಕ್ಕಳನ್ನು ಕಳೆದುಕೊಂಡಿರುವ ಕುಟುಂಬ ತೀವ್ರ ದುಃಖದಲ್ಲಿದೆ. ಭಗವಂತನು ಕುಟುಂಬದವರಿಗೆ ಈ ನೋವನ್ನು ಸಹಿಸುವ ಶಕ್ತಿ ನೀಡಲಿ. ಯಾವುದೇ ಸಮಸ್ಯೆ ಎದುರಾದರೂ ನನ್ನನ್ನು ಸಂಪರ್ಕಿಸಿ. ನಾನು ಸದಾ ನಿಮ್ಮ ಕುಟುಂಬದೊಂದಿಗೆ ಇರುತ್ತೇನೆ," ಎಂದು ಧೈರ್ಯ ತುಂಬಿದರು. ಈ ಸಂದರ್ಭದಲ್ಲಿ ಸುಭಾಷ್ ನಾಗೂರ, ಚುನ್ನುಮೀಯ್ಯ ಶೆಂಬೆಳ್ಳಿ, ಸೂರ್ಯಕಾಂತ ಮಾಲೆ, ಬಂಡೆಪ್ಪ ಎಂಕೆಮೂರೆ ಸೇರಿದಂತೆ ಹಲವರು ಉಪಸ್ಥಿತರಿದ್ದರು.

## ಭೀಕರ ರಸ್ತೆ ಅಪಘಾತ: ಮೂವರು ಸ್ಥಳದಲ್ಲೇ ಸಾವು!



**ಚಡಚಣ:** ಟೆಂಪೋ ವಾಹನದ ಟಯರ್ ಸ್ಫೋಟಗೊಂಡು ನಿಯಂತ್ರಣ ತಪ್ಪಿ ಕೆಎಸ್‌ಆರ್‌ಟಿಸಿ ಬಸ್‌ಗೆ ಮುಖಾಮುಖಿ ಡಿಕ್ಕಿ ಹೊಡೆದ ಭೀಕರ ಅಪಘಾತದಲ್ಲಿ ಮೂವರು ಸ್ಥಳದಲ್ಲೇ ಮೃತಪಟ್ಟ ಘಟನೆ ಮಂಗಳವಾರ ಚಡಚಣ ಪೊಲೀಸ್ ಠಾಣಾ ವ್ಯಾಪ್ತಿಯಲ್ಲಿ ಸಂಭವಿಸಿದೆ.

ಝುಳಕಿ ಕಡೆಯಿಂದ ಚಡಚಣ ಮಾರ್ಗವಾಗಿ ಚಲಿಸುತ್ತಿದ್ದ ಟೆಂಪೋ ವಾಹನದ ಟಯರ್ ದಿಢೀರನೆ ಬ್ಲಾಸ್ಟ್ ಆಗಿದೆ. ಇದರಿಂದಾಗಿ ನಿಯಂತ್ರಣ ಕಳೆದುಕೊಂಡ ಟೆಂಪೋ, ಎದುರುಗಡೆಯಿಂದ ಬರುತ್ತಿದ್ದ ಕೆಎಸ್‌ಆರ್‌ಟಿಸಿ ಬಸ್‌ಗೆ ಜೋರಾಗಿ ಡಿಕ್ಕಿ ಹೊಡೆದಿದೆ. ಡಿಕ್ಕಿಯ ರಭಸಕ್ಕೆ ಎರಡೂ ವಾಹನಗಳು ಜಖಂಗೊಂಡಿದ್ದು, ಮೂವರು ದುರ್ದೈವಿಗಳು ಸ್ಥಳದಲ್ಲೇ ಪ್ರಾಣ ಕಳೆದುಕೊಂಡಿದ್ದಾರೆ.

ಅಪಘಾತದಲ್ಲಿ ಅಶೋಕ ಮಹಾದೇವ ಉಟಗಿ (ಟೆಂಪೋ ವಾಹನ ಚಾಲಕ, ಹಾವಿನಾಳ ಗ್ರಾಮ, ಚಡಚಣ ತಾಲೂಕು) ರಾಧಾಬಾಯಿ ಅಶೋಕ ಉಟಗಿ (ಅಶೋಕ ಉಟಗಿ ಅವರ ಪತ್ನಿ) ಹಣಮಂತ ಭಲವಾದಿ (ಕೆಎಸ್‌ಆರ್‌ಟಿಸಿ ಬಸ್ ಚಾಲಕ) ಘಟನಾ ಸ್ಥಳಕ್ಕೆ ವೃತ್ತ ನಿರೀಕ್ಷಕರಾದ ಪರುಶುರಾಮ ಮನಗೂಳಿ ಹಾಗೂ ಪಿಎಸ್‌ಐ ಸೋಮೇಶ ಗೆಜ್ಜಿ ಅವರು ಭೇಟಿ ನೀಡಿ ಪರಿಶೀಲನೆ ನಡೆಸಿದ್ದಾರೆ.

ಈ ಭೀಕರ ಅಪಘಾತದ ಕುರಿತು ಚಡಚಣ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದ್ದು, ಪೊಲೀಸರು ಮುಂದಿನ ಕಾನೂನು ಕ್ರಮ ಕೈಗೊಂಡಿದ್ದಾರೆ. ಮೂವರು ಜೀವ ಕಳೆದುಕೊಂಡಿರುವುದು ಸ್ಥಳೀಯವಾಗಿ ತೀವ್ರ ಶೋಕವನ್ನುಂಟು ಮಾಡಿದೆ.

## ವಂದೇ ಭಾರತ್ ರೈಲು ಸಂಪರ್ಕ ಕಲ್ಪಿಸಿ; ರಾಘವ್ ಅಣ್ಣಿಗೇರಿ..!

**ವಿಜಯಪುರ:** ಐತಿಹಾಸಿಕ ತಾಣಗಳಿಗೆ ಪ್ರಸಿದ್ಧಿ ಪಡೆದ ನಗರವಾದ ವಿಜಯಪುರಕ್ಕೆ ವಂದೇ ಭಾರತ್ ರೈಲು ಸಂಪರ್ಕ ಕಲ್ಪಿಸಬೇಕು ಎಂದು ಸ್ವಾಮಿ ವಿವೇಕಾನಂದ ಸೇನೆ ಅಧ್ಯಕ್ಷ ರಾಘವ್ ಅಣ್ಣಿಗೇರಿ ಆಗ್ರಹಿಸಿದ್ದಾರೆ.



ಕಳೆದ 30 ವರ್ಷಗಳಿಂದ ನಾವು ಕರ್ನಾಟಕದ ವಿಜಯಪುರ ಜಿಲ್ಲೆಯಿಂದ ಬಿಜೆಪಿ ಸಂಸದರನ್ನು ಆಯ್ಕೆ ಮಾಡುತ್ತಾ ಬಂದಿದ್ದೇವೆ. ನಮ್ಮಲ್ಲಿ ವಿಶ್ವದ ಎರಡನೇ ಅತಿ ದೊಡ್ಡ ಗುಮ್ಮಟವಾದ ಗೋಲಗುಂಬಜ್ ಸೇರಿದಂತೆ ಹಲವಾರು ಐತಿಹಾಸಿಕ ಸ್ಥಳಗಳಿವೆ. ಆದರೆ ಅತ್ಯಂತ ಕಳಪೆ ರೈಲ್ವೆ ಸೌಲಭ್ಯಗಳ ಕಾರಣದಿಂದಾಗಿ ಇಲ್ಲಿನ ಪ್ರವಾಸೋದ್ಯಮವನ್ನು ಸಂಪೂರ್ಣವಾಗಿ ನಿರ್ಲಕ್ಷಿಸಲಾಗಿದೆ. ಕಳಪೆ ರೈಲು ಸೌಕರ್ಯಗಳ ದೆಸೆಯಿಂದಾಗಿ ಕಳೆದ ಹಲವು ವರ್ಷಗಳಿಂದ ವಿದೇಶಿ ಪ್ರವಾಸಿಗರು ವಿಜಯಪುರವನ್ನು ಬಹುತೇಕ ಮರೆತುಬಿಟ್ಟಿದ್ದಾರೆ ಆದ್ದರಿಂದ ವಿಜಯಪುರಕ್ಕೆ ವಂದೇ ಭಾರತ್ ರೈಲು ಸೌಲಭ್ಯವನ್ನು ಒದಗಿಸಬೇಕು ಹಾಗೂ ದೆಹಲಿ ಸೇರಿದಂತೆ ದೇಶದ ಪ್ರಮುಖ ನಗರಗಳಿಗೆ ನೇರ ರೈಲು ಸಂಪರ್ಕವನ್ನು ಕಲ್ಪಿಸಬೇಕು ಎಂದು ಆಗ್ರಹಿಸಿದ್ದಾರೆ..!

## ಅನಧಿಕೃತ ಚಟುವಟಿಕೆಗಳಿಗೆ ಕಡಿವಾಣ ಹಾಕಲು ಒತ್ತಾಯ

**ಹುಮನಾಬಾದ್:** ಪಟ್ಟಣ ಹಾಗೂ ಸುತ್ತಮುತ್ತಲಿನ ಬಯಲು ಜಾಗಗಳಲ್ಲಿ ಹೆಚ್ಚುತ್ತಿರುವ ಅನಧಿಕೃತ ಚಟುವಟಿಕೆಗಳಿಂದ ಸಾರ್ವಜನಿಕರಿಗೆ ತೊಂದರೆ ಉಂಟಾಗುತ್ತಿದೆ ಎಂದು ಸ್ಥಳೀಯರು ಆತಂಕ ವ್ಯಕ್ತಪಡಿಸಿದ್ದಾರೆ.

ಸಾಯಿ ಚಿತ್ರಮಂದಿರ ದಿಂದ ಟೀಚರ್ಸ್ ಕಾಲೂನಿ, ರಸ್ತೆ ಸೇರಿದಂತೆ ಕೆಲವು ಖಾಲಿ ಜಾಗಗಳನ್ನು ಸಮಾಜ ವಿರೋಧಿ ಚಟುವಟಿಕೆಗಳಿಗೆ ಬಳಸಲಾಗುತ್ತಿದೆ ಎಂಬ ಆರೋಪಗಳು ಕೇಳಿಬರುತ್ತಿದ್ದು, ಇದರಿಂದ ಸಾರ್ವಜನಿಕರ ಭದ್ರತೆ ಹಾಗೂ ಶಾಂತಿ ಸುವ್ಯವಸ್ಥೆಗೆ ಧಕ್ಕೆಯಾಗುವ ಸಾಧ್ಯತೆ ಇದೆ ಎಂದು ನಾಗರಿಕರು ತಿಳಿಸಿದ್ದಾರೆ.

ಆದ್ದರಿಂದ ಸಂಬಂಧಿಸಿದ ಪುರಸಭೆ, ಪೊಲೀಸ್ ಇಲಾಖೆ ಹಾಗೂ ಜಿಲ್ಲಾಡಳಿತ ಅಧಿಕಾರಿಗಳು ಇಂತಹ ಸ್ಥಳಗಳ ಮೇಲೆ ನಿಗಾ ವಹಿಸಿ, ಅನಧಿಕೃತ ಚಟುವಟಿಕೆಗಳಲ್ಲಿ ತೊಡಗಿರುವವರ ವಿರುದ್ಧ ಕಠಿಣ ಕ್ರಮ ಕೈಗೊಳ್ಳಬೇಕು ಎಂದು ಸಾರ್ವಜನಿಕರು ಒತ್ತಾಯಿಸಿದ್ದಾರೆ.

ಜೊತೆಗೆ ಬಯಲು ಜಾಗಗಳ ಮಾಲೀಕರು ತಮ್ಮ ಜಾಗಗಳನ್ನು ಸ್ವಚ್ಛವಾಗಿಟ್ಟು, ಅನಗತ್ಯ ಚಟುವಟಿಕೆಗಳಿಗೆ ಅವಕಾಶ ನೀಡದಂತೆ ಎಚ್ಚರಿಕೆ ವಹಿಸಬೇಕು ಎಂದು ನಾಗರಿಕರು ಮನವಿ ಮಾಡಿದ್ದಾರೆ. ಸಾರ್ವಜನಿಕರ ಸುರಕ್ಷತೆ ಹಾಗೂ ಪಟ್ಟಣದ ಶಾಂತಿ ಕಾಪಾಡುವ ನಿಟ್ಟಿನಲ್ಲಿ ಅಧಿಕಾರಿಗಳು ತ್ವರಿತ ಕ್ರಮ ಕೈಗೊಳ್ಳಬೇಕೆಂಬ ಆಗ್ರಹ ವ್ಯಕ್ತವಾಗಿದೆ.

## ಲಂಚ: ಜೆಸ್ಕಾಂ ಸಿಬ್ಬಂದಿ ಅಮಾನತು

**ಗುರುಮಠಕಲ್:** ರೈತರೋರ್ವರಿಂದ ವಿದ್ಯುತ್ ಸಂಪರ್ಕ ಕಲ್ಪಿಸುವ ಸಂಬಂಧ ಲಂಚ ಸ್ವೀಕರಿಸಿದ ಆರೋಪದ ಹಿನ್ನೆಲೆಯಲ್ಲಿ ಜೆಸ್ಕಾಂನ ಕೊಂಕಲ್ ಉಪ ವಿಭಾಗದ ಪ್ರಭಾರ ಶಾಖಾಧಿಕಾರಿಯಾಗಿದ್ದ ಶ್ರೀ ಮಲ್ಲಿಕಾರ್ಜುನ ರಾಠೋಡ್ ಅವರನ್ನು ಅಮಾನತುಗೊಳಿಸಲಾಗಿದೆ.

ಸಾರ್ವಜನಿಕರಿಂದ ಬಂದ ದೂರಿನ ಆಧಾರದ ಮೇಲೆ ಇಲಾಖೆಯು ನಡೆಸಿದ ಪ್ರಾಥಮಿಕ ಪರಿಶೀಲನೆಯಲ್ಲಿ, ವಿದ್ಯುತ್ ಸಂಪರ್ಕ ನೀಡುವ ಸಂಬಂಧ ₹5,000 ಹಣವನ್ನು ಪಡೆದಿರುವ ಆರೋಪ ಕೇಳಿಬಂದಿದೆ. ಆರೋಪದ ಗಂಭೀರತೆಯನ್ನು ಪರಿಗಣಿಸಿ ಹಾಗೂ ಇಲಾಖಾ ವಿಚಾರಣೆಗೆ ಅನುಕೂಲವಾಗುವ ನಿಟ್ಟಿನಲ್ಲಿ ಗುಲ್ಬರ್ಗಾ ವಿದ್ಯುತ್ ಸರಬರಾಜು ಕಂಪನಿ ನಿಯಮಿತ (ಜೆಸ್ಕಾಂ) ಆಡಳಿತ ವಿಭಾಗವು ಅಮಾನತು ಆದೇಶ ಹೊರಡಿಸಿದೆ.

ಅಮಾನತು ಅವಧಿಯಲ್ಲಿ ಸಂಬಂಧಿತ ಸಿಬ್ಬಂದಿ ಇಲಾಖೆಯ ಅನುಮತಿ ಇಲ್ಲದೆ ಕಾರ್ಯಕ್ಷೇತ್ರ ತೊರೆಯಬಾರದು ಹಾಗೂ ವಿಚಾರಣೆಗೆ ಅಗತ್ಯವಿದ್ದಾಗ ಹಾಜರಾಗಬೇಕು ಎಂದು ಆದೇಶದಲ್ಲಿ ತಿಳಿಸಲಾಗಿದೆ.

ಜೆಸ್ಕಾಂ ಪ್ರಧಾನ ವ್ಯವಸ್ಥಾಪಕರು (ಆಡಳಿತ ಮತ್ತು ಮಾನವ ಸಂಪನ್ಮೂಲ ಅಭಿವೃದ್ಧಿ) ಅವರು ಜೂನ್ 11ರಂದು ಈ ಆದೇಶ ಹೊರಡಿಸಿದ್ದು, ಇಲಾಖಾ ತನಿಖೆ ಪೂರ್ಣಗೊಳ್ಳುವವರೆಗೆ ಅಮಾನತು ಜಾರಿಯಲ್ಲಿರಲಿದೆ.

# ಶಿಕ್ಷಣ, ಭವಿಷ್ಯದ ಜವಾಬ್ದಾರಿ ವಹಿಸಿಕೊಳ್ಳುವ ಭರವಸೆ

• ಮಲ್ಲಮ್ಮ ನುಡಿ ವಾರ್ತೆ ಔರಾದ್

ತಾಲೂಕಿನ ಶೆಂಬೆಳ್ಳಿ ಗ್ರಾಮದ ವೈಜಿನಾಥ ಮೇತ್ರೆ ಅವರ ಕುಟುಂಬದಲ್ಲಿ ಸಂಭವಿಸಿದ ದುರ್ಘಟನೆಯ ಹಿನ್ನೆಲೆಯಲ್ಲಿ ಮಾಜಿ ಸಚಿವರು ಹಾಗೂ ಶಾಸಕರಾದ ಪ್ರಭು ಬಿ.ಚವ್ಹಾಣ ಅವರು ಜೂನ್ 16ರಂದು ಕುಟುಂಬದ ಸದಸ್ಯರಿಗೆ ಭೇಟಿ ನೀಡಿ ಸಾಂತ್ವನ ಹೇಳಿದರು.

ಈ ಕುಟುಂಬವು ಜೀವನೋಪಾಯಕ್ಕಾಗಿ ಕಳೆದ 8–10 ವರ್ಷಗಳಿಂದ ಹೈದರಾಬಾದ್‌ನಲ್ಲಿ ನೆಲೆಸಿದೆ. ವೈಜಿನಾಥ ಮೇತ್ರೆ ಅವರ ಪತ್ನಿ ಹಾಗೂ ಐವರು ಮಕ್ಕಳು ಮಾವಿನ ಹಣ್ಣು ಸೇವಿಸಿದ ಬಳಿಕ ಅಸ್ವಸ್ಥಗೊಂಡು ಆಸ್ಪತ್ರೆಗೆ ದಾಖಲಾಗಿದ್ದರು. ಅವರಲ್ಲಿ ಪುತ್ರಿಯರಾದ ಭವನೇಶ್ವರಿ ಮತ್ತು ಸುಧಾರಾಣಿ ಚಿಕಿತ್ಸೆ ಫಲಕಾರಿಯಾಗದೆ ಮೃತಪಟ್ಟಿದ್ದು, ಉಳಿದ ಮೂವರು ಬಾಲಕಿಯರು ಚೇತರಿಸಿಕೊಂಡಿದ್ದಾರೆ.

ದುಃಖಿತ ಕುಟುಂಬದ ಮನೆಗೆ ಭೇಟಿ ನೀಡಿದ ಶಾಸಕ ಪ್ರಭು ಚವ್ಹಾಣ ಅವರು ಕುಟುಂಬದ ಎಲ್ಲ ಸದಸ್ಯರೊಂದಿಗೆ ಮಾತನಾಡಿ, ಘಟನೆಯ ಬಗ್ಗೆ ವಿವರಣೆ ಪಡೆದರು. ಮನೆಯವರು ಮುಕ್ತವಾಗಿ ಮಾಹಿತಿಯನ್ನು ಹಂಚಿಕೊಂಡರು. ಈ ಸಂದರ್ಭದಲ್ಲಿ ಶಾಸಕರು ಕುಟುಂಬಸ್ಥರಿಗೆ ಆಸ್ಪತ್ರೆಯ ಖರ್ಚು ವೆಚ್ಚ ಮತ್ತು ಕುಟುಂಬ ನಿರ್ವಹಣೆಗೆ ವೈಯಕ್ತಿಕ ಧನಸಹಾಯ ನೀಡಿದರು. ಉಳಿದ ಮೂವರು ಬಾಲಕಿಯರ ಶಿಕ್ಷಣ, ಮದುವೆ ಹಾಗೂ ಇತರೆ



ಅಗತ್ಯಗಳ ಜವಾಬ್ದಾರಿಯನ್ನು ವಹಿಸಿಕೊಂಡು ಸಂಪೂರ್ಣ ಸಹಕಾರ ನೀಡುವುದಾಗಿ ಭರವಸೆ ನೀಡಿದರು. ನಂತರ ಮಾತನಾಡಿದ ಅವರು, "ಈ ಘಟನೆ ತಿಳಿದು ನನಗೆ ತುಂಬಾ ನೋವಾಗಿದೆ. ಬಾಲಕಿಯರ ತಾಯಿಯ ಆರೋಗ್ಯವು ಚನ್ನಾಗಿರುತ್ತಿಲ್ಲವೆಂದು ಗೊತ್ತಾಗಿದೆ. ಇಬ್ಬರು ಮಕ್ಕಳನ್ನು ಕಳೆದುಕೊಂಡಿರುವ ಈ ಕುಟುಂಬ ತೀವ್ರ ದುಃಖದಲ್ಲಿದೆ. ಭಗವಂತನು ಕುಟುಂಬಸ್ಥರಿಗೆ ಈ ದುಃಖವನ್ನು ಸಹಿಸುವ ಶಕ್ತಿ ನೀಡಲಿ ಎಂದು ಪ್ರಾರ್ಥಿಸುತ್ತೇನೆ. ನಾನು ಸದಾ ನಿಮ್ಮ ಕುಟುಂಬದೊಂದಿಗೆ ಇರುತ್ತೇನೆ. ಯಾವುದೇ ಕಾರಣಕ್ಕೂ ಹೆದರಬೇಡಿ," ಎಂದು ಧೈರ್ಯ ತುಂಬಿದರು.

ತೀವ್ರ ಅಸ್ವಸ್ಥಗೊಂಡು ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆಯುತ್ತಿದ್ದ ಬಾಲಕಿಯ ಆರೋಗ್ಯದ ಕುರಿತು ವೈದ್ಯರಿಂದ ಮಾಹಿತಿ ಪಡೆದಿದ್ದೇನೆ. ಅಗತ್ಯ ಚಿಕಿತ್ಸೆಯನ್ನು ಸಮರ್ಪಕವಾಗಿ ನೀಡುವಂತೆ ಸೂಚಿಸಿದ್ದೇನೆ. ಕುಟುಂಬದ ಸದಸ್ಯರೊಂದಿಗೆ ದೂರವಾಣಿ ಮೂಲಕವೂ ಮಾತನಾಡಿ ಧೈರ್ಯ ತುಂಬುವ ಕೆಲಸ ಮಾಡಿದ್ದೇನೆ. ಮುಂದೆಯೂ ಉಳಿದ ಮಕ್ಕಳನ್ನು ವೈಯಕ್ತಿಕವಾಗಿ ದತ್ತು ಸ್ವರೂಪದಲ್ಲಿ ನೋಡಿಕೊಳ್ಳುತ್ತೇನೆ. ಅವರ ಶಿಕ್ಷಣ, ಮದುವೆ ಸೇರಿದಂತೆ ಎಲ್ಲ ಅಗತ್ಯ ಕಾರ್ಯಗಳಿಗೆ ನೆರವಾಗುತ್ತೇನೆ. ಹೈದರಾಬಾದ್‌ನಲ್ಲಿ ವಾಸವಾಗಿದ್ದ ಕಾರಣ ಕುಟುಂಬಕ್ಕೆ ಸ್ವಂತ ಮನೆ ಇಲ್ಲ ಎಂಬ ಮಾಹಿತಿ ದೊರೆತಿದ್ದು, ಅವರಿಗೆ ಸರ್ಕಾರದಿಂದ ಮನೆ ನಿರ್ಮಿಸಿಕೊಡಲು ಕ್ರಮ ವಹಿಸುವುದಾಗಿ ಹೇಳಿದರು.

ಈ ಸಂದರ್ಭದಲ್ಲಿ ಮುಖಂಡರಾದ ಶಿವಾಜಿರಾವ ಪಾಟೀಲ ಮುಂಗನಾಳ, ಧೊಂಡಿಬಾ ನರೋಟೆ, ರಾಮಶೆಟ್ಟಿ ಪನ್ನಾಳೆ, ಪ್ರಕಾಶ ಜೀರ್ಗೆ, ಸಚಿನ ರಾಠೋಡ, ಉದಯ ಸೋಲಾಪುರೆ, ಮಂಜು ಸ್ವಾಮಿ, ನಾಗಶೆಟ್ಟಿ ಗಾದಗೆ, ಬೀರಪ್ಪ ರಕ್ಷಾಳ, ಅಶೋಕ ಶೆಂಬೆಳ್ಳಿ, ಸಂಗಗೊಂಡ ಮೇತ್ರೆ, ಕಿರಣ ಪಾಟೀಲ, ಹಾವಗಿರಾವ ಶರಣ, ಸಚಿನ ಕಾಂಬಳೆ ಸೇರಿದಂತೆ ಮುಖಂಡರು ಹಾಗೂ ಗ್ರಾಮಸ್ಥರು ಉಪಸ್ಥಿತರಿದ್ದರು.

# ಸಾಧಕರಿಗೆ 'ಕನ್ನಡರತ್ನ' ಪ್ರಶಸ್ತಿ ಪ್ರದಾನ: ಗಾಯಕರಿಂದ 'ಸಂಗೀತ ರಸಸಂಜೆ'

• ಮಲ್ಲಮ್ಮ ನುಡಿ ವಾರ್ತೆ ಬೆಂಗಳೂರು

ಕನ್ನಡ ನಾಡು ನುಡಿ, ನೆಲ–ಜಲ ಭಾಷೆಯ ಬಗ್ಗೆ ಅರಿವು ಮೂಡಿಸಲು ಕನ್ನಡಸೇನೆ–ಕರ್ನಾಟಕ ರಾಜ್ಯ ವ್ಯಾಪಿ ಜಾಗೃತಿ ಅಭಿಯಾನ ಮತ್ತು ಸಮಾವೇಶ ನಡೆಸುತ್ತಿದ್ದು, ಇದೇ ತಿಂಗಳ 17ರಿಂದ 20 ರವರೆಗೆ ಕಲ್ಯಾಣ ಕರ್ನಾಟಕ ಗಡಿಭಾಗದಲ್ಲಿ ಕನ್ನಡ ಜಾಗೃತಿ ಜಾಥಾ ಹಮ್ಮಿಕೊಂಡಿದೆ.

ಕನ್ನಡಸೇನೆ–ಕರ್ನಾಟಕ ರಾಜ್ಯಾಧ್ಯಕ್ಷ, ಕರುನಾಡ ಕಾಯಕ ಕರ್ತೃ ಕೆ.ಆರ್.ಕುಮಾರ್ ನೇತೃತ್ವದಲ್ಲಿ ನಾಲ್ಕು ದಿನಗಳ ಕಾಲ ಕನ್ನಡ ಜಾಗೃತಿ ಅಭಿಯಾನ ಆಯೋಜಿಸಿದೆ. ಬೀದರ್ ಮತ್ತು ರಾಯಚೂರಿನಲ್ಲಿ ರಾಜ್ಯಮಟ್ಟದ ಬೃಹತ್ ಗಡಿನಾಡ ಜಾಗೃತ ಸಮಾವೇಶವನ್ನು ಸಂಘಟಿಸಿದೆ.

**ಸಾವಿರಾರು ಕಾರ್ಯಕರ್ತರಿಂದ ಜಾಥಾ**

ಜೂನ್ 18ರಂದು ಬೆಳಿಗ್ಗೆ ರಾಯಚೂರಿನ ಆರ್.ಟಿ.ಒ.ವೃತ್ತದಿಂದ ಜಿಲ್ಲಾಧಿಕಾರಿಗಳ ಕಚೇರಿಯವರೆಗೆ ಬೃಹತ್ ಜಾಥಾ ನಡೆಯಲಿದೆ. ರಾಜ್ಯಾದ್ಯಂತ ಸರ್ಕಾರಿ ಶಾಲೆಗಳನ್ನು ಉಳಿಸಿ, ಕನ್ನಡ ನಾಮಫಲಕ ಕಡ್ಡಾಯಗೊಳಿಸಿ ಹಾಗೂ ಕನ್ನಡಿಗರಿಗೆ ಉದ್ಯೋಗಕ್ಕಾಗಿ ಬೃಹತ್ ಕನ್ನಡ ಜಾಗೃತಿ ಜಾಥಾ ನಡೆಯಲಿದೆ ಎಂದು ರಾಜ್ಯ ಸಂಚಾಲಕ ತಿಮ್ಮಪ್ಪ ತಿಳಿಸಿದ್ದಾರೆ.

**ಹಕ್ಕೋತ್ತಾಯ ಮಂಡನೆ**

ಜಾಥಾ ವೇಳೆ, ಜಿಲ್ಲಾಧಿಕಾರಿಗಳ ಮೂಲಕ ಮುಖ್ಯಮಂತ್ರಿಗಳಿಗೆ ಬೇಡಿಕೆ ಪತ್ರ ಸಲ್ಲಿಸಲಾಗುವುದು. ಗಡಿನಾಡು ಕನ್ನಡಿಗರಿಗೆ ಹೆಚ್ಚಿನ ಉದ್ಯೋಗಾವಕಾಶ, ಕೃಷಿ ವಲಯಕ್ಕೆ ವಿಶೇಷ ಅನುದಾನ, ರೈತರ ಸಾಲಮನ್ನಾ ಹಾಗೂ ನಾರಾಯಣಪುರ ಬಲ ಮತ್ತು ಎಡದಂಡೆ ಕಾಲುವೆಗಳ ನೀರು ನಿರ್ವಹಣೆಗೆ ಕಾರ್ಮಿಕರ ನೇಮಕಾತಿ ಇತ್ಯಾದಿ ಹಕ್ಕೋತ್ತಾಯ ಮಾಡಲಾಗುವುದು.

**ಸಾಧಕರಿಗೆ ಪ್ರಶಸ್ತಿ ಪ್ರದಾನ**

ಜೂನ್ 19ರಂದು ಸಂಜೆ ರಾಯಚೂರಿನಲ್ಲಿ ರಾಜ್ಯ ಮಟ್ಟದ 2ನೇ ಗಡಿನಾಡು ಕನ್ನಡ ಜಾಗೃತಿ ಸಮಾವೇಶ ನಡೆಯಲಿದೆ. ಸಮಾವೇಶದ ವೇಳೆ ಜಿಲ್ಲೆಯಲ್ಲಿ ಅದ್ವಿತೀಯ ಸಾಧಕರಿಗೆ ರಾಜ್ಯ ಮಟ್ಟದ ಕನ್ನಡರತ್ನ ಪ್ರಶಸ್ತಿ ಪ್ರದಾನ ಮಾಡಲಾಗುವುದು ಎಂದು ಹೇಳಿದ್ದಾರೆ.

**ಕನ್ನಡ ಸಂಗೀತ ರಸಸಂಜೆ**

ಹಿರಿಯ ಚಿತ್ರನಟ ಟೆನ್ನಿಸ್ ಕೃಷ್ಣ ಸೇರಿದಂತೆ ನಾಡಿನ ಪ್ರಸಿದ್ಧ ಕಲಾವಿದರು ಸಮಾವೇಶದಲ್ಲಿ ಭಾಗಿಯಾಗಲಿದ್ದಾರೆ. ಇದೇ ಸಂದರ್ಭದಲ್ಲಿ ನಾಡಿನ ಖ್ಯಾತ ಗಾಯಕರಿಂದ ಕನ್ನಡ ಗೀತ ಗಾಯನ ಮತ್ತು ಸಂಗೀತ ರಸಸಂಜೆ ಕಾರ್ಯಕ್ರಮವೂ ಜರುಗಲಿದೆ.

ಈಗಾಗಲೇ ಕನ್ನಡ ಜಾಗೃತಿ ಈ ಸಮಾವೇಶದ ಯಶಸ್ವಿಗಾಗಿ ಕನ್ನಡಸೇನೆ ರಾಜ್ಯ ಉಪಾಧ್ಯಕ್ಷ ರವಿಸ್ವಾಮಿ ನಿರ್ಣಾ, ರಾಯಚೂರು ಜಿಲ್ಲಾಧ್ಯಕ್ಷ ಬಸವರಾಜ್, ಬೀದರ್ ಜಿಲ್ಲಾಧ್ಯಕ್ಷ ರಾಜಶೇಖರ್ ಮಂಗಲಪೇಟೆ ಮತ್ತಿತರ ಪದಾಧಿಕಾರಿಗಳು ಶ್ರಮಿಸುತ್ತಿದ್ದಾರೆ. ಕನ್ನಡಸೇನೆ ರಾಜ್ಯಾಧ್ಯಕ್ಷ ಕೆ. ಆರ್. ಕುಮಾರ್ ಅವರ ಹುಟ್ಟು ಹಬ್ಬದ ಪ್ರಯುಕ್ತ ಈ ಕಾರ್ಯಕ್ರಮ ಆಯೋಜಿಸಲಾಗಿದೆ ಎಂದು ರಾಜ್ಯ ಸಂಚಾಲಕ ತಿಮ್ಮಪ್ಪ ತಿಳಿಸಿದ್ದಾರೆ.

**ಶ್ರೀಶೈಲದಲ್ಲಿ ಮುಖಾಮುಖಿ**

**ಜೂನ್ 20ರಂದು ಶ್ರೀಶೈಲದಲ್ಲಿ ಹೊರನಾಡ ಕನ್ನಡಿಗರೊಂದಿಗೆ ಮುಖಾಮುಖಿ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ. ಈ ವೇಳೆ ಕನ್ನಡಪರ ಹಿರಿಯ ಹೋರಾಟಗಾರರು, ನಾಡಿನ ಬುದ್ಧಿಜೀವಿಗಳು, ಚಿಂತಕರು ಉಪಸ್ಥಿತರಿರುವರು. ಈ ಅಭಿಯಾನಕ್ಕಾಗಿ ಬೆಂಗಳೂರಿನಿಂದ ಸುಮಾರು 50ಕ್ಕೂ ಹೆಚ್ಚು ಕನ್ನಡಸೇನೆಯ ರಾಜ್ಯ ಪದಾಧಿಕಾರಿಗಳು ತೆರಳಲಿದ್ದಾರೆ.**

# ರಂಭಾಪುರಿ ಜಗದ್ಗುರುಗಳ ಆಶೀರ್ವಾದ ಪಡೆದ ಸಚಿವ ಖಂಡ್ರೆ

• ಮಲ್ಲಮ್ಮ ನುಡಿ ವಾರ್ತೆ ಬೀದರ್

ಜಿಲ್ಲೆಯ ಬಸವಕಲ್ಯಾಣ ತಾಲೂಕಿನ ತಡೋಳಾ ಶ್ರೀಮಠಕ್ಕೆ ಭೇಟಿ ನೀಡಿದ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಹಾಗೂ ಅಖಿಲ ಭಾರತ ವೀರಶೈವ ಮಹಾಸಭೆಯ ರಾಷ್ಟ್ರೀಯ ಅಧ್ಯಕ್ಷರಾದ ಶ್ರೀ ಈಶ್ವರ ಖಂಡ್ರೆ ಅವರು ಬಾಳೆಹೊನ್ನೂರು ಶ್ರೀಮದ್ ರಂಭಾಪುರಿ ವೀರಸಿಂಹಾಸನ ಮಹಾಸಂಸ್ಥಾನದ ಜಗದ್ಗುರು ಪ್ರಸನ್ನ ರೇಣುಕ ಡಾ. ವೀರಸೋಮೇಶ್ವರ ರಾಜದೇಶಿಕೇಂದ್ರ ಶಿವಾಚಾರ್ಯ ಭಗವತ್ಪಾದರ ದಿವ್ಯ ದರ್ಶನ ಪಡೆದು ಆಶೀರ್ವಾದ ಪಡೆದರು.

ಈ ಸಂದರ್ಭದಲ್ಲಿ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರಾಗಿ ಅಧಿಕಾರ ಸ್ವೀಕರಿಸಿದ ಹಿನ್ನೆಲೆಯಲ್ಲಿ ಜಗದ್ಗುರುಗಳು ಶ್ರೀ ಈಶ್ವರ ಖಂಡ್ರೆ ಅವರನ್ನು ಸನ್ಮಾನಿಸಿ ಶುಭ



ಹಾರೈಸಿದರು. ಆಶೀರ್ವಚನ ನೀಡಿದ ಜಗದ್ಗುರುಗಳು, ಜನಸೇವೆಗೆ ಸಮರ್ಪಿತವಾಗಿರುವ ಶ್ರೀ ಈಶ್ವರ ಖಂಡ್ರೆ ಅವರು ಮುಂದಿನ ದಿನಗಳಲ್ಲಿ ಇನ್ನಷ್ಟು ಉನ್ನತ ಸ್ಥಾನಗಳನ್ನು ಅಲಂಕರಿಸಲಿದ್ದು, ಭವಿಷ್ಯದಲ್ಲಿ ಕರ್ನಾಟಕ ರಾಜ್ಯದ ಮುಖ್ಯಮಂತ್ರಿಯಾಗುವ ಯೋಗ್ಯತೆ ಮತ್ತು ಸಾಮರ್ಥ್ಯ ಹೊಂದಿದ್ದಾರೆ ಎಂದು ವಿಶ್ವಾಸ ವ್ಯಕ್ತಪಡಿಸಿದರು.

ಕಾರ್ಯಕ್ರಮದಲ್ಲಿ ಪೂಜ್ಯ ಶ್ರೀ ರಾಜೇಶ್ವರ ಶಿವಾಚಾರ್ಯರು (ಮೆಹಕರ್), ಪೂಜ್ಯ ವೀರುಪಾಕ್ಷ ಶಿವಾಚಾರ್ಯರು (ಹುಡಗಿ), ಪೂಜ್ಯ ಹಲಬರ್ಗಾ ಶಿವಣಿ ಶ್ರೀಗಳು ಸೇರಿದಂತೆ ಜಿಲ್ಲೆಯ ವಿವಿಧ ಮಠಗಳ ಪೂಜ್ಯರು ಹಾಗೂ ಮಠಾಧೀಶರು ಉಪಸ್ಥಿತರಿದ್ದು, ಶ್ರೀ ಈಶ್ವರ ಖಂಡ್ರೆ ಅವರಿಗೆ ಆಶೀರ್ವಾದ ನೀಡಿದರು.

ಈ ಸಂದರ್ಭದಲ್ಲಿ ಮಾತನಾಡಿದ ಶ್ರೀ ಈಶ್ವರ ಖಂಡ್ರೆ ಅವರು, ಪೂಜ್ಯರ ಆಶೀರ್ವಾದ ಮತ್ತು ಮಾರ್ಗದರ್ಶನವು ಜನಸೇವೆಯಲ್ಲಿ ಮತ್ತಷ್ಟು ಜವಾಬ್ದಾರಿಯಿಂದ ಕಾರ್ಯನಿರ್ವಹಿಸಲು ಪ್ರೇರಣೆ ನೀಡುತ್ತದೆ ಎಂದು ತಿಳಿಸಿ, ಎಲ್ಲ ಪೂಜ್ಯರಿಗೆ ಕೃತಜ್ಞತೆ ಸಲ್ಲಿಸಿದರು.

# ಮರೆಯಾಗುತ್ತಿರುವ ಮಾನವೀಯ ಮೌಲ್ಯಗಳು



ಜನ–ಜಾಗೃತಿ

● ಎಂ.ಪಿ ಎಂ.ಕೊಟ್ರಯ್ಯ
ಹೂವಿನ ಹಡಗಲಿ

ಇಂದು ಹಿರಿಯರಾಗಿರುವವರು ನಿನ್ನೆ ನಮ್ಮಂತೆಯೇ ಯುವಕರಾಗಿದ್ದವರು. ಇಂದು ಯುವಕರಾಗಿರುವ ನಾವು ನಾಳೆ ಹಿರಿಯರಾಗಲಿದ್ದೇವೆ ಎಂಬುದು ಪ್ರಕೃತಿಯ ನಿಯಮ. ನಾವು ಇಂದು ನಮ್ಮ ಹಿರಿಯರನ್ನು ಹೇಗೆ ನಡೆಸಿಕೊಳ್ಳುತ್ತೇವೆಯೋ, ನಾಳೆ ನಮ್ಮ ಮುಂದಿನ ಪೀಳಿಗೆಯೂ ನಮ್ಮನ್ನು ಹಾಗೆಯೇ ನಡೆಸಿಕೊಳ್ಳುತ್ತದೆ. ಹಿರಿಯರ ಮುಖದ ಮೇಲಿನ ಸುಕ್ಕುಗಳು ಕೇವಲ ವಯಸ್ಸಿನ ಗುರುತಲ್ಲ, ಅವು ಕಷ್ಟಪಟ್ಟು ಬದುಕಿದ ಅನುಭವದ ರೇಖೆಗಳು. ಅವರ ಅನುಭವಕ್ಕೆ ಗೌರವ ನೀಡೋಣ, ಅವರ ಶರತ್ಕಾಲದ ಬದುಕಿಗೆ ಪ್ರೀತಿಯ ಆಸರೆಯಾಗುವ ಮಾನವೀಯತೆ ಅರಿಯ ಬೇಕಿದೆ.

ಪ್ರತಿ ವರ್ಷ ಜೂನ್ 15ರಂದು ಜಾಗತಿಕವಾಗಿ ಹಿರಿಯ ನಾಗರಿಕರ ದೌರ್ಜನ್ಯ ವಿರೋಧಿ ಜಾಗೃತಿ ದಿನವನ್ನಾಗಿ ಆಚರಿಸಲಾಗುತ್ತದೆ. ತಲೆಮಾರುಗಳ ಕೊಂಡಿಯಾಗಿ, ಅನುಭವದ ಗಣಿಯಾಗಿರುವ ನಮ್ಮ ಹಿರಿಯರನ್ನು ಗೌರವದಿಂದ ನೋಡುವುದು ಕೇವಲ ಒಂದು ಸಂಸ್ಕಾರವಲ್ಲ, ಅದು ನಮ್ಮ ಪರಮ ಧರ್ಮ. ಆದರೆ ಇಂದಿನ ಆಧುನಿಕ ಸಮಾಜದಲ್ಲಿ ಹಿರಿಯರ ಸ್ಥಿತಿ ಏನಾಗಿದೆ...ಏನಾಗುತ್ತಿದೆ? ನಿಜಕ್ಕೂ ಕಳವಳಕಾರಿ ಸಂಗತಿ. ಈ ಕುರಿತು ನಾವು ಆತ್ಮಾವಲೋಕನ ಮಾಡಿಕೊಳ್ಳಬೇಕಾಗುದೆ.

**ಪ್ರಮುಖ ಅಂಶಗಳು ಇಲ್ಲಿವೆ:**

**• ಮರೆಯಾಗುತ್ತಿರುವ ಮಾನವೀಯ ಮೌಲ್ಯಗಳು**

ಒಂದು ಕಾಲದಲ್ಲಿ ಹಿರಿಯರ ಮಾತು ವೇದವಾಕ್ಯವಾಗಿತ್ತು. ಅವರ ನಡೆ–ನುಡಿಗಳು ಇಡೀ ಕುಟುಂಬಕ್ಕೆ ಮಾರ್ಗದರ್ಶನ ನೀಡುತ್ತಿದ್ದವು. ಆದರೆ ಇಂದು ಸಮಾಜದಲ್ಲಿ ಮಾನವೀಯ ಮೌಲ್ಯಗಳು ಕ್ಷೀಣಿಸುತ್ತಿವೆ. ಹಿರಿಯರನ್ನು ಮನೆಯ ಯಜಮಾನರೆಂದು ನೋಡುವ ಬದಲು, ಅವರ ಮೇಲೆ ಪ್ರೀತಿ, ಗೌರವ ತೋರಿಸುವ ಭಾವನೆಗಳು ಕಡಿಮೆಯಾಗುತ್ತಿವೆ. ಅವರನ್ನು ಕೇವಲ 'ಹಳೆಯ ತಲೆಮಾರು' ಎಂದು ಮೂಲೆಗುಂಪು ಮಾಡಲಾಗುತ್ತಿದೆ. ಎಲ್ಲರ ತಾತ್ಸಾರ ಮನೋಭಾವ

ನಮ್ಮನ್ನು ಬೆಳೆಸಲು ತಮ್ಮ ಇಡೀ ಜೀವನವನ್ನೇ ಧಾರೆ ಎರೆದ ಪೋಷಕರನ್ನು, ವಯಸ್ಸಾದಾಗ ಮಕ್ಕಳು ತಾತ್ಸಾರದಿಂದ ನೋಡುವುದು ಇಂದಿನ ಅತಿ ದೊಡ್ಡ ದುರಂತ.ಮನೆಯ ನಿರ್ಧಾರಗಳಲ್ಲಿ ಅವರ ಅಭಿಪ್ರಾಯಗಳನ್ನು ನಿರ್ಲಕ್ಷಿಸುವುದು.ಅವರು ಮಾತನಾಡುವಾಗ "ನಿಮಗೇನು ಗೊತ್ತು?" ಎಂದು ಹಗುರವಾಗಿ ಮಾತನಾಡುವುದು.ವಯೋಸಹಜ ಕಾಯಿಲೆಗಳಿಂದ ಬಳಲುತ್ತಿರುವಾಗ ಅವರನ್ನು ಹೊರೆ ಎಂದು ಭಾವಿಸುವುದು. ಮಕ್ಕಳ ಈ ವರ್ತನೆ ಹಿರಿಯರಲ್ಲಿ ತೀವ್ರ ಮಾನಸಿಕ ನೆಮ್ಮದಿಯನ್ನು ಕಸಿದುಕೊಳ್ಳುತ್ತದೆ ಮತ್ತು ಅವರನ್ನು ಒಂಟಿತನಕ್ಕೆ ತಳ್ಳುತ್ತದೆ.

ಪ್ರಾಚೀನತೆ ಮತ್ತು ಇಂದಿನ ಕಹಿ ವಾಸ್ತವದ ವ್ಯತ್ಯಾಸ. ನೋಡುವುದಾದರೆ, ಅಂದು..ಅವಿಭಕ್ತ ಕುಟುಂಬಗಳು ಹೆಚ್ಚಾಗಿದ್ದವು, ಹಿರಿಯರೇ ಮನೆಯ ಕೇಂದ್ರಬಿಂದು.

ಹಿರಿಯರ ಅನುಭವಕ್ಕೆ ಅಪಾರ ಗೌರವ ಮತ್ತು ಮನ್ನಣೆ ಇರುತ್ತಿತ್ತು.ವೃದ್ಧಾಪ್ಯದಲ್ಲಿ ಅಜ್ಜ–ಅಜ್ಜಿಯಂದಿರು ಮೊಮ್ಮಕ್ಕಳೊಂದಿಗೆ ಕಾಲ ಕಳೆಯುತ್ತಿದ್ದರು. ಇಂದೇನಾಗುದೆ..? ವಿಭಕ್ತ ಕುಟುಂಬಗಳು (ನ್ಯೂಕ್ಲಿಯರ್ ಫ್ಯಾಮಿಲಿ) ಹೆಚ್ಚಾಗಿವೆ, ಹಿರಿಯರಿಗೆ ಜಾಗವಿಲ್ಲ.ಹಿರಿಯರ ಆಲೋಚನೆಗಳು 'ಹಳಬರ ಕಾಲದ್ದು' ಎಂದು ತಳ್ಳಿಹಾಕಲಾಗುತ್ತದೆ. ವೃದ್ಧಾಶ್ರಮಗಳ ಸಂಖ್ಯೆ ಹೆಚ್ಚಾಗುತ್ತಿದ್ದು, ಇಂದು ಹಿರಿಯರು ಜೀವಿಗಳು ಒಂಟಿಯಾಗುತ್ತಿದ್ದಾರೆ.

ಡಿಜಿಟಲ್ ಯುಗದಲ್ಲಿ ಹಿರಿಯ ನಾಗರಿಕರ ಸಮಸ್ಯೆಗಳನ್ನ ನೋಡುವುದಾದರ ತಂತ್ರಜ್ಞಾನದ ಅರಿವಿಲ್ಲದಿರುವುದು: ಸ್ಮಾರ್ಟ್‌ಫೋನ್‌ಗಳು, ಆನ್‌ಲೈನ್ ಬ್ಯಾಂಕಿಂಗ್, ಆಪ್‌ಗಳ ಬಳಕೆ ಹಿರಿಯರಿಗೆ ಬೇಗ ಅರ್ಥವಾಗುವುದಿಲ್ಲ. ಇದನ್ನು ಕಲಿಸಿಕೊಡುವ ತಾಳ್ಮೆ ಇಂದಿನ ಯುವ ಪೀಳಿಗೆಗೆ ಇಲ್ಲದಂತಾಗಿದೆ.ಡಿಜಿಟಲ್ ವಂಚನೆಗಳು: ತಂತ್ರಜ್ಞಾನದ ಬಗ್ಗೆ ಮುಗ್ಧತೆ ಇರುವ ಹಿರಿಯರನ್ನು ಗುರಿಯಾಗಿಸಿಕೊಂಡು ಸೈಬರ್ ವಂಚನೆಗಳು ಹೆಚ್ಚುತ್ತಿವೆ.

**ಭಾವನಾತ್ಮಕ ದೂರ:** ಮನೆಯಲ್ಲಿದ್ದರೂ ಎಲ್ಲರೂ ಮೊಬೈಲ್‌ನಲ್ಲೇ ಮುಳುಗಿರುವುದರಿಂದ, ಹಿರಿಯರೊಂದಿಗೆ ಮಾತನಾಡಲು ಯಾರೂ ಸಮಯ ಒದಗಿಸುತ್ತಿಲ್ಲ. ಇದರಿಂದ ಅವರಲ್ಲಿ ತೀವ್ರ ಒಂಟಿತನ ಕಾಡುತ್ತಿದೆ.

ಪರಿಹಾರಗಳಿಲ್ಲವೇ..? ಇವೆ ಮನಸ್ಸಿದ್ದರೆ ಮಾರ್ಗ ಎಂಬಂತೆ, ಹಿರಿಯರ ಮೇಲಿನ ದೌರ್ಜನ್ಯ ಮತ್ತು ತಾತ್ಸಾರವನ್ನು ತಡೆಯಲು ನಾವೆಲ್ಲರೂ ಕೆಲವು ಪ್ರಮುಖ ಬದಲಾವಣೆಗಳನ್ನು ರೂಢಿಸಿಕೊಳ್ಳಬೇಕಿದೆ:

- ಹಿರಿಯರಿಗೆ ದುಬಾರಿ ಉಡುಗೊರೆಗಳಿಗಿಂತ ನಿಮ್ಮ ಆಪ್ತತೆಯ ಎರಡು ಮಾತುಗಳು ಮುಖ್ಯ. ದಿನದಲ್ಲಿ ಕನಿಷ್ಠ ಅರ್ಧ ಗಂಟೆಯನ್ನಾದರೂ ಅವರಿಗಾಗಿ ಮೀಸಲಿಡಿ.
- ಡಿಜಿಟಲ್ ಜಗತ್ತಿನಲ್ಲಿ ಅವರು ಸ್ವಾವಲಂಬಿಗಳಾಗಲು ಮೊಬೈಲ್ ಬಳಕೆಯನ್ನು ಪ್ರೀತಿಯಿಂದ ಕಲಿಸಿಕೊಡಿ.
- ಮನೆಯಲ್ಲಿ ಮಕ್ಕಳಿಗೆ ಅಜ್ಜ–ಅಜ್ಜಿಯಂದಿರನ್ನು ಗೌರವಿಸುವುದನ್ನು ಸಣ್ಣ ವಯಸ್ಸಿನಿಂದಲೇ ಕಲಿಸಬೇಕು. ತಂದೆ–ತಾಯಿಗಳು ತಮ್ಮ ಹೆತ್ತವರನ್ನು ನಡೆಸಿಕೊಳ್ಳುವ ರೀತಿಯೇ ಮಕ್ಕಳಿಗೆ ಮೊದಲ ಪಾಠ.
- ಹಿರಿಯರ ಆರೋಗ್ಯದ ಕಡೆಗೆ ವಿಶೇಷ ಗಮನ ಹರಿಸಿ. ಸರ್ಕಾರ ಹಿರಿಯ ನಾಗರಿಕರಿಗಾಗಿ ತಂದಿರುವ ಕಾನೂನುಗಳು ಮತ್ತು ಹಕ್ಕುಗಳ ಬಗ್ಗೆ ಜಾಗೃತಿ ಮೂಡಿಸ ಬೇಕಿದೆ.

ಅಭಿವಾದನಶೀಲಸ್ಯ ನಿತ್ಯಂ ವೃದ್ಧೋಪಸೇವಿನಃ॥

ಚತ್ವಾರಿ ತಸ್ಯ ವರ್ಧಂತೇ ಆಯುರ್ವಿದ್ಯಾ ಯಶೋ ಬಲಮ್॥ ಮನುಶೃತಿಯ ಈ ಶ್ಲೋಕವು

ಯಾರು ನಿತ್ಯವೂ ಹಿರಿಯರಿಗೆ ಪ್ರಣಾಮ ಮಾಡುತ್ತಾರೋ ವಯಸ್ಸಿನಲ್ಲಿ ಹಾಗೂ ಜ್ಞಾನದಲ್ಲಿ ಹಿರಿಯರಾದವರ ಸೇವೆ ಮಾಡುತ್ತಾರೋ, ಅಂತವರ ಜೀವನದಲ್ಲಿ ಆಯಸ್ಸು ವಿದ್ಯೆ ಕೀರ್ತಿ ಮತ್ತು ಬಲ ವೃದ್ಧಿ ಎಂದಿರುವರು.ದನ್ನ ಅರ್ಥೈಸಿಕೊಂಡು ನಾವೂ ಅನುಸರಿಸೋಣ, ನಮ್ಮ ಮುಂದಿನ ಪೀಳಿಗೆಗೂ ಹಿರಿಯರನ್ನ ಗೌರವಿಸುವ ಭಾವನೆಗಳನ್ನು ಬೆಳಸೋಣ.

Printed, Published and Owned by: Ramesh Reddy and Printed at Metropolitan Media Company Ltd., Plot No.224, in Sy.No.41/2, 41/B & 42, Kapnoor 2nd stage, Industrial Area, Kalburagi-585104. Published at Sy.No. 466, TMC No. 22-405, First Floor, Gada Complex, Opp. Inspection Bungalow, Humnabad-585330.Editor: Ramesh Reddy, Office Ph. No: +91 9449732000, Telephone Number:08483200215
PRGI NO. 120927
(RNINO:KARKAN/2011/48371)